ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ    Postal Reg. No. BDR/054/2026-2027 Email: mallammanudi@gmail.com  E-paper: www.mallammanudi.in

# ಮಲ್ಲಮ್ಮ ನುಡಿ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸತ್ಯಮೇವ ಜಯತೆ

ಸಂಪಾದಕರು: **ರಮೇಶರೆಡ್ಡಿ** | **9448 604450**

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 121 ಸಂಚಿಕೆ- 121 | PAGE-8 ಪುಟ-8 | ಶುಕ್ರವಾರ 20.06.2025 | RS.2/- ಬೆಲೆ 2/-

# ಅಲ್ಪಸಂಖ್ಯಾತರಿಗೆ ವಿವಿಧ ವಸತಿ ಯೋಜನೆಯಲ್ಲಿ ಶೇ.5 ರಷ್ಟು ಮೀಸಲಾತಿ ಹೆಚ್ಚಳ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಜೂ.19:ರಾಜ್ಯಸರ್ಕಾರ ಗುತ್ತಿಗೆ ಬೆನ್ನಲ್ಲೇ ಅಲ್ಪಸಂಖ್ಯಾತರಿಗೆ ಮತ್ತೊಂದು ಯೋಜನೆಯಲ್ಲಿ ಮೀಸಲಾತಿ ಹೆಚ್ಚಳ ಮಾಡಿದ್ದು, ವಿವಿಧ ವಸತಿ ಯೋಜನೆಗಳ ಅಡಿಯಲ್ಲಿ ಅಲ್ಪಸಂಖ್ಯಾತರಿಗೆ ಮೀಸಲಾತಿಯನ್ನು ಶೇಕಡಾ 10 ರಿಂದ 15 ಕ್ಕೆ ಹೆಚ್ಚಿಸಲು ಸಚಿವ ಸಂಪುಟ ಸಭೆ ಗುರುವಾರ ಅನುಮೋದನೆ ನೀಡಿದೆ.ಇಂದು ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆಸಿದ ಸಚಿವ ಸಂಪುಟ ಸಭೆಯಲ್ಲಿ, ರಾಜ್ಯದ ವಿವಿಧ ವಸತಿ ಯೋಜನೆಗಳ ಅಡಿಯಲ್ಲಿ ಅಲ್ಪಸಂಖ್ಯಾತರಿಗೆ ಮೀಸಲಾತಿ ಹೆಚ್ಚಿಸುವ ಮಹತ್ವದ ನಿರ್ಧಾರ ತೆಗೆದುಕೊಳ್ಳಲಾಗಿದೆ.ಸಂಪುಟ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್ ಕೆ ಪಾಟೀಲ್, "ರಾಜ್ಯಾದ್ಯಂತ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ವಸತಿ ಇಲಾಖೆಯು ಜಾರಿಗೆ ತರುತ್ತಿರುವ ವಿವಿಧ ವಸತಿ ಯೋಜನೆಯಲ್ಲಿ, ಅಲ್ಪಸಂಖ್ಯಾತರ ಮೀಸಲಾತಿಯನ್ನು ಶೇಕಡಾ 10 ರಿಂದ 15 ಕ್ಕೆ ಹೆಚ್ಚಿಸಲು ನಿರ್ಧರಿಸಲಾಗಿದೆ" ಎಂದು ತಿಳಿಸಿದರು.

ರಾಜ್ಯದ ಅಲ್ಪಸಂಖ್ಯಾತರಲ್ಲಿ ಹೆಚ್ಚಿನ ಸಂಖ್ಯೆಯ ಜನ ವಸತಿ ರಹಿತರಾಗಿದ್ದು, ಇದನ್ನು ಗಮನಿಸಿದ ನಂತರ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಅವರು ಹೇಳಿದ್ದಾರೆ.ಸಾಚಾರ್ ಕಮಿಟಿ ವರದಿಯನ್ನೂ ಕೂಡ ಈಗ ಕೇಂದ್ರ ಪರಿಗಣಿಸುತ್ತಿದೆ. ಕೇಂದ್ರದ ಸೂಚನೆಗಳನ್ನು ಗಮನಿಸಿ ಸಾಮಾಜಿಕ ನ್ಯಾಯದ ಪಾಲನೆ ಮಾಡುತ್ತಿದ್ದೇವೆ. ನಿಯಮಗಳಿಗೆ ಕ್ಯಾಬಿನೆಟ್ ಅನುಮೋದನೆ ಸಾಕು. ಇದು ಎಲ್ಲ ಅಲ್ಪಸಂಖ್ಯಾತರಿಗೂ ಅನ್ವಯವಾಗುತ್ತದೆ. ಮುಸ್ಲಿಂ, ಜೈನರು, ಕ್ರಿಶ್ಚಿಯನ್ ಎಲ್ಲರೂ ಕೂಡ ಇದರಲ್ಲಿ ಒಳಗೊಳ್ಳುತ್ತಾರೆ. ಇದಕ್ಕೆ ಬೇಕಾದ ಹಲವು ಅಧ್ಯಯನ ವರದಿಗಳೂ ಕೂಡ ಇವೆ. ಬಡವರಿಗೆ ಮನೆ ಮಾಡಿಕೊಡುವುದರಲ್ಲಿ ರಾಜಕೀಯ ವಾಸನೆ ಹುಡುಕುವವರಿಗೆ ನಾವು ಉತ್ತರ ಕೊಡಲ್ಲ. ವಸತಿ ಹೀನರಿಗೆ ಹೆಚ್ಚಿನ ಸೌಲಭ್ಯಗಳನ್ನು ಕೊಡಬೇಕು ಎಂಬುದು ಸರ್ಕಾರದ ಉದ್ದೇಶ ಎಂದು ಎಂದು ಹೇಳಿದರು.

ಇನ್ನು ಕಳೆದ ಜೂನ್ 4 ರಂದು ಸಂಜೆ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಕಾಲ್ತುಳಿತ ಸಂಭವಿಸಿ 11 ಜನ ಸಾವನ್ನಪ್ಪಿದ ನಂತರ ಜನಸಂದಣಿ ನಿಯಂತ್ರಣ ಮತ್ತು ನಿರ್ವಹಣೆಗೆ ಸಂಬಂಧಿಸಿದ ಮಸೂದೆ ಮಂಡಿಸುವ ಬಗ್ಗೆ ಮುಂದಿನ ಸಂಪುಟ ಸಭೆಯಲ್ಲಿ ಚರ್ಚಿಸುವ ಸಾಧ್ಯತೆಯಿದೆ ಎಂದು ಎಚ್.ಕೆ. ಪಾಟೀಲ್ ತಿಳಿಸಿದ್ದಾರೆ.

"ಇಂದು ನಾಲ್ಕು ಮಸೂದೆಗಳನ್ನು ಪ್ರಸ್ತಾಪಿಸಲಾಯಿತು – ಕರ್ನಾಟಕ ಜನಸಂದಣಿ ನಿಯಂತ್ರಣ, ಕಾರ್ಯಕ್ರಮಗಳಲ್ಲಿ ಜನಸಂದಣಿಯನ್ನು ನಿರ್ವಹಿಸುವುದು ಮತ್ತು ಸಾಮೂಹಿಕ ಸಭೆ ನಡೆಯುವ ಸ್ಥಳ ಮಸೂದೆ, 2025; ಕರ್ನಾಟಕ ರೋಹಿತ್ ವೇಮುಲಾ ಮಸೂದೆ, 2025; ಕರ್ನಾಟಕ ತಪ್ಪು ಮಾಹಿತಿ, ನಕಲಿ ಸುದ್ದಿ ನಿಷೇಧ ಮಸೂದೆ, 2025; ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ ತಡೆಗಟ್ಟುವಿಕೆ ಮಸೂದೆ, 2025" ಎಂದು ಎಚ್ ಕೆ ಪಾಟೀಲ್ ಸಂಪುಟ ಸಭೆಯ ನಂತರ ಸುದ್ದಿಗಾರರಿಗೆ ತಿಳಿಸಿದರು.

"ಈ ಮಸೂದೆಗಳನ್ನು ಇಂದಿನ ಸಭೆಯಲ್ಲಿ ಪ್ರಸ್ತಾಪಿಸಲಾಗಿದೆ. ಕೆಲವು ಮಸೂದೆಗಳ ಕುರಿತು ವಿವರವಾದ ಚರ್ಚೆಯ ಅಗತ್ಯವಿದೆ ಎಂದು ನಾನು ಉಲ್ಲೇಖಿಸಿದ್ದೇನೆ. ಮುಂದಿನ ಸಂಪುಟ ಸಭೆಗೂ ಮುನ್ನ ಸಂಬಂಧಪಟ್ಟ



ಸಚಿವರು ಸಭೆ ಸೇರಿ ಚರ್ಚಿಸಿ ಮಸೂದೆಗಳನ್ನು ಸಂಪುಟದ ಮುಂದೆ ತರಬೇಕೆಂದು ನಿರ್ಧರಿಸಲಾಗಿದೆ" ಎಂದು ಅವರು ಹೇಳಿದರು.

ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಜಾತಿ ಆಧಾರಿತ ತಾರತಮ್ಯವನ್ನು ಎದುರಿಸುವ ವಿದ್ಯಾರ್ಥಿಗಳಿಗೆ 1 ಲಕ್ಷ ರೂ.ವರೆಗೆ ಪರಿಹಾರ ಮತ್ತು ತಪ್ಪಿತಸ್ಥರಿಗೆ ಒಂದು ವರ್ಷ ಜೈಲು ಶಿಕ್ಷೆ ಹಾಗೂ 10,000 ರೂ. ದಂಡ ವಿಧಿಸಲು ರೋಹಿತ್ ವೇಮುಲಾ ಮಸೂದೆಯಲ್ಲಿ ಪ್ರಸ್ತಾಪಿಸಲಾಗಿದೆ ಎಂದರು.ಶಿಕ್ಷಣ ವ್ಯವಸ್ಥೆಯಲ್ಲಿ ಯಾರೂ ಜಾತಿ ಆಧಾರಿತ ತಾರತಮ್ಯವನ್ನು ಎದುರಿಸದಂತೆ ನೋಡಿಕೊಳ್ಳಲು "ರೋಹಿತ್ ವೇಮುಲಾ ಕಾಯ್ದೆ"ಯನ್ನು ಜಾರಿಗೆ ತರುವಂತೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಕಳೆದ ಏಪ್ರಿಲ್‌ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದರು.

## ಮಹಾರಾಷ್ಟ್ರದಲ್ಲಿ ಭಾರೀ ಮಳೆ : ತುಂಬಿ ಹರಿಯುತ್ತಿರುವ ಕೃಷ್ಣೆ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಜೂ.19:ಮಹಾರಾಷ್ಟ್ರದಲ್ಲಿ ಬಾರಿ ಮಳೆಯಾಗುತ್ತಿದ್ದು ಕೃಷ್ಣಾನದಿ ತುಂಬಿ ಹರಿಯುತ್ತಿದೆ. ಜಮಖಂಡಿ ತಾಲ್ಲೂಕಿನ ಹಿಪ್ಪರಗಿ ಬ್ಯಾರೇಜ್‌ಗೆ ಒಳಹರಿವು 79,800 ಕ್ಯುಸೆಕ್ ಇದ್ದು 79,050 ಕ್ಯುಸೆಕ್ ನೀರನ್ನು ಹೊರ ಬಿಡಲಾಗುತ್ತಿದೆ.

ಯಾದಗಿರಿಯ ನಾರಾಯಣಪುರ ಡ್ಯಾಂಗೆ ಒಳಹರಿವು ಹೆಚ್ಚಾಗಿರುವುದರಿಂದ ಕೃಷ್ಣನದಿಗೆ 75 ಸಾವಿರ ಕ್ಯುಸೆಕ್ ನೀರು ಬಿಡಲಾಗಿದೆ. ರಾಯಚೂರಿನ ಕೃಷ್ಣಾ ನದಿ ಪಾತ್ರದ ಗ್ರಾಮಗಳಲ್ಲಿ ಅಲರ್ಟ್ ಘೋಷಿಸಲಾಗಿದೆ.

(2ನೇ ಪುಟ ನೋಡಿ)

## ಕೆ.ಕೆ.ಆರ್.ಡಿ.ಬಿ. ಕಾರ್ಯದರ್ಶಿಯಾಗಿ ನಲಿನ್ ಅತುಲ್ ಅಧಿಕಾರ ಸ್ವೀಕಾರ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.19:ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ನೂತನ ಕಾರ್ಯದರ್ಶಿಯಾಗಿ 2014ರ ಕರ್ನಾಟಕ ಕೇಡರ್ ಐ.ಎ.ಎಸ್ ಅಧಿಕಾರಿ ನಲಿನ್ ಅತುಲ್ ಗುರುವಾರ ಅಧಿಕಾರ ಸ್ವೀಕರಿಸಿದರು.

ಮಂಡಳಿ ಕಾರ್ಯದರ್ಶಿಯಾಗಿದ್ದ ಐ.ಎ.ಎಸ್.ಅಧಿಕಾರಿ ಎಂ.ಸುಂದರೇಶ ಬಾಬು ಅವರನ್ನು ಕೇಂದ್ರ ಸರ್ಕಾರದ ಸೇವೆಗೆ ನಿಯೋಜನೆ ಮಾಡಿದ್ದರಿಂದ ತೆರವಾದ ಸ್ಥಾನಕ್ಕೆ ಕೊಪ್ಪಳ ಜಿಲ್ಲಾಧಿಕಾರಿಗಳಾಗಿ ಕಾರ್ಯನಿರ್ವಹಿಸುತ್ತಿದ್ದ ನಲಿನ್ ಅತುಲ್ ಅವರನ್ನು ಸರ್ಕಾರ ಇತ್ತೀಚೆಗೆ ವರ್ಗಾಯಿಸಿತ್ತು.

ಮೂಲತ ಬಿಹಾರ ರಾಜ್ಯದವರಾಗಿರುವ ನಲಿನ್ ಅತುಲ್ ಅವರು ಬಿ.ಟೆಕ್ (ಎಲೆಕ್ಟ್ರಿಕಲ್ ಇಂಜಿನೀಯರಿಂಗ್) ಪದವೀಧರರಾಗಿದ್ದಾರೆ. ರಾಯಚೂರು ಜಿಲ್ಲಾ ಪಂಚಾಯತ್ ಸಿ.ಇ.ಓ, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಳಿ ಮುಖ್ಯಸ್ಥರಾಗಿ, ಕೆ.ಪಿ.ಎಸ್.ಸಿ ಪರೀಕ್ಷಾ ನಿಯಂತ್ರಕರಾಗಿ ಸೇವೆ ಸಲ್ಲಿಸಿದ ಅನುಭವ ಹೊಂದಿರುವ ಇವರು, ಈ ಹಿಂದೆ ಕಲಬುರಗಿಯಲ್ಲಿ 2019ರ ಅಕ್ಟೋಬರ್ 22ರಿಂದ 2022ರ ಜನವರಿ 27ರ ವರೆಗೆ ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತರಾಗಿ ಕಾರ್ಯನಿರ್ವಹಿಸಿದ್ದು, ಇದೀಗ ಮತ್ತೆ ಬಿಸಿಲೂರಿನಲ್ಲಿ ಸೇವೆ ಮಾಡಲು ಬಂದಿದ್ದಾರೆ.

ಪ್ರಸ್ತುತ ನಲಿನ್ ಅತುಲ್ ಅವರು ಕರ್ನಾಟಕದಲ್ಲಿ ಶಾಲಾ ಶಿಕ್ಷಣದ ವಿವಿಧ ಅಂಶಗಳನ್ನು ಅಧ್ಯಯನ ಮಾಡಲು ಮತ್ತು ವರದಿ ಮಾಡಲು ರಾಜ್ಯ ಶಿಕ್ಷಣ ನೀತಿ ಆಯೋಗದ ಅಡಿಯಲ್ಲಿ ರಚಿಸಲಾದ ವಿಷಯಾಧಾರಿತ ಕಾರ್ಯಪಡೆಯ

ಸದಸ್ಯರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಇನ್ನು 3 ರಿಂದ 6 ವರ್ಷ ವಯಸ್ಸಿನ ಮಕ್ಕಳಿಗೆ ಆರಂಭಿಕ ಶಾಲಾ ಪೂರ್ವ ಶಿಕ್ಷಣ (ಇಅಅಇ)

ಪಠ್ಯಕ್ರಮ ಮತ್ತು ಮೌಲ್ಯಮಾಪನ ಮತ್ತು ಅಂಗನವಾಡಿ ಸುಧಾರಣೆ ನಿಟ್ಟಿನಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ರಚಿಸಲ್ಪಟ್ಟ ಉಪ

(2ನೇ ಪುಟ ನೋಡಿ)

## ನಕಲಿ ವೈದರಿಗೆ ದಂಡ ವಿಧಿಸಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಆದೇಶ

ಮಲ್ಲಮ್ಮ ನುಡಿ ವಾರ್ತೆ ಬೀದರ, ಜೂ.19 : ಔರಾದ (ಬಿ) ತಾಲ್ಲೂಕಿನ ಮುಧೋಳ (ಬಿ) ಗ್ರಾಮದಲ್ಲಿ ನಕಲಿ ವೈದ್ಯರಾದ ನಾರಾಯಣರಾವ ಕುಲಕರ್ಣಿ, ಬಸವರಾಜ ಒಂಟೆ ಇವರಿಗೆ ತಲಾ 50,000 ರೂ. ಹಾಗೂ ಸ್ಟಾಫ್ ನರ್ಸ ಪ್ರೇಮ ಜಿರಗೆ ಇವರಿಗೂ 1,00,000 ರೂ. ದಂಡ ವಿಧಿಸಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಆದೇಶ ಹೊರಡಿಸಿರುತ್ತಾರೆ

ಅವರು ಗುರುವಾರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿರುವ ಜಿಲ್ಲಾ ನೊಂದಣಿ ಮತ್ತು ಕುಂದು ಕೊರತೆ ಪರಿಹಾರ ಪ್ರಾಧಿಕಾರದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮುಂದೆ ವೈದ್ಯವೃತ್ತಿ ನಡೆಸದಂತೆ ಎಚ್ಚರಿಕೆ ನೀಡಿರುತ್ತಾರೆ ಮತ್ತು




ಆಯುರ್ವೇದ ವೈದ್ಯರಾದ ಡಾ. ರಂಜಿತ ಬಿರಾದರ ಇವರಿಗೆ ಕರ್ನಾಟಕ ಆಯುರ್ವೇದ ವೈದ್ಯಕೀಯ ಮಂಡಳಿಯಲ್ಲಿ ನೋಂದಣಿ ಮಾಡಿಸಿ ಮಂಡಳಿಯಿಂದ ಪ್ರಮಾಣ ಪತ್ರ ಪಡೆದು ಕೆ.ಪಿ.ಎಂ.ಇ ನೋಂದಣಿ ಮಾಡಿಸಿ ಅದೇ ಪದ್ದತಿಯಲ್ಲಿ ವೈದ್ಯ ವೃತ್ತಿ ನಡೆಸಬೇಕೆಂದು ಎಚ್ಚರಿಕೆ ನೀಡಿರುತ್ತಾರೆ.

ಔರಾದ(ಬಿ) ತಾಲೂಕಿನ ಮುಧೋಳ(ಬಿ)ಗ್ರಾಮದಲ್ಲಿರುವ ನಕಲಿ ವೈದ್ಯರಾದ ನಾರಾಯಣರಾವ ಕುಲರ್ಕಣಿ, ಬಸವರಾಜ ಒಂಟೆ ಹಾಗೂ ಸ್ಟಾಫ್ ನರ್ಸ ಪ್ರೇಮ

(2ನೇ ಪುಟ ನೋಡಿ)



ಕಮಲನಗರ: ತಾಲೂಕಿನ ಡಿಗ್ಗಿ ಗ್ರಾಮದಲ್ಲಿ ರೈತನೊರ್ವ ಎತ್ತುಗಳ ಸಹಾಯದಿಂದ ಬಿತ್ತನೆ ಮಾಡುತ್ತಿರುವುದು, ಈ ವರ್ಷ ಮುಂಗಾರು ಆರಂಭ ವಾಡಿಕೆ ಗಿಂತ ಮೊದಲಾಗಿ ಹೆಚ್ಚು ಮಳೆ ಬಿದ್ದ ಕಾರಣ ಒಳ್ಳೆ ಹಸಿ ಭೂಮಿಯಲ್ಲಿ ಬೀಜ ಬಿತ್ತನೆ ಮಾಡಿ, ಒಳ್ಳೆಯ ಬೆಳೆಯ ನಿರೀಕ್ಷೆಯಲ್ಲಿ ರೈತರು ಇದ್ದಾರೆ.

## ಜನಸಂದಣಿ ತಡೆಗೆ ಹೊಸ ಕಾನೂನು : 3 ವರ್ಷ ಜೈಲು, 5 ಲಕ್ಷ ದಂಡ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಜೂ.19:ಚಿನ್ನಸ್ವಾಮಿ ಸ್ಟೇಡಿಯಂ ಕಾಲ್ತುಳಿತ ಪ್ರಕರಣದ ನಂತರ ರಾಜ್ಯ ಸರ್ಕಾರ ಎಚ್ಚೆತ್ತು–ಕೊಂಡಿದ್ದು ಹೊಸ ಕಾನೂನು ತರಲು ಹೊರಟಿದೆ. ಇಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಜನಸಂದಣಿ ನಿಯಂತ್ರಣ ಮಸೂದೆ ಮಂಡಿಸಿದ್ದು ಮುಂದಿನ ಕ್ಯಾಬಿನೆಟ್‌ನಲ್ಲಿ ವಿಸ್ತಾರವಾಗಿ ಚರ್ಚೆ ನಡೆಸಲಿದೆ.

ಕ್ರೀಡೆ, ಸರ್ಕಸ್ ಇತರೇ ವಾಣಿಜ್ಯ ಉದ್ದೇಶದ ಕಾರ್ಯಕ್ರಮಗಳಿಗೆ ಸರ್ಕಾರ ಬಿಗಿ ನಿಯಮ ಜಾರಿಗೆ ಮುಂದಾಗಿದೆ. ಕಾರ್ಯಕ್ರಮಕ್ಕೂ ಮುನ್ನ ಅಥವಾ ಕಾರ್ಯಕ್ರಮ ನಡೆಯುವಾಗ ಜನರನ್ನು ನಿಯಂತ್ರಿಸಲಾಗದಿದ್ದರೆ ಆಯೋಜಕರಿಗೆ 3 ವರ್ಷದ ತನಕ ಜೈಲು, 5 ಲಕ್ಷ ರೂ. ವರೆಗೆ ದಂಡ ವಿಧಿಸಬಹುದಾಗಿದೆ.

ಕಾರ್ಯಕ್ರಮದ ಆಯೋಜಕರು ಆಯಾ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಅನುಮತಿಗೆ ಅರ್ಜಿ ಹಾಕಬೇಕು. ಅಲ್ಲಿಯೇ ಸ್ಥಳ, ಸಮಯ ಎಲ್ಲವೂ



ನಿರ್ಧಾರ ಮಾಡಬೇಕಾಗುತ್ತದೆ.

ಜಾತ್ರೆ, ರಥೋತ್ಸವ, ಪಲ್ಲಕ್ಕಿ ಉತ್ಸವ, ತೆಪ್ಪದ ತೇರು, ಉರುಸ್ ಅಥವಾ ಯಾವುದೇ ಧರ್ಮ, ಜಾತಿ ಅಥವಾ ಪಂಥಕ್ಕೆ ಸಂಬಂಧಿಸಿದ ಯಾವುದೇ ಧಾರ್ಮಿಕ ಕಾರ್ಯಕ್ರಮಗಳಿಗೆ ಕಾನೂನು ಅನ್ವಯ ಆಗುವುದಿಲ್ಲ.

ಕ್ರೀಡೆ, ಸರ್ಕಸ್, ಪ್ರಾಯೋಜಿತ ಕಾರ್ಯಕ್ರಮಗಳು, ರಾಜಕೀಯ ರ್‍ಯಾಲಿ ಸೇರಿದಂತೆ ಇತರೇ ವಾಣಿಜ್ಯ ಉದ್ದೇಶದ ಕಾರ್ಯಕ್ರಮಗಳು ಈ ಮಸೂದೆ ವ್ಯಾಪ್ತಿಯಲ್ಲಿ ಬರುತ್ತದೆ. ಕಾರ್ಯಕ್ರಮಗಳಲ್ಲಿ ಗಲಾಟೆ, ಅಹಿತಕರ ಘಟನೆ, ದೇಹ ಹಾನಿ, ಸಾವು ನೋವಿಗೆ ಕಾರ್ಯಕ್ರಮ ಆಯೋಜಕರೇ ಜವಾಬ್ದಾರಿಯಾಗುತ್ತಾರೆ.

ಗಾಯಾಳುಗಳಿಗೆ, ಮೃತ ಕುಟುಂಬಗಳಿಗೆ ಪರಿಹಾರ ನೀಡದಿದ್ದರೆ ಕಾರ್ಯಕ್ರಮ ಆಯೋಜಕರ ಆಸ್ತಿ ಹರಾಜು ಮೂಲಕ ಪರಿಹಾರ ವಸೂಲಿ ಮಾಡಲಾಗುತ್ತದೆ.

ಶಾಂತಿ ಭಂಗ ತರುವ ಮುನ್ಸೂಚನೆ ಇದ್ದರೆ, ಗಲಾಟೆ, ಅಹಿತಕರ ಘಟನೆ ನಡೆದರೆ ಅನುಮತಿ ಇದ್ದರೂ ಅಹಿತಕರ ಘಟನೆ ನಡೆದರೆ ಕಾರ್ಯಕ್ರಮ ನಿಷೇಧಿಸುವ ಅಧಿಕಾರವನ್ನು ನೀಡಲಾಗಿದೆ.

## ಹೈಕೋರ್ಟ್ ತೀರ್ಪು ಎಫೆಕ್ಟ್: ಅನರ್ಹಗೊಂಡಿದ್ದ ಜನಾರ್ದನ ರೆಡ್ಡಿ ಶಾಸಕ ಸ್ಥಾನ ಮರುಸ್ಥಾಪನೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಜೂ.19:ಓಬಳಾಪುರಂ ಮೈನಿಂಗ್ ಪ್ರಕರಣದಲ್ಲಿ ಸಿಬಿಐ ವಿಶೇಷ ಕೋರ್ಟ್ ನಿಂದ ಏಳು ವರ್ಷ ಜೈಲು ಶಿಕ್ಷೆಗೆ ಗುರಿಯಾಗಿರುವ ಮಾಜಿ ಸಚಿವ ಗಾಲಿ ಜನಾರ್ದನ ರೆಡ್ಡಿ ಅವರ ಶಾಸಕ ಸ್ಥಾನವನ್ನು ಮರುಸ್ಥಾಪಿಸಲಾಗಿದೆ.ಜನಾರ್ದನ ರೆಡ್ಡಿಗೆ ಜೈಲು ಶಿಕ್ಷೆ ವಿಧಿಸಿದ್ದ ಸಿಬಿಐ ವಿಶೇಷ ಕೋರ್ಟ್ ತೀರ್ಪಿಗೆ ತೆಲಂಗಾಣ ಹೈಕೋರ್ಟ್ ತಡೆಯಾಜ್ಞೆ ನೀಡಿದೆ. ಈ ಹಿನ್ನೆಲೆಯಲ್ಲಿ ವಿಧಾನಸಭೆ ಕಾರ್ಯದರ್ಶಿ ರೆಡ್ಡಿ ಅವರ ಶಾಸಕ ಸ್ಥಾನವನ್ನು ಮರು ಸ್ಥಾಪಿಸಿದ್ದಾರೆ.



ಓಬಳಾಪುರಂ ಮೈನಿಂಗ್ ಕಂಪನಿ(ಒಎಂಸಿ)ಯ ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ಗಂಗಾವತಿ ಶಾಸಕ ಗಾಲಿ ಜನಾರ್ದನ ರೆಡ್ಡಿ ಅವರಿಗೆ ಏಳು ವರ್ಷ ಜೈಲು ಶಿಕ್ಷೆ ವಿಧಿಸಿ ಸಿಬಿಐ ವಿಶೇಷ ಕೋರ್ಟ್ ತೀರ್ಪು ನೀಡಿತ್ತು. ನಿಯಮದಂತೆ ಏಳು ವರ್ಷ ಜೈಲು ಶಿಕ್ಷೆ ಹಿನ್ನೆಲೆಯಲ್ಲಿ ರೆಡ್ಡಿ ಶಾಸಕ ಸ್ಥಾನ ರದ್ದುಗೊಂಡಿತ್ತು.

ಆದರೆ ಸಿಬಿಐ ವಿಶೇಷ ಕೋರ್ಟ್ ತೀರ್ಪು ಪ್ರಶ್ನಿಸಿ ಜನಾರ್ದನ ರೆಡ್ಡಿ ಹೈಕೋರ್ಟ್ ಗೆ ಮೇಲ್ಮನವಿ ಸಲ್ಲಿಸಿದ್ದರು. ಅರ್ಜಿಯ ವಿಚಾರಣೆ ನಡೆಸಿದ ತೆಲಂಗಾಣ ಹೈಕೋರ್ಟ್ ಈ ಶಿಕ್ಷೆಗೆ ತಡೆ ನೀಡಿದೆ. ಅಷ್ಟೇ ಅಲ್ಲದೆ, ಈ ಪ್ರಕರಣದಲ್ಲಿ ಜನಾರ್ದನ ರೆಡ್ಡಿಯವರಿಗೆ ಜಾಮೀನು ನೀಡಿದೆ.

ಒಂದನೇ ಪುಟದಿಂದ

## ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಆದೇಶ

ಜಿರಗೆ ಇವರು ಯಾವುದೇ ವೈದ್ಯಕೀಯ ಪದವಿ ಪಡೆಯದೆ ವೈದ್ಯಕೀಯ ಪದವಿ ನಡೆಸುತ್ತೀದ್ದಾರೆ ಎಂದು ದೂರ ಬಂದ ಪ್ರಯುಕ್ತ ಔರಾದ(ಬಿ) ತಾಲ್ಲೂಕಿನ ಆರೋಗ್ಯ ಅಧಿಕಾರಿಗಳಾದ ಡಾ॥ ಗಾಯತ್ರಿ ಹಾಗೂ ಜಿಲ್ಲಾ ಕೆ.ಪಿ.ಎಮ.ಇ ನೋಡಲ ಅಧಿಕಾರಿಗಳಾದ ಡಾ॥ದಿಲೀಪ್ ಡೋಂಗ್ರೆ ಅವರು ಸದರಿ ಗ್ರಾಮಕ್ಕೆ ಭೇಟಿ ನೀಡಿ ಕ್ಲಿನಿಕಗಳನ್ನು ಸೀಜ ಮಾಡಿರುತ್ತಾರೆ.

ಔರಾದ(ಬಿ) ತಾಲೂಕಿನ ಎಕಂಬಾ ಗ್ರಾಮದಲ್ಲಿ ಡಾ. ರಂಜಿತ ಬಿರಾದರ ಇವರು ಮಹಾರಾಷ್ಟ್ರ ರಾಜ್ಯದಿಂದ ಆರ್ಯುವೇದ ಪದ್ಧತಿಯಲ್ಲಿ ಪದವಿ ಹೊಂದಿದ್ದು ಇಲ್ಲಿ ಅಲೋಪತಿ ವೈದ್ಯ ವೃತ್ತಿ ನಡೆಸುತ್ತಿದ್ದಾರೆ ಆದರೆ ಕರ್ನಾಟಕ ರಾಜ್ಯದಲ್ಲಿ ವೈದ್ಯ ವೃತ್ತಿ ನಡೆಸಬೇಕಾದರೆ ಕೆ.ಪಿ.ಎಂ.ಇ ಕಾಯ್ದೆ ಪ್ರಕಾರ ಕರ್ನಾಟಕ ಆರ್ಯುವೇದ ವೈದ್ಯಕೀಯ ಮಂಡಳಿಯಲ್ಲಿ ನೋಂದಣಿ ಮಾಡಿಸಿ ಮಂಡಳಿಯಿಂದ ಪ್ರಮಾಣ ಪತ್ರ ಪಡೆದು ಕೆ.ಪಿ.ಎಂ.ಇ ನೋಂದಣಿ ಮಾಡಿಸಿ ಅದೇ ಪದ್ದತಿಯಲ್ಲಿ ವೈದ್ಯ ವೃತ್ತಿ ನಡೆಸಬೇಕಾಗಿರುತ್ತದೆ. ಇದು ಕೆ.ಪಿ.ಎಂ.ಇ ಕಾಯ್ದೆ 2007 ಕಲಂ 19 ಮತ್ತು 22 ಸ್ಪಷ್ಟ ಉಲ್ಲಂಘನೆಯಾಗಿರುವುದರಿಂದ ಕ್ರಮಕೈಗೊಳ್ಳಲಾಗಿದೆ.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ॥ಧ್ಯಾನೇಶ್ವರ ನಿರಗುಡೆ ಜಿಲ್ಲಾ ಕೆ.ಪಿ.ಎಮ.ಇ ನೋಡಲ ಅಧಿಕಾರಿಗಳಾದ ಡಾ॥ದಿಲೀಪ್ ಡೋಂಗ್ರೆ ತಾಲೂಕಾ ಆರೋಗ್ಯ ಅಧಿಕಾರಿಗಳಾದ ಡಾ॥ ಗಾಯತ್ರಿ, ಡಾ॥ ಸಂಗಾರೆಡ್ಡಿ,ಡಾ॥ ಶಿವಕುಮಾರ ಸಿದ್ದೇಶ್ವರ,ಡಾ॥ರವಿ ಕಲಶೆಟ್ಟಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ನಲಿನ್ ಅತುಲ್ ಅಧಿಕಾರ ಸ್ವೀಕಾರ

ಸಮಿತಿಯ ಮುಖ್ಯಸ್ಥರಾಗಿಯೂ ಕಾರ್ಯನಿರ್ವಹಿಸಿ ಸರ್ಕಾರಕ್ಕೆ ಈಗಾಗಲೆ ವರದಿ ಸಲ್ಲಿಸಿರುತ್ತಾರೆ.

ಪ್ರದೇಶದ ಅಭಿವೃದ್ಧಿಗೆ ಶ್ರಮಿಸುವೆ: ಮಂಡಳಿಯ ಅಧ್ಯಕ್ಷರು ಮತ್ತು ಸರ್ವ ಸದಸ್ಯರ ಸಲಹೆ ಹಾಗೂ ಪ್ರದೇಶದ ಏಳು ಜಿಲ್ಲೆಗಳ ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯತ್ ಸಿ.ಇ.ಓ ಅವರುಗಳ ಅಭಿಪ್ರಾಯ ಪಡೆದು ರಾಜ್ಯ ಸರ್ಕಾರ ಮಂಡಳಿಗೆ ಒದಗಿಸಿರುವ ಅನುದಾನವನ್ನು ಪ್ರದೇಶದ ಒಳಿತಿಗೆ ಸಮರ್ಪಕವಾಗಿ ಅನುಷ್ಠಾನ ಮಾಡುವುದರ ಜೊತೆಗೆ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸುವುದಾಗಿ ನಲಿನ್ ಅತುಲ್ ತಿಳಿಸಿದರು.

ಈ ಸಂದರ್ಭದಲ್ಲಿ ಮಂಡಳಿ ಉಪ ಕಾರ್ಯದರ್ಶಿ ಮಂಜುನಾಥ ಸ್ವಾಮಿ ಜಿ.ಎನ್., ಅಪರ ನಿರ್ದೇಶಕಿ ಪ್ರವೀಣಪ್ರಿಯಾ ಡೇವಿಡ್, ಅಧೀಕ್ಷಕ ಅಭಿಯಂತತರು ವಿಜಯಕುಮಾರ ಪಾಟೀಲ, ಹಣಕಾಸು ನಿಯಂತ್ರಕಿ ಅಕ್ಕನಾಗಮ್ಮ, ಅಧೀನ ಕಾರ್ಯದರ್ಶಿ ಪ್ರಕಾಶ ಕುದರಿ ಸೇರಿದಂತೆ ಸಿಬ್ಬಂದಿ ವರ್ಗದವರು ಇದ್ದರು.

## ತುಂಬಿ ಹರಿಯುತ್ತಿರುವ ಕೃಷ್ಣೆ

ಕೃಷ್ಣಾ ಅಚ್ಚುಕಟ್ಟು ಪ್ರದೇಶದಲ್ಲಿ ಉತ್ತಮ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ನದಿ ಪಾತ್ರದಲ್ಲಿ ಮುಂಜಾಗ್ರತೆ ವಹಿಸಲು ಜಿಲ್ಲಾಡಳಿತ ಅಧಿಕಾರಿಗಳಿಗೆ ಸೂಚನೆ ನೀಡಿದೆ.

ಘಟಪ್ರಭಾ ನದಿ ಅಬ್ಬರಕ್ಕೆ ಬೆಳಗಾವಿಯ ಗೋಕಾಕ್ ಫಾಲ್ಸ್ ಧುಮ್ಮಿಕ್ಕಿ ಹರಿಯುತ್ತಿದೆ. ಮಹಾರಾಷ್ಟ್ರದ ಅಂಬೋಲಿ ಫಾಲ್ಸ್ ಕೂಡ ಜೀವಕಳೆ ಪಡೆದಿದೆ. ಪ್ರವಾಸಿಗರು ಜಲವೈಭವವನ್ನು ಕಣ್ತುಂಬಿಕೊಳ್ಳುತ್ತಿದ್ದಾರೆ.

# ಜೂ.23 ಬಾಗಲಕೋಟೆಗೆ ಗೃಹಸಚಿವ ಪರಮೇಶ್ವರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.19–ರಾಜ್ಯದ ಗೃಹಸಚಿವ ಜಿ.ಪರಮೇಶ್ವರ ಜೂ.23 ಸೋಮವಾರ ನಗರಕ್ಕೆ ಆಗಮಿಸಲಿದ್ದಾರೆ.

ಜೂ.22 ರಂದು ರವಿವಾರ ಸಾಯಂಕಾಲ 5 ಗಂಟೆಗೆ ಜಿಲ್ಲೆಯ ಬಾದಾಮಿ ಪಟ್ಟಣಕ್ಕೆ ಆಗಮಿಸಿ ವಾಸ್ತವ್ಯ ಮಾಡಲಿರುವ ಸಚಿವರು, ಜೂ.23 ರಂದು ಬೆಳಿಗ್ಗೆ11–30ಕ್ಕೆ ಬಾದಾಮಿಯಿಂದ ಹೊರಟು ಮಧ್ಯಾಹ್ನ 12–15 ಗಂಟೆಗೆ ಬಾಗಲಕೋಟೆ ನಗರಕ್ಕೆ ಆಗಮಿಸುವರು.

12–30 ಕ್ಕೆ ನವನಗರದಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಪೋಲಿಸ್ ಕೌಶಲ್ಯ ಅಭಿವೃದ್ಧಿ ಕೇಂದ್ರ ಮತ್ತು ಪೋಲಿಸ್ ಸಮುದಾಯ ಭವನದ ಉದ್ಘಾಟನಾ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದು, ಮಧ್ಯಾಹ್ನ 2–30 ರಿಂದ ಜಿಲ್ಲಾ ಪೋಲಿಸ್ ಅಧಿಕಾರಿಗಳೊಂದಿಗೆ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಲಿದ್ದಾರೆ. ಸಾಯಂಕಾಲ 4 ಗಂಟೆಗೆ ಹುಬ್ಬಳ್ಳಿಗೆ ತೆರಳುವರು ಎಂದು ಸಚಿವರ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## ತುಳಸಿಗೇರಿಯಲ್ಲಿ ಜೂ.22 ಶ್ರೀಗಂಧ ಬೆಳೆದ ರೈತರ ಸಭೆ


ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ:ಬಾಗಲಕೋಟೆ ಜಿಲ್ಲೆಯ ಶ್ರೀಗಂಧ ಬೆಳೆದ ರೈತರ ಸಭೆ ಜೂ.22ರಂದು ತುಳಸಿಗೇರಿಯಲ್ಲಿ ಜರುಗಲಿದೆ.

ರವಿವಾರ ಬೆಳಗ್ಗೆ 11 ಗಂಟೆಗೆ ತುಳಸಿಗೇರಿ ಗ್ರಾಮದ ಆಂಜನೇಯ ದೇವಸ್ಥಾನ ಪಕ್ಕದ ಸಮುದಾಯ ಭವನದಲ್ಲಿ ಸಭೆ ನಡೆಯಲಿದ್ದು, ರಾಜ್ಯದ ಅಖಿಲ ಕರ್ನಾಟಕ ಶ್ರೀಗಂಧ ಮತ್ತು ವನಕೃಷಿ ಬೆಳೆಗಾರರ ಸಂಘದ ಸದಸ್ಯತ್ವ ಪಡೆಯುವುದು ಹಾಗೂ ಶ್ರೀಗಂಧ ಬೆಳೆಗಾರರು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಸಭೆಯಲ್ಲಿ ಚರ್ಚಿಸಲಾಗುವುದು.

ಜಿಲ್ಲೆಯ ಶ್ರೀಗಂಧ ಬೆಳೆಗಾರರು ಸಭೆಯಲ್ಲಿ ಭಾಗವಹಿಸುವಂತೆ ಬೆಳೆಗಾರರಾದ ಚಿಕ್ಕಸಂಶಿಯ ಅಶೋಕಗೌಡ ಪಾಟೀಲ ಹಾಗೂ ಬಾಲಚಂದ್ರ ರೂಗಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತೋರಣಾ ಗ್ರಾಮ ಪಂಚಾಯತನಲ್ಲಿ ಗ್ರಾಮಸಭೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜೂ.19: ಕಮಲನಗರ ತಾಲೂಕಿನ ತೆ–ೂರಣಾ ಗ್ರಾಮ ಪಂಚಾಯತ್ ನಲ್ಲಿ 15 ನೇ ಹಣಕಾಸಿನ ಮತ್ತು ತಾಲ್ಲೂಕು ಪಂಚಾಯತ್ ಹಾಗೂ ಜಿಲ್ಲಾ ಪಂಚಾಯತ್ ರಾಜ್ಯ ಹಣಕಾಸು ಅನುದಾನ ಆಯೋಗದ ಸಾಮಾಜಿಕ ಸಾಮಾಜಿಕ ಪರಿಶೋಧನೆ ಕುರಿತು ಗ್ರಾಮ ಸಭೆ ನಡೆಯಿತು.

ಕ್ಷೇತ್ರಶಿಲ್ಪಣಾಧಿಕಾರಿ ರಂಗೇಶ ಅವರ ಅಧ್ಯಕ್ಷತೆಯಲ್ಲಿ ಗ್ರಾಮ ಸಭೆ ನಡೆಸಲಾಯಿತು. ಸಭೆಯಲ್ಲಿ ತಾಲೂಕು ಕಾರ್ಯಕ್ರಮ ವ್ಯವಸ್ಥಾಪಕರಾದ ಆನಂದ ಅವರು ಮಾತನಾಡಿ, ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಕೈಗೊಂಡಿರುವ ಕಾಮಗಾರಿಗಳ ಬಗ್ಗೆ ಹಾಗೂ ಖರ್ಚು ವೆಚ್ಚಿನ ಬಗ್ಗೆ ಮತ್ತು ಉದ್ಯೋಗ ಖಾತರಿ ಯೋಜನೆ ಬಗ್ಗೆ ತಿಳಿಸಿದರು. ಜೊತೆಗೆ ಧೀರ್ಘಬಾಳಿಕೆ ಬರುವಂತಹ ಕಾಮಗಾರಿಗಳನ್ನು ಮಾಡಿಕೊಂಡು ಆಸ್ತಿ ಸೃಜನೆ ಮಾಡಿಕೊಳ್ಳಿ ಎಂದು ತಿಳಿಸಿದರು. ಜೊತೆಗೆ ವೈಯಕ್ತಿಕ ಕಾಮಗಾರಿಗಳಾದ ಕುರಿ, ಕೋಳಿ, ದನದ ಕೊಟ್ಟಿಗೆ ನಿರ್ಮಾಣ ಮಾಡಿಕೊಳ್ಳಲು ಸಹಾಯಧನ ದೊರಕುವುದು ಇಂತಹ ಯೋಜನೆಗಳ ಸದುಪಯೋಗ ಪಡೆದುಕೊಳ್ಳಿ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕರಾದ ದೇವದಾಸ ಮುಸ್ಕೆ, ಗ್ರಾ.ಪಂ. ಅಧ್ಯಕ್ಷರಾದ ಸುನೀಲ ಶಿಗರೆ, ಸದಸ್ಯರಾದ ಮಾಧವ ಶೇಷರಾವ ಬೋಸಲೆ, ಶ್ರೀಧರ ಪಾಟೀಲ, ಗ್ರಾಮಸ್ಥರಾದ ಬಾಲಾಜಿ ಡೋಂಗರೆ, ದೇವಿದಾಸ ಹೋನಾಳೆ, ಸುಭಾಸ ರಾಮಲೆ, ಪಿಡಿಓ ಮಲ್ಲೇಶ, ಕಾರ್ಯದರ್ಶಿ ಸಂಜುಕುಮಾರ, ಡಿಇಓ ರಾಜಕುಮಾರ, ಬಿಲ್ ಕಲೆಕ್ಟರ್ ಸಂಜು, ಟಿಎ ಶೇಖರ, ವಿನೋದ, ಐಇಸಿ ಸಂಯೋಜಕರಾದ ಸವಿತಾ ನಾಗೇಶ, ಸಾಮಾಜಿಕ ಪರಿಶೋಧನಾ ಸಿಬ್ಬಂದಿಗಳು, ಗ್ರಾಮಸ್ಥರು, ಕೂಲಿಕಾರರಾದ ರೇಣುಕಾ, ಮೇಹರುಣಬಿ, ಪರತಾಬಾಯಿ, ಯಶವಂತ ಸೇರಿದಂತೆ ಇತರರು ಇದ್ದರು. ಗ್ರಾ.ಪಂ. ಸಿಬ್ಬಂದ್ದಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# ತುಂಗಭದ್ರಾ ನೀರಾವರಿ ಸಭೆ ಕರೆಯಲು ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ: ಈ ಬಾರಿ ಮುಂಗಾರು ಹಂಗಾಮಿಗೆ ಸಕಾಲಕ್ಕೆ ವರುಣನ ಕೃಪೆ ಆಗಿದ್ದು ಜಲಾಶಯದಲ್ಲಿ ನೀರಿನ ಸಂಗ್ರಹಣೆ ರೈತರಲ್ಲಿ ಹರ್ಷ ಮೂಡಿಸಿದೆ. ಜಲಾಶಯದ ನೀರನ್ನು ಕೃಷಿಗೆ ಪೂರೈಸಲು ರೈತರೊಂದಿಗೆ ಚರ್ಚಿಸಲು ರಾಜ್ಯ ಸರ್ಕಾರ ಕೂಡಲೇ ತುಂಗಭದ್ರಾ ಸಲಹಾ ಸಮಿತಿ ಸಭೆ ಕರೆಯಬೆಕೆಂದು ರೈತರು ಜಿಲ್ಲಾಡಳಿತದ ಮೂಲಕ ಒತ್ತಾಯಿಸಿದ್ದಾರೆ.


ತುಂಗಭದ್ರಾ ರೈತ ಸಂಘದ ಅಧ್ಯಕ್ಷರಾದ ಡಾ.ಪುರುಷೋತ್ತಮಗೌಡ ಅವರ ನೇತೃತ್ವದಲ್ಲಿ ಇಂದು ರೈತರು ಡಿಸಿ ಕಚೇರಿ ಮುಂದೆ ಜಮಾಯಿಸಿ ಬಳ್ಳಾರಿ, ವಿಜಯನಗರ, ಕೊಪ್ಪಳ, ಮತ್ತು ರಾಯಚೂರು ಜಿಲ್ಲೆಗಳ ರೈತರು ತುಂಗಭದ್ರಾ ಜಲಾಶಯದ ನೀರನ್ನು ನಂಬಿ ಕೃಷಿಯಲ್ಲಿ ತೊಡಗಿಸಿಕೊಂಡಿದ್ದಾರೆ. ಕೂಡಲೇ ಜಿಲ್ಲಾಧಿಕಾರಿಗಳು ಮತ್ತು ಸಂಬಂಧಿಸಿದ ಸಚಿವರುಗಳು ರೈತರ ಕೃಷಿ ಚಟುವಟಿಕೆಗಳಿಗೆ ಪೂರಕವಾಗಿ ನೆರವಾಗಲು ತುಂಗಭದ್ರ ಜಲಾಶಯದ ನೀರಾವರಿ ಸಭೆಯನ್ನು ಕರೆಯಬೇಕೆಂದು ಮನವಿ ಮಾಡಿದರು. ರಾಜ್ಯದಾದ್ಯಂತ ಮುಂಗಾರು ಮಳೆ ಉತ್ತಮವಾಗಿದೆ. ತುಂಗಭದ್ರ ಜಲಾಶಯನ ಪ್ರದೇಶದಲ್ಲಿಯೂ ಭರವಸೆಯ ಮಳೆ ಆಗಿದೆ. ಮಲೆನಾಡಿನಲ್ಲಿ ಸುರಿಯುತ್ತಿರುವ ಮಳೆಯಿಂದ ದಿನೇ ದಿನೇ ನೀರಿನ ಸಂಗ್ರಹದಲ್ಲಿ ಹೆಚ್ಚಳವಾಗುತ್ತಿದೆ. ಇದುವರೆಗೆ 34 ಟಿ.ಎಂ.ಸಿ. ನೀರು ಶೇಖರಣೆಯಾಗಿದೆ. ಉತ್ತಮ ಮಳೆಯಿಂದಾಗಿ ಜಲಾಶಯಕ್ಕೆ ಸುಮಾರು 51,000 ಕ್ಯೂಸೆಕ್ಸ್ ನೀರು ಹರಿದು ಬರುತ್ತಿದೆ. ತುಂಗಭದ್ರ ಜಲಾಶಯದ ಮತ್ತು ತುಂಗಭದ್ರ ಮಂಡಳಿಯ ಅಧಿಕಾರಿಗಳು ಸಭೆ ಸೇರಿ 19ನೇ ಗೇಟ್ ಅಳವಡಿಸಬೇಕು. ಕಾಲುವೆಗಳ ಕಾಮಗಾರಿಗಳನ್ನು ಪೂರೈಸುವ ಉದ್ದೇಶದಿಂದ ವಿನಾಕಾರಣ ಕಾಲುವೆಗಳಿಗೆ ನೀರು ಬಿಡಲು ತಡಮಾಡಬಾರದು ಎಂದು ಅವರು ತಾಕೀತು ಮಾಡಿದ್ದಾರೆ.

ರೈತರ ಹಿತದೃಷ್ಟಿಯಿಂದ ಮತ್ತು ಜನ, ಜಾನುವಾರುಗಳ ನೆರವಿಗಾಗಿ ತುಂಗಭದ್ರಾ ಜಲಾಶಯದ ನೀರಾವರಿ ಸಲಹಾ ಸಮಿತಿ ಸಭೆಯನ್ನು ಕರೆಯಬೇಕು. ಬಳ್ಳಾರಿ, ವಿಜಯನಗರ, ಕೊಪ್ಪಳ ಮತ್ತು ರಾಯಚೂರು ಜಿಲ್ಲೆಗಳ ಹೆಚ್.ಎಲ್.ಸಿ,ಎಲ್.ಎಲ್.ಸಿ, ಎಲ್.ವಿ.ಎಂ.ಸಿ, ವಿಜಯನಗರ ನಾಲೆಳಿಗೆ ಜಲಾಶಯದಿಂದ ಮುಂಗಾರು ಮತ್ತು ಹಿಂಗಾರಿನ 2 ಬೆಳೆಗಳಿಗೆ ನೀರು ಕೊಡಲು ಸೂಕ್ತ ಕ್ರಮ ಕೈಗೊಳ್ಳಬೆಕು ಎಂದು ವಿನಂತಿಸಿಕೊಂಡರು.

ಈ ಸಂದರ್ಭದಲ್ಲಿ ರೈತರಾದ ಕುಡಿತಿನಿ ಎ.ಪಂಪಾಪತಿ, ಕೊಂಚಿಗೇರಿ ಮಲ್ಲಪ್ಪ, ಮುಷ್ಟಗಟ್ಟ ಭೀಮನಗೌಡ, ಕೃಷ್ಣನಗರ ಶಿವಯ್ಯ, ಖಾಜಾವಲಿಸಾಬ್, ಶ್ರೀಧರಗಡ್ಡೆ ವೀರನಗೌಡ,

ಮೋಕಾ ಸಣ್ಣ ಅಂಜಿನಪ್ಪ ನಾಯಕ, ಗೆಣಿಕೆಹಾಳು ಶರಣನಗೌಡ, ಎಮ್ಮಿಗನೂರು ರಾಜಾಸಾಬ್, ಕೊಂಚಿಗೇರಿ ಗೋವಿಂದಪ್ಪ, ದರೂರು ಎಂ.ವೀರಭದ್ರನಾಯಕ, ಶ್ರೀಧರಗಡ್ಡೆ ಮಲ್ಲಿಕಾರ್ಜುನ, ಮೋಕಾ ಭೀಮಪ್ಪನಾಯಕ, ಸಂಗನಕಲ್ಲು ದೊಡ್ಡದಾಸಪ್ಪ, ಸೋಮಸಮುದ್ರ ಲಿಂಗಾರೆಡ್ಡಿ ಇನ್ನಿತರರು ಇದ್ದರು.

## ಕಮಲನಗರ ಪಿಡಿಒ ವಿರುದ್ಧ ಭ್ರಷ್ಟಾಚಾರ ತನಿಖೆ ಬಗ್ಗೆ ಲೋಕಾಯುಕ್ತಕ್ಕೆ ದೂರು



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜೂ.19:ಪಟ್ಟಣದ ಚನ್ನಬಸವೇಶ್ವರ ಗ್ರಂಥಾಲಯದಲ್ಲಿ ನಾಗರೀಕ ಸೇವಾ ಸಮಿತಿ ಅಧ್ಯಕ್ಷ ದಿಲೀಪ ಮುಧಾಳೆ ಕರೆದ ಸುದ್ದಿ ಗೋಷ್ಠಿಯಲ್ಲಿ, ಕಮಲನಗರ ಪಿಡಿಒ ಸಾರ್ವಜನಿಕರ ಕುಂದುಕೊರತೆಗಳನ್ನು ವಿಚಾರಿಸಲು ಬಂದರೆ ಸರಿಯಾಗಿ ಸ್ಪಂದನೆ ಕೊಡುತ್ತಿಲ್ಲ ಲಂಚ ಕೊಟ್ಟರೆ ಕೆಲಸ ಮಾಡುತ್ತಿದ್ದಾರೆ ಎಂದು ಲೋಕಾಯುಕ್ತ ಅವರಿಗೆ ದೂರು ಕೊಟ್ಟಿರು ಪ್ರತಿಯನ್ನು ತೋರಿಸಿ ದೂರಿನ ಬಗ್ಗೆ ಮಾತನಾಡಿದರು.

ಕಮಲನಗರ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರಾಜಕುಮಾರ ತಂಬಾಕೆ ಅವರು ರಾಜಾರೋಷ ಲಂಚ ಪಡೆ–ಯುತ್ತಿದ್ದು, ಬೇರೆಯವರ ಆಸ್ತಿ ನಿಮ್ಮ ಹೆಸರಿಗೆ ಮಾಡಿಕೊಡುವ ಭ್ರಷ್ಟಾಚಾರ ನಡೆಯುತ್ತಿದೆ. ಕರಿಮಾಬಿ ರುಹಿಮೊದ್ದೀನ್ ಅವರ ಹೆಸರಿನಲ್ಲಿರುವ ಆಸ್ತಿಯನ್ನು ಸಂಜಯ ರಂಗನಾಥ ಅವರಿಗೆ ಮಾರಾಟ ಮಾಡಲಾಗಿದೆ. ಇಲ್ಲಿ ಅಸ್ತಿ ಸಂಖ್ಯೆಯನ್ನು ಬದಲಾಯಿಸುವ ಅಧಿಕಾರಿ ಇಲ್ಲದೆ ಇರುವಾಗ ಪಿಡಿಒ ಅವರು ತಮ್ಮ ಅಧಿಕಾರವನ್ನು ದುರುಪಯೋಗಪಡಿಸಿಕೊಂಡಿದ್ದಾರೆ ಎಂದು ಆರೋಪಿಸಿದ್ದಾರೆ.

ಈ ಸಂಬಂಧ ಹಲವು ದಾಖಲೆಗಳಿದ್ದು, ಪಿಡಿಒ ಅವರ ವಿರುದ್ಧ ಮತ್ತು ಅವರು ಮಾಡಿರುವ ಬೇನಾಮಿ ಅಸ್ತಿ ಬಗ್ಗೆ ತನಿಖೆ ನಡೆಸುವಂತೆ ಜಿ.ಪಂ. ಮುಖ್ಯಕಾರ್ಯನಿರ್ವಾಹಕಾಧಿಕಾರಿಗಳಿಗೆ ಮತ್ತು ಲೋಕಾಯುಕ್ತ ಅಧಿಕಾರಿಗಳಿಗೆ ದೂರು ಸಲ್ಲಿಸಲಾಗಿದೆ. ಇಂತಹ ಭ್ರಷ್ಟ ಅಧಿಕಾರಿ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದ್ದಾರೆ.

# 21ರಂದು ಅಂತಾರಾಷ್ಟ್ರೀಯ ಯೋಗ ದಿನ: ಭಾಗವಹಿಸಲು ಶಾಸಕ ಪ್ರಭು ಚವ್ಹಾಣ ಮನವಿ



ಮಲ್ಲಮ್ಮ ನುಡಿ ವಾರ್ತೆ

ಔರಾಧ:ಜೂ.19:ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ನಿಮಿತ್ತ ಭಾರತೀಯ ಜನತಾ ಪಾರ್ಟಿ ಔರಾದ(ಬಾ) ಮಂಡಲ ವತಿಯಿಂದ ಜೂನ್ 21ರ ಬೆಳಗ್ಗೆ 6 ಗಂಟೆಗೆ ಪಟ್ಟಣದ ಬಸವೇಶ್ವರ ವೃತ್ತದ ಬಳಿ ಯೋಗಾಭ್ಯಾಸ ಕಾರ್ಯಕ್ರಮ ಆಯೋಜಿಸಲಾಗಿದೆ. ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರ ನೇತೃತ್ವದಲ್ಲಿ ಕಾರ್ಯಕ್ರಮ ನಡೆಯಲಿದ್ದು, ನುರಿತ ಯೋಗ ಗುರುಗಳು ಯೋಗ ತರಬೇತಿ ನೀಡುವರು. ಸಮಾಜವು ಆಧುನಿಕತೆಗೆ ಒಗ್ಗಿಕೊಳ್ಳುತ್ತಿರುವಂತೆ ಆಹಾರ ಪದ್ಧತಿಯಲ್ಲಿ ಅವ್ಯವಸ್ಥೆಯಾಗಿ ನಾನಾ ರೋಗಗಳು ಹುಟ್ಟಿಕೊಳ್ಳುತ್ತಿವೆ. ಕೆಲಸದೊತ್ತಡ ಹೆಚ್ಚಾಗಿ ಮಾನಸಿಕವಾಗಿ ದುರ್ಬಲಗೊಳ್ಳುವವರ ಸಂಖ್ಯೆಯು ವಿಪರೀತವಾಗಿ ಹೆಚ್ಚುತ್ತಿದೆ. ರಕ್ತದೊತ್ತಡ, ಮಧುಮೇಹದಂತಹ ಹತ್ತು ಹಲವು ರೋಗಗಳು ಜನರನ್ನು ಬಾಧಿಸುತ್ತಿವೆ. ಈ ಎಲ್ಲ ಸಮಸ್ಯೆಗಳಿಗೆ ಯೋಗ ಒಂದೇ ಪರಿಹಾರವಾಗಿದೆ. ಈ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಬೇಕಿದೆ ಎಂದು ಶಾಸಕರು ತಿಳಿಸಿದ್ದಾರೆ. ಯೋಗವು ಅಂತರರಾಷ್ಟ್ರೀಯ ಮಟ್ಟದಲ್ಲಿ ಮಾನ್ಯತೆ ಪಡೆದಿರುವ ಭಾರತೀಯ ಮೂಲದ ವ್ಯಾಯಾಮ ಮತ್ತು ಆರೋಗ್ಯ ನಿರ್ವಹಣೆಗೆ ಬಹಳ ಪರಿಣಾಮಕಾರಿಯಾದ ಚಟುವಟಿಕೆಯಾಗಿದೆ. ವೇದ ಸಾಹಿತ್ಯದಲ್ಲಿ ಯೋಗದ ಉಲ್ಲೇಖವಿದೆ ಮತ್ತು ಶತಮಾನಗಳಿಂದ ಸಂತರು ಮತ್ತು ಆಧ್ಯಾತ್ಮಿಕ ಗುರುಗಳು ಯೋಗಾಭ್ಯಾಸ ಮಾಡುತ್ತಿದ್ದಾರೆ. ಯೋಗಗುರು ಬಾಬಾ ರಾಮದೇವ ಸೇರಿದಂತೆ ಸಾಕಷ್ಟು ಸಂತರು, ಆಧ್ಯಾತ್ಮಿಕ ಗುರುಗಳು ಯೋಗವನ್ನು ಪಾಶ್ಚಾತ್ಯ ರಾಷ್ಟ್ರಗಳಿಗೆ ಪರಿಚಯಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿಜಿಯವರು ಅಧಿಕಾರವಹಿಸಿಕೊಂಡ ನಂತರ ಯೋಗಕ್ಕೆ ವಿಶ್ವಮಾನ್ಯತೆ ದೊ–ರೆತಿದೆ. ವಿಶ್ವದಾದ್ಯಂತ ಯೋಗ ದಿನವನ್ನು ಆಚರಿಸುತ್ತಿರುವುದು ಹೆಮ್ಮೆಯ ಸಂಗತಿ ಎಂದಿದ್ದಾರೆ.

ದೈಹಿಕ ಹಾಗೂ ಮಾನಸಿಕ ಆರೋಗ್ಯ ಕಾಪಾಡಿಕೊಳ್ಳಲು ಪರಿಣಾಮಕಾರಿ ಮಾರ್ಗವಾಗಿರುವ ಯೋಗ ಪ್ರತಿಯೊಬ್ಬರ ಜೀವನದ ಭಾಗವಾಗಬೇಕಿದೆ. ಈ ದಿಶೆಯಲ್ಲಿ ಪಕ್ಷದಿಂದ ಔರಾದನಲ್ಲಿ ಯೋಗಾಭ್ಯಾಸ ಕಾರ್ಯಕ್ರಮ ಏರ್ಪಡಿಸಲಾಗಿದೆ. ಪಕ್ಷದ ಪ್ರಮುಖರು, ಮಹಾಶಕ್ತಿ ಕೇಂದ್ರ, ಶಕ್ತಿ ಕೇಂದ್ರ, ಬೂತ್ ಅಧ್ಯಕ್ಷರು, ಮೋರ್ಚಾ ಪ್ರಮುಖರು, ಎಲ್ಲ ಪದಾಧಿಕಾರಗಳು, ಕಾರ್ಯಕರ್ತರು, ಶಾಲಾ–ಕಾಲೇಜು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿ ಕಾರ್ಯಕ್ರಮದ ಸದುಪಯೋಗ ಪಡೆಯಬೇಕೆಂದು ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಂಚೆ ಇಲಾಖೆಯಲ್ಲಿ ಹೊಸ ತಂತ್ರಾಂಶ ಅಳವಡಿಕೆ: ಇಂದು,ನಾಳೆ ಅಂಚೆ ಸೇವೆಯಲ್ಲಿ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜೂ.19: ಅಂಚೆ ಇಲಾಖೆಗೆ ಸಂಬಂಧಿಸಿದ "ಸೆಂಟರ್ ಫಾರ್ ಎಕ್ಸೆಲೆನ್ಸ್ ಇನ್ ಟೆಕ್ನಾಲಜಿ" [ಅಇಕಖ] ವಿಭಾಗವು ಅಭಿವೃದ್ಧಿಪಡಿಸಿರುವ "ಎ.ಪಿ.ಟಿ–2.0 [ಅಡ್ವಾನ್ಸ್ಡ್ ಪೋಸ್ಟಲ್ ಟೆಕ್ನಾಲಜಿ] ಎಂಬ ಹೆಸರಿನ ಹೊಸ ತಂತ್ರಾಂಶವನ್ನು ಅಂಚೆ ಇಲಾಖೆಯಲ್ಲಿ ಅಳವಡಿಸಲಾಗುತ್ತಿದೆ. ಈ ತಂತ್ರಾಂಶದ ಅಂತಿಮ ಸಿದ್ದತೆ ಹಿನ್ನೆಲೆಯಲ್ಲಿ ಇದೇ ಜೂನ್ 20 ಹಾಗೂ 21 ರಂದು ಎರಡು ದಿನಗಳ ಕಾಲ ಕಲಬುರಗಿ ವಿಭಾಗದ ಎಲ್ಲಾ ಅಂಚೆ ಕಚೇರಿಯಲ್ಲಿ ಅಂಚೆ ಸೇವೆಯಲ್ಲಿ ವ್ಯತ್ಯಯ ಉಂಟಾಗಲಿದ್ದು, ಸಾರ್ವಜನಿಕರು ಇದಕ್ಕೆ ಸಹಕರಿಸಬೇಕೆಂದು ಕಲಬುರಗಿ ವಿಭಾಗದ ಅಂಚೆ ಅಧೀಕ್ಷಕರಾದ ಆರ್ ಅಶೋಕ್ ಅವರು ತಿಳಿಸಿದ್ದಾರೆ. ಮೇಲ್ಕಂಡ ದಿನದಂದು ಅಂಚೆ ಕಚೇರಿಗಳು ತೆರೆದಿರುತ್ತದೆ. ಆದರೆ ಗ್ರಾಹಕರಿಗೆ ಬಹುತೇಕ ಸೇವೆಗಳು ಸಿಗುವುದಿಲ್ಲ ಹಾಗೂ ವಹಿವಾಟು ಇರುವದಿಲ್ಲ. ವಿಚಾರಣೆಯಂತಹ ಕೆಲ ಸೇವೆಗಳು ಮಾತ್ರ ಲಭ್ಯವಿರುತ್ತವೆ ಎಂದು ಅವರು ತಿಳಿಸಿದ್ದಾರೆ. ಅಂಚೆ ಇಲಾಖೆಯು ಇದೇ ಜೂನ್ 23 ರಂದು ಜನರಿಗೆ ಇನ್ನಷ್ಟು ವೇಗದ ಹೊಸ ಸೇವೆ ನೀಡಲು ಸಜ್ಜಾಗಿದೆ. ಹಳೆಯದಾಗಿರುವ ಎಸ್.ಎ.ಪಿ. (SAP) ಹೆಸರಿನ ತಂತ್ರಾಂಶ ಹಾಗು ನೆಟ್‌ವರ್ಕ್ ಸೇವೆ ಒದಗಿಸುತ್ತಿರುವ ಖುಜಿಥಿಯನ್ನು ಕೈಬಿಡಲಾಗಿದೆ. ಇಲಾಖೆಗೆ ಅಭಿವೃದ್ಧಿ ಪಡಿಸಿರುವ ಹೊಸ ತಂತ್ರಾಶವು ಅತ್ಯಾಧುನಿಕವಾಗಿದೆ.

ಮೈಸೂರಿನ ಇಟ್ಟಿಗೆಗೂಡು ಉಪ ಅಂಚೆ ಕಚೇರಿಯಲ್ಲೂ, ಈ ಹಿಂದೆ ಈ ತಂತ್ರಾಂಶದ ಪ್ರಾಯೋಗಿಕ ಪರೀಕ್ಷೆ ನಡೆಸಲಾಗಿತ್ತು. ನಂತರ ಇಡೀ ಮೈಸೂರು ವಿಭಾಗಕ್ಕೆ ಅದನ್ನು ವಿಸ್ತರಿಸಲಾಗಿತ್ತು. ಜೂನ್ 17 ರಂದು ಬಾಗಲಕೋಟೆ ಹಾಗು ರೈಲ್ವೆ ಮೇಲ್ ಸರ್ವಿಸ್ ನಲ್ಲಿ [ಖಒಖ] ಪ್ರಯೋಗಾರ್ಥ ಪರೀಕ್ಷೆನಡೆದಿದ್ದು, ಈ ಯಶಸ್ವಿನ ಬಳಿಕ ಜೂನ್ 23 ರಂದು ರಾಜ್ಯದ ಪ್ರತಿ ಅಂಚೆ ವಿಭಾಗದ (ಡಿವಿಷನ್) ಒಂದು ಮುಖ್ಯ ಅಂಚೆ ಕಚೇರಿ ಹಾಗೂ ಅದರ ಅಡಿಯಲ್ಲಿರುವ ಎಲ್ಲಾ ಉಪ ಅಂಚೆ ಕಛೇರಿಗಳಲ್ಲಿ ಹೊಸ ತಂತ್ರಾಂಶದ ಮೂಲಕ ಅಧಿಕೃತವಾಗಿ ಕೆಲಸ ನಿರ್ವಹಿಸಲಿದೆ.

ಕಲಬುರಗಿ ಪ್ರಧಾನ ಅಂಚೆ ಕಚೇರಿ ಹಾಗೂ ಇವುಗಳ ಅಡಿಯಲ್ಲಿರುವ ಉಪ ಅಂಚೆ ಕಛೇರಿಗಳಲ್ಲಿ ಹೊಸ ತಂತ್ರಾಂಶದ ಅಡಿಯಲ್ಲಿ ಸೇವೆಗಳು ದೊರೆಯಲಿವೆ. ಕಲಬುರಗಿ ಜಿಲ್ಲೆಯ ಪ್ರಧಾನ ಅಂಚೆ ಕಚೇರಿ, 42 ಉಪ ಅಂಚೆ ಕಛೇರಿಗಳು ಹಾಗು 320 ಶಾಖಾ ಅಂಚೆ ಕಛೇರಿಗಳಲ್ಲಿ ಏಕ ಕಾಲಕ್ಕೆ ಜಾರಿಯಾಗಲಿದೆ. ಅಂಚೆ ಬಟವಾಡೆಗಾಗಿ 'ಇಂಟರ್ನಲ್ ಮೊಬೈಲ್ ಅಪ್ಲಿಕೇಶನ್' ಎಂಬ ಹೊಸ ಹೆಸರಿನ ಆ್ಯಪ್ (App) ಅನ್ನು ಅಭಿವೃದ್ಧಿಪಡಿಸಲಾಗಿದ್ದು, ಇದು ಗ್ರಾಹಕ ಸ್ನೇಹಿಯಾಗಿದೆ. ಇನ್ನು ಮುಂದಿನ ದಿನಗಳಲ್ಲಿ ಜ್ಜಿಯೋ ಕೋಡ್ ಆಧಾರಿತ ಅಂದಾಜು 4 ಮೀಟರ್* 4 ಮೀಟರ್ ಪ್ರತಿ ಗ್ರಿಡ್‌ಗೆ ಅಕ್ಷಾಂಶ ಹಾಗೂ ದತ್ತಾಂಶದ ಕೋ ಅರ್ಡಿನೇಟ್‌ನ ಪ್ರಕಾರ ವಿಶೇಷವಾದ 10 ಕ್ಯಾರೆಕ್ಟರ್ ಅಲ್ಫಾ ನುಮೆರಿಕ್ ಕೋಡ್ ಡಿಜಿಪಿನ್ ಸೇವೆಯನ್ನು ಸಾರ್ವಜನಿಕರೆಲ್ಲರೂ ಬಳಸಿಕೊಳ್ಳಬಹುದಾಗಿದೆ ಎಂದು ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಕ್ಕಳಿಗೆ ಉಚಿತ ನೋಟ್ ಬುಕ್ ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಕಾಂಗ್ರೆಸ್ ಪಕ್ಷದ ರಾಷ್ಟ್ರೀಯ ನಾಯಕ ರಾಹುಲ್ ಗಾಂಧಿ ಜನ್ಮದಿನ ನಿಮಿತ್ತ ಪಟ್ಟಣದ ವೀರಭದ್ರೇಶ್ವರ ಪ್ರಾಥಮಿಕ ಹಾಗೂ ಪ್ರೌಢ ಶಾಲೆಯಲ್ಲಿ ಯುವ ಕಾಂಗ್ರೆಸ್ ಸಮಿತಿ ವತಿಯಿಂದ ಗುರುವಾರ ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಅಭಿಷೇಕ ಪಾಟೀಲ್ ನೇತೃತ್ವದಲ್ಲಿ ಮಕ್ಕಳಿಗೆ ಉಚಿತವಾಗಿ ನೋಟ್ ಪುಸ್ತಕ ವಿತರಿಸಲಾಯಿತು.

ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಅಭಿಷೇಕ ಪಾಟೀಲ್ ಮಾತನಾಡಿ, ದೇಶದ ಸಮಗ್ರ ಅಭಿವೃದ್ಧಿ ಹೊಂದಬೇಕಾದರೆ ಶೈಕ್ಷಣಿಕ ಕ್ಷೇತ್ರದಿಂದ ಮಾತ್ರ ಸಾಧ್ಯ. ಹೀಗಾಗಿ ಅಭಿಮಾನಿ ಬಳಗದವರು ಸನ್ಮಾನ ಮಾಡುವ ನಿಟ್ಟಿನಲ್ಲಿ ಹೂ, ಹಾರ ಮತ್ತು ಶ್ಯಾಲುಗಳಿಗೆ ದುಂದು ವೆಚ್ಚ ಮಾಡದೇ ಅದೇ ಹಣದಲ್ಲಿ ನೋಟ್ ಪುಸ್ತಕ ನೀಡಿದರೆ ಗ್ರಾಮೀಣ ಭಾಗದ ಬಡ ಮಕ್ಕಳಿಗೆ ಉಚಿತವಾಗಿ ನೋಟ್ ಪುಸ್ತಕ ನೀಡುವ ಮೂಲಕ ಅವರ ಸಾಧನೆಗೆ ಸಹಕಾರ ನೀಡೋಣ ಎಂದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಫ್ಸರಮಿಯ, ಗ್ರಾಮೀಣ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಓಂಕಾರ ತುಂಬಾ, ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಉಮೇಶ ಜಮಗಿ, ಗಣೇಶ ಪಾಟೀಲ್, ರಾಕೇಶ ಪಾಟೀಲ್, ಶಿವಾನಂದ ಕಟ್ಟಿಮನಿ, ರಾಹುಲ್ ಉದ್ದಾ, ಕಿಶೋರ ಕಟ್ಟಿಮನಿ, ರಾಹೀಲ್ ಖಿಲ್ಜಿ, ಶ್ರೀನಿವಾದ ಕಲ್ಲೂರ್, ಜಾಫರ್ ಸೇರಿ ಅನೇಕರಿದ್ದರು.

## ಅಂಬೇಡ್ಕರ್ ಮೂರ್ತಿ ಅನಾವರಣ ಭಿತ್ತಿ ಪತ್ರ ಬಿಡುಗಡೆ

# ನೂತನ ಮೂರ್ತಿ ಅನಾವರಣ ಜೂ. 22ಕ್ಕೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಪಟ್ಟಣದ ಮಾಜಿ ಸಚಿವರ ಗೃಹ ಕಚೇರಿಯಲ್ಲಿ ಗುರುವಾರ ತಾಲೂಕಿನ ಬೋತಗಿ ಗ್ರಾಮದಲ್ಲಿ ಜೂ. 22ರಂದು ನಡೆಯಲಿರುವ ಡಾ. ಬಿ.ಆರ್. ಅಂಬೇಡ್ಕರ್ ಅವರ ನೂತನ ಮೂರ್ತಿ ಅನಾವರಣ ಕಾರ್ಯಕ್ರಮದ ಭಿತ್ತಿ ಪತ್ರ ಮಾಜಿ ಸಚಿವ ರಾಜಶೇಖರ ಪಾಟೀಲ್ ಬಿಡುಗಡೆ ಮಾಡಿದರು.

ಮೂರ್ತಿ ಅನಾವರಣ ಸಮಿತಿ ಅಧ್ಯಕ್ಷ ಚಂದ್ರಕಾಂತ ಮೇಲ್ದೊಡ್ಡಿ ಮಾತನಾಡಿ, ಬೋತಗಿ ಗ್ರಾಮದ ನೆಹರು ನಗರದಲ್ಲಿ ಜೂ. 22ರಂದು ಬೆಳಗ್ಗೆ 11 ಗಂಟೆಗೆ ವಿಶ್ವಜ್ಞಾನಿ, ಭಾರತರತ್ನ, ಸಂವಿಧಾನಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ನೂತನ ಮೂರ್ತಿ ಅನಾವರಣ ಕಾರ್ಯಕ್ರಮ ಅದ್ದೂರಿಯಿಂದ ಜರುಗಲಿದೆ ಎಂದು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಅಣದೂರ ವೈಶಾಲಿ ನಗರದ ಭಂತೆ ಧಮ್ಮಾನಂದ ಥೇರೋ ಸಾನಿಧ್ಯ, ಮಾಜಿ ಸಚಿವ ರಾಜಶೇಖರ ಪಾಟೀಲ್ ಅಧ್ಯಕ್ಷತೆ, ವಿಧಾನ ಪರಿಷತ್ ಸದಸ್ಯ ಭೀಮರಾವ ಪಾಟೀಲ್ ಉದ್ಘಾಟಿಸಲಿದ್ದಾರೆ. ಎಂಎಲ್ಸಿ ಡಾ. ಚಂದ್ರಶೇಖರ ಪಾಟೀಲ್ ಸೇರಿ ಅನೇಕ ಗಣ್ಯರು ಭಾಗ ವಹಿಸಲಿದ್ದಾರೆ. ಹೀಗಾಗಿ ಅಂಬೇಡ್ಕರ್ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮ ಯಶಸ್ವಿಮಾಡಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಅಭಿಷೇಕ ಪಾಟೀಲ್, ಯುತ್ ಕಾಂಗ್ರೆಸ್ ಅಧ್ಯಕ್ಷ ಉಮೇಶ ಜಮಗಿ, ಮುಖಂಡರಾದ ಶಾಂತಕುಮಾರ ಅರಳಿ, ಸಂತೋಷ ಅತಿವಾಳ, ನೀಲಕಂಠ ಶಟ್ಟಿ, ಶಿವಕುಮಾರ ಬೆಳಕೇರಾ, ಶಿವರಾಜ ಸಿಂಧನಕೇರಾ, ವಿನೋದ ಖೇರೋಜಿ, ಸಚೀನ ಕಲ್ಲೂರ್, ಅನಿಲ ದೊಡ್ಡಿ ಸೇರಿ ಅನೇಕರಿದ್ದರು.

## ಯಡ್ರಾಮಿ ಪಟ್ಟಣ: ತಂಬಾಕು ಉತ್ಪನ್ನಗಳ ಮಾರಾಟಗಾರರು

# ಕಡ್ಡಾಯವಾಗಿ ಪರವಾನಿಗೆ ಪಡೆದು ಮಾರಾಟ ಮಾಡಲು ಸೂಚನೆ

ಕಲಬುರಗಿ,ಜೂ.19–ಯಡ್ರಾಮಿ ಪಟ್ಟಣದ ವ್ಯಾಪ್ತಿಯಲ್ಲಿ ಬರುವ ತಂಬಾಕು ಉತ್ಪನ್ನಗಳ ಮಾರಾಟಗಾರರು ಕಡ್ಡಾಯವಾಗಿ ಪಟ್ಟಣ ಪಂಚಾಯತ ವತಿಯಿಂದ ಪರವಾನಿಗೆ ಪಡೆದುಕೊಳ್ಳಬೇಕೆಂದು ಯಡ್ರಾಮಿ ಪಟ್ಟಣ ಪಂಚಾಯ್ ಮುಖ್ಯಾಧಿಕಾರಿಗಳು ಪ್ರಕಣೆಯಲ್ಲಿ ತಿಳಿಸಿದ್ದಾರೆ.

ನಗರಾಭಿವೃದ್ಧಿ ಇಲಾಖೆಯ 2022ರ ಮೇ 19ರ ಆದೇಶದನ್ವಯ ಕರ್ನಾಟಕ ಪುರಸಭೆ ವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನ ಮಾರಾಟ ಮಾಡಲು ಪ್ರತ್ಯೇಕ ಪರವಾನಿಗೆ ಪಡೆಯುವುದು ಕಡ್ಡಾಯವಾಗಿದೆ. ಆಳಂದ ಪಟ್ಟಣದ ಕಿರಾಣಿ ಅಂಗಡಿಗಳಲ್ಲಿ ಪಾನ್ ಶಾಪ್‌ಗಳಲ್ಲಿ ಮತ್ತು ಹೋಟೆಲ್‌ಗಳಲ್ಲಿ ತಂಬಾಕು ಉತ್ಪಾದನೆಗಳು ಮಾರಾಟ ಮಾಡುತ್ತಿರುವ ಯಾವುದೇ ಅಂಗಡಿಗಳು ಪಟ್ಟಣ ಪಂಚಾಯತ್ ವತಿಯಿಂದ ಪರವಾನಿಗೆ ಪಡೆದು–ಕೊಂಡು ಮಾರಾಟ ಮಾಡಬೇಕು.

ಹೆಚ್ಚಿನ ಮಾಹಿತಿಗಾಗಿ ಯಡ್ರಾಮಿ ಪಟ್ಟಣ ಪಂಚಾಯತ ಆರೋಗ್ಯ ಶಾಖೆಯ ಕಿರಿಯ ಆರೋಗ್ಯ ನಿರೀಕ್ಷಕ ಶಿವಾನಂದ ಶಾವರಿ ಇವರ ಮೊಬೈಲ್ ಸಂಖ್ಯೆ 9964252626ಗೆ ಸಂಪರ್ಕಿಸಲು ಕೋರಲಾಗಿದೆ.

# ಶಾಲೆಗೆ ಬಾಂಬ್ ಬೆದರಿಕೆ

ಮಲ್ಲಮ್ಮ ನುಡಿ ವಾರ್ತೆ

ಮೈಸೂರು:ಜೂ.19:–ಬನ್ನೂರು ರಸ್ತೆಯಲ್ಲಿರುವ ಜ್ಞಾನಸರೋವರ ವಸತಿ ಶಾಲೆಗೆ ಬಾಂಬ್ ಇಟ್ಟಿರುವುದಾಗಿ ಅನಾಮಧೇಯ ವ್ಯಕ್ತಿ ಇ–ಮೇಲ್ ಕಳಿಸಿದ್ದು, ದಕ್ಷಿಣ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮಧ್ಯಾಹ್ನ 12.30ಕ್ಕೆ ಶಾಲೆಯ ಇ–ಮೇಲ್ ವಿಳಾಸಕ್ಕೆ ಸಂದೇಶ ಬಂದಿತು. ಹೈದರಾಬಾ ದ್ ನಲ್ಲಿ ಈಚೆಗೆ ಅತ್ಯಾಚಾರಕ್ಕೊಳಗಾದ ಸಂತ್ರಸ್ತೆಗೆ ನ್ಯಾಯ ಒದಗಿಸಲು ಶಾಲೆಯಲ್ಲಿ ಬಾಂಬ್ ಸ್ಫೋಟಿಸುತ್ತಿದ್ದೇವೆ. ಅತ್ಯಾಚಾರ ಪ್ರಕರಣದ ಆರೋಪಿ ಬೆಂಗಳೂರಿನವನಾಗಿದ್ದು, ಆತನ ವಿರುದ್ಧ ಪೊಲೀಸರು ಸರಿಯಾಗಿ ತನಿಖೆ ನಡೆಸಿಲ್ಲ. ವಿದ್ಯಾರ್ಥಿಗಳು ಸತ್ತರಷ್ಟೇ, ಪೊಲೀಸರು ಎಚ್ಚೆತ್ತು–



ಕೊಂಡು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸುತ್ತಾರೆ ಎಂಬ ಬರಹವುಳ್ಳ ಇ–ಮೇಲ್ ಕಳಿಸಿದ್ದಾರೆ ಎಂದು ಪೊಲೀಸರು ತಿಳಿಸಿದರು.

ಶಾಲೆಯ ಆಡಳಿತ ಮಂಡಳಿ ನೀಡಿದ ದೂರನ್ನು ಆಧರಿಸಿ ಪರಿಶೀಲನೆ ನಡೆಸಿದ್ದೇವೆ, ಯಾವುದೇ ಸ್ಫೋಟಕ ವಸ್ತುಗಳು ಕಂಡುಬಂದಿಲ್ಲ. ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ್ದು, ಇ–ಮೇಲ್ ಕಳಿಸಿದವರ ಪತ್ತೆಗೆ ಕ್ರಮವಹಿಸಲಾಗಿದೆ. ಶಾಲೆಯಲ್ಲಿ ಬಾಂಬ್ ನಿಷ್ಕ್ರಿಯ ದಳ, ಶ್ವಾನ ದಳ ಹಾಗೂ ವಿಧ್ವಂಸಕ ಕೃತ್ಯ ತಡೆ ತಂಡ ಪರಿಶೀಲನೆ ನಡೆಸಿದೆ ಎಂದು ಎಸ್.ಪಿ ಎನ್.ವಿಷ್ಣುವರ್ಧನ್ ತಿಳಿಸಿದರು.

# ಮೊರೆರ ಬೆಟ್ಟಗಳನ್ನು ವಿಶ್ವ ಪಾರಂಪರಿಕ ತಾಣಗಳನ್ನಾಗಿ ಮಾಡಲಾಗುವುದು– ಸಚಿವ ಎಚ್.ಕೆ. ಪಾಟೀಲ್



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆ ಗಂಗಾವತಿ ತಾಲ್ಲೂಕಿನ ಹಿರೇಬೆಣಕಲನ ಮೊರೆರ ಬೆಟ್ಟಗಳನ್ನು ವಿಶ್ವ ಪಾರಂಪರಿಕ ತಾಣಗಳನ್ನಾಗಿ ಮಾಡಲಾಗುವುದು ಎಂದು ಕಾನೂನು. ನ್ಯಾಯ. ಮಾನವ ಹಕ್ಕುಗಳು. ಸಂಸದೀಯ ವ್ಯವಹಾರ. ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್. ಕೆ. ಪಾಟೀಲ್ ಹೇಳಿದರು.

ಅವರು ಮಂಗಳವಾರ ಕೊಪ್ಪಳ ಜಿಲ್ಲೆಯ ನಮ್ಮ ಸ್ಮಾರಕ ದರ್ಶನ ಮತ್ತು ಸ್ಮಾರಕಗಳ ಸಂರಕ್ಷಣೆಯ ಪ್ರವಾಸದ ಅಂಗವಾಗಿ ಗಂಗಾವತಿ ತಾಲ್ಲೂಕಿನ ಹಿರೇಬೆಣಕಲನ ಮೊರೆರ ಬೆಟ್ಟಕ್ಕೆ ಭೇಟಿ ನೀಡಿ ವೀಕ್ಷಣೆ ನಂತರ ಪತ್ರಕರ್ತರಿಗೆ ಮಾಹಿತಿ ನೀಡಿ ಮಾತನಾಡಿದರು.

ಹಿರೇಬೆಣಕಲ್ ಮೊರೆರ ಬೆಟ್ಟಗಳು ನಮ್ಮ ರಾಷ್ಟ್ರದಲ್ಲಿಯೆ ಪ್ರಾಗೈತಿಹಾಸಿಕ ಸ್ಥಳಗಳಾಗಿದ್ದು, ಇವುಗಳು 5 ರಿಂದ 6 ಸಾವಿರ ವರ್ಷಗಳ ಇತಿಹಾಸ ಹೊಂದಿವೆ. ಇಂತಹ ಸ್ಥಳಗಳು ನಮ್ಮ ದೇಶದಲ್ಲಿ ಎರಡು ಕಡೆ ಮಾತ್ರ ಇದ್ದು ಮೇಘಾಲಯ ರಾಜ್ಯದಲ್ಲಿ ಬಿಟ್ಟರೆ ಅದು ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲ್ಲೂಕಿನಲ್ಲಿರುವ ಮೊರೆರ ಬೆಟ್ಟಗಳು. ಇವು ಆದಿಮಾನವರು ವಾಸವಾಗಿದ್ದ ಸ್ಥಳಗಳಾಗಿವೆ ಎಂದು ಹೇಳಿದರು.

ಹಿರೇಬೆಣಕಲ್ ಮೋರೆರ ಬೆಟ್ಟಗಳನ್ನು ವಿಶ್ವಪಾರಂಪರಿಕ ತಾಣವಾಗಲು ಏನು ಮಾಡಬೇಕು. ಹೇಗೆ ಮಾಡಬೇಕು ಎಂಬ ಯೋಜನೆ ಆದಷ್ಟು ಬೇಗನೆ ರೂಪಿಸುವುದರ ಜೊತೆಗೆ ಅದರ ರಕ್ಷಣೆ ಹಾಗೂ ಆಕರ್ಷಕ ಪ್ರವಾಸಿ ತಾಣವನ್ನಾಗಿ ಅಭಿವೃದ್ಧಿ ಪಡಿಸಲಾಗುವುದು. ಉತ್ತರ ಕರ್ನಾಟಕ ಹಾಗೂ ಕಲ್ಯಾಣ ಕರ್ನಾಟಕ ಭಾಗದಲ್ಲಿ ಅದ್ಭುತವಾದ ಐತಿಹಾಸಿಕ ಸ್ಥಳಗಳು ನೋಡಸಿಗುತ್ತವೆ. ನಮ್ಮ ಇಲಾಖೆಯಿಂದ ಪ್ರಾಚ್ಯ ವಸ್ತುಗಳು ಹಾಗೂ ಸ್ಮಾರಕಗಳನ್ನು ಸಂರಕ್ಷಣೆ ಜೊತೆಗೆ ಅವುಗಳ ಇತಿಹಾಸವನ್ನು ಮುಂದಿನ ಜನಾಂಗಕ್ಕೆ ತಿಳಿಸುವ ಕೆಲಸವನ್ನು ಮಾಡಲಾಗುತ್ತಿದೆ. ಸ್ಮಾರಕಗಳನ್ನು ದತ್ತು ಪಡೆಯಲು ಸಾರ್ವಜನಿಕರು ಮುಂದೆ ಬಂದರೆ ಅವರಿಗೆ ದತ್ತು ಕೊಡುವ ಕೆಲಸವನ್ನು ಮಾಡಲಾಗುತ್ತಿದೆ ಎಂದು ಹೇಳಿದರು.

ಹಿರೇಬೆಣಕಲನಲ್ಲಿ ಆದಿಮಾನವರು ವಾಸಿಸಿದ ಡಾಲಮಿನ್ಸ್ ಅಂದರೆ ಗದ್ದುಗೆಗಳು. ಅವರ ಸಮಾಧಿಗಳು. ಅವರು ಸುಮಾರು 5 ಸಾವಿರ ವರ್ಷಗಳ ಹಿಂದೆ ಬಿಡಿಸಿದ ಚಿತ್ರಗಳು ಗುಡ್ಡದಲ್ಲಿ ಇಂದು ಉಳಿಯಬೇಕಾದರೆ ಎಂತಹ ಬಣ್ಣ ಉಪಯೋಗ ಮಾಡಿರಬೇಕು. ಇಂದು ನಾವು ಎಂತಹ ಚಿತ್ರ ಬಿಡಿಸಿದರು ನೂರು ವರ್ಷ ಉಳಿಯುವದಿಲ್ಲ ಎಂದರು.

ಬೆಂಗಳೂರಿನ ವೆಂಕಟಪ್ಪ ಆರ್ಟ್ ಗ್ಯಾಲರಿಯಲ್ಲಿ ಹಿರೇಬೆಣಕಲ್ ಮೊರೆರ ಬೆಟ್ಟದ ಪ್ರಾಗೈತಿಹಾಸಿಕ ಸ್ಥಳಗಳ ಕುರಿತಾಗಿ ಆಗಸ್ಟ್ ತಿಂಗಳ ಒಳಗಾಗಿ ವಸ್ತು ಪ್ರದರ್ಶನ ಏರ್ಪಡಿಸುವಂತೆ ಪುರಾತತ್ವ. ಸಂಗ್ರಹಾಲಯಗಳು ಮತ್ತು ಪಾರಂಪರಿಕ ಇಲಾಖೆಯ ಆಯುಕ್ತರಿಗೆ ಸಚಿವರು ಸೂಚನೆ ನೀಡಿದರು. ಮೊರೆರ ಬೆಟ್ಟಗಳನ್ನು ವಿಶ್ವ ಪಾರಂಪರಿಕ ತಾಣಗಳ ಪಟ್ಟಿಯಲ್ಲಿ ಸೇರಿಸುವದಕ್ಕೆ ಸಂಬಂಧಿಸಿದಂತೆ ಇಂಟ್ಯಾಕ್ ಸಂಸ್ಥೆಯವರಿಗೆ ಯೋಜನೆ ರೂಪಿಸಲು ಜವಾಬ್ದಾರಿ ನೀಡಲಾಗಿದೆ ಎಂದರು.

ಇಂತಹ ಸ್ಥಳಗಳ ಬಗ್ಗೆ ಜಪಾನ್, ಜರ್ಮನಿಯವರಿಗೆ ಮಾಹಿತಿ ನೀಡಿದರೆ ಅವರು 5 ರಿಂದ 6 ತಿಂಗಳಲ್ಲಿ ಇಲ್ಲಿಗೆ ಬಂದು ಬಿಡುತ್ತಾರೆ ಅವರ ಸ್ವಭಾವ ವೈಜ್ಞಾನಿಕ ಮನೋಭಾವದಾಗಿದೆ. ಹಿರೇಬೆಣಕಲ್ ಮೊರೆರ ಬೆಟ್ಟಗಳನ್ನು ಜಾಗತಿಕವಾಗಿ ವಿಶ್ವ ಪಾರಂಪರಿಕ ಸ್ಥಳವನ್ನಾಗಿ ಮಾಡಲು ನಮ್ಮ ಸರ್ಕಾರ ದೃಢ ಹೆಜ್ಜೆ ಇಡಲಿದೆ. ಆದಷ್ಟು ಬೇಗನೆ ಕೊಪ್ಪಳ ಜಿಲ್ಲೆಯಲ್ಲಿ ಪ್ರಾಚ್ಯವಸ್ತು ಇಲಾಖೆಯ ಕಛೇರಿಯನ್ನು ಆರಂಭಿಸಲಾಗುವುದು ಎಂದು ಹೇಳಿದರು.

ಇತಿಹಾಸಕಾರರಾದ ಶರಣಬಸಪ್ಪ ಕೋಳ್ಕರ್ ಅವರು ಮೊರೆರ ಬೆಟ್ಟದ ಕುರಿತು ಸಚಿವರಿಗೆ ಮಾಹಿತಿ ನೀಡಿ ಮಾತನಾಡಿ ಆದಿಮಾನವರು ಜೀವಿಸಿದ ಕುರುವುಗಳು ಹಿರೇಬೆಣಕಲ್ ಮೊರೆರ ಬೆಟ್ಟಗಳಲ್ಲಿ ಸಿಗುತ್ತವೆ. ಇವರ ಅವಧಿಯಲ್ಲಿ ಕಬ್ಬಿಣವನ್ನು ಕಂಡು ಹಿಡಿದ ಕಾರಣ ಇದನ್ನು ಕಬ್ಬಿಣದ ಯುಗ ಎಂದು ಕರೆಯಲಾಗುತ್ತದೆ.

ಕ್ರಿ.ಪೂ. 3 ಸಾವಿರ ವರ್ಷಗಳ ಹಿಂದೆ ಮೊರೆರ ಬುಡಕಟ್ಟು ಜನರು ಇಲ್ಲಿ ವಾಸಿಸುತ್ತಿದ್ದರು. ಈ ಜನಾಂಗ ಪುನರ್ ಜನ್ಮದಲ್ಲಿ ನಂಬಿಕೆ ಉಳ್ಳವರಾಗಿದ್ದರು. ಇವರು ಸತ್ತವರಿಗಾಗಿ ದೊಡ್ಡ– ದೊಡ್ಡ ಸಮಾಧಿಗಳನ್ನು ಕಟ್ಟಿಸಿದ್ದರು. ಇಲ್ಲಿ ಈ ಹಿಂದೆ 500 ಇದ್ದ ಮೋರೆರ ಸಮಾಧಿಗಳು ಈಗ 100 ರಿಂದ 200 ಉಳಿದಿವೆ. ಇದು ಯುನೆಸ್ಕೋ ತಾತ್ಕಾಲಿಕ ಪಟ್ಟಿಯಲ್ಲಿ ಈ ಹಿಂದೆ ಎರಡು ಸಲ ಸೇರ್ಪಡೆಯಾಗಿತ್ತು. ಬೇ–ಟೆಗಾರಿಕೆ ಪಶುಪಾಲನೆ ಸೇರಿದಂತೆ ಇತರೆ ಹಲವಾರು ಚಿತ್ರಗಳನ್ನು ಅವರು ಬಿಡಿಸಿರುವುದು ಗುಹೆಗಳಲ್ಲಿ ಇಂದು ಕಾಣಸಿಗುತ್ತವೆ ಎಂದು ಸಚಿವರಿಗೆ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಮಾಜಿ ಸಚಿವರಾದ ಅಮರೇಗೌಡ ಬಯ್ಯಾಪುರ, ಮಾಜಿ ವಿಧಾನ ಪರಿಷತ್ ಸದಸ್ಯರಾದ ಎಚ್.ಆರ್. ಶ್ರೀನಿವಾಸ, ಜಿಲ್ಲಾಧಿಕಾರಿ ನಲಿನ್ ಅತುಲ್, ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ, ಪುರಾತತ್ವ. ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ಆಯುಕ್ತರಾದ ದೇವರಾಜ, ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರಾದ ನಾಗರಾಜ ಸೇರಿದಂತೆ ಇತರೆ ಅಧಿಕಾರಿಗಳು ಮತ್ತು ಹಿರೇಬೆಣಕಲ್ ಗ್ರಾಮಸ್ಥರು ಸೇರಿದಂತೆ ಇತರೆ ಹಲವಾರು ಜನರು ಉಪಸ್ಥಿತರಿದ್ದರು.

## ಮುಂಗಾರು ಹಂಗಾಮಿಗೆ ಬಿತ್ತನೆ ಬೀಜ ಹಾಗೂ ಡಿ.ಎ.ಪಿ. ರಸಗೊಬ್ಬರ ದಾಸ್ತಾನು

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.19–ಕಲಬುರಗಿ ಜಿಲ್ಲೆಯ ಎಲ್ಲಾ ರೈತ ಸಂಪರ್ಕ ಕೇಂದ್ರಗಳಲ್ಲಿ ಈವರೆಗೆ ತೊಗರಿ, ಹೆಸರು, ಉದ್ದು, ಸೋಯಾಅವರೆ, ಸೂರ್ಯಕಾಂತಿ ಹಾಗೂ ಮೆಕ್ಕೆಜೋಳ ಸೇರಿದಂತೆ ಒಟ್ಟು 16,054 ಬಿತ್ತನೆ ಬೀಜ ದಾಸ್ತಾನು ಮಾಡಲಾಗಿದ್ದು, ಇದರಲ್ಲಿ 11,568 ಕ್ವಿ. ಬೀಜ ರೈತರಿಗೆ ವಿತರಣೆ ಮಾಡಲಾಗಿದ್ದು, 4,486 ಕ್ವಿ. ಬಿತ್ತನೆ ಬೀಜ ರೈತ ಸಂಪರ್ಕ ಕೇಂದ್ರಗಳಲ್ಲಿ ಲಭ್ಯವಿರುತ್ತದೆ ಎಂದು ಕಲಬುರಗಿ ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ಪ್ರಸಕ್ತ 2025–26ನೇ ಸಾಲಿನ ಮುಂಗಾರು ಹಂಗಾಮಿನ ಬೀಜಗಳ ಪೂರೈಕೆ ಕಾರ್ಯಕ್ರಮದಡಿ ಕೇಂದ್ರ ಕಚೇರಿಯಿಂದ ಒಟ್ಟು 27,814 ಕ್ವಿ. ಬಿತ್ತನೆ ಬೀಜಗಳ ಕಾರ್ಯಕ್ರಮ ನೀಡಲಾಗಿದ್ದು, ಸದರಿ ಕಾರ್ಯಕ್ರಮದ ಅನುಗುಣವಾಗಿ ಸಂಬಂಧಪಟ್ಟ ಬಿತ್ತನೆ ಬೀಜ ಸರಬರಾಜು ಸಂಸ್ಥೆಗಳಿಗೆ 35,806 ಕ್ವಿ. ಇಂಡೆಂಟ್ ನೀಡಲಾಗಿದೆ.

ಅದೇ ರೀತಿ ಜಿಲ್ಲೆಗೆ 15562.39 ಕ್ವಿ. ಸೋಯಾಅವರೆ ಬೀಜದ ಕಾರ್ಯಕ್ರಮ ನೀಡಲಾಗಿದ್ದು, ಸಂಬಂಧಪಟ್ಟ ಸರಬರಾಜು ಸಂಸ್ಥೆಗಳಿಗೆ 25,925 ಕ್ವಿ. ಇಂಡೆಂಟ್ ನೀಡಲಾಗಿದ್ದು, ಇಲ್ಲಿಯವರೆಗೆ 10,771 ಕ್ವಿ. ಸರಬರಾಜು ಮಾಡಲಾಗಿದ್ದು, ಅದರಲ್ಲಿ 10,470 ಕ್ವಿ ಸೋಯಾಅವರೆ ಬೀಜ ರೈತರಿಗೆ ವಿತರಣೆ ಮಾಡಲಾಗಿದ್ದು, 300 ಕ್ವಿ. ಬೀಜ ಲಭ್ಯವಿರುತ್ತದೆ. ಬಹುತೇಕ ಪ್ರಮಾಣ ಸೋಯಾಅವರೆ ಬೀಜ ಮಧ್ಯಪ್ರದೇಶದ ಇಂದೋರ ನಗರದಿಂದ ಸರಬರಾಜು ಆಗುತ್ತಿದ್ದು, ಕಳೆದ ಮೂರು–ನಾಲ್ಕು ದಿನದಿಂದ ಇಂದೋರನಲ್ಲಿ ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದಾಗಿ ಉಳಿದ ಪ್ರಮಾಣದ ಸೋಯಾಅವರೆ ಬೀಜ ಸರಬರಾಜು ವಿಳಂಬವಾಗುತ್ತಿದ್ದು, 2–3 ದಿನಗಳಲ್ಲಿ ಉಳಿದ ಸೋಯಾಅವರೆ ಬೀಜ ರೈತರಿಗೆ ವಿತರಿಸಲು ಕ್ರಮ ಜರುಗಿಸಲಾಗುತ್ತಿದ್ದು, ಬೀಜದ ಕೊರತೆ ಇರುವುದಿಲ್ಲ ಎಂದು ಅವರು ತಿಳಿಸಿದ್ದಾರೆ.

ಮುಂದುವರೆದು 2025–26ನೇ ಸಾಲಿನ ಮುಂಗಾರು ಹಂಗಾಮಿಗೆ 89,898 ಮೆ.ಟನ್ ರಸಗೊಬ್ಬರ ಜಿಲ್ಲೆಗೆ ಹಂಚಿಕೆಯಾಗಿದ್ದು, ಏಪ್ರಿಲ್ ನಿಂದ ಜೂನ್ ಮಾಹೆವರೆಗಿನ ಬೇಡಿಕೆಯು 44,037 ಮೆ.ಟನ್ ಇರುತ್ತದೆ. ಇಲ್ಲಿಯವರೆಗೆ 52,070 ಮೆ.ಟನ್ ರಸಗೊಬ್ಬರ ಜಿಲ್ಲೆಗೆ ಪೂರೈಕೆಯಾಗಿದ್ದು, 24,248 ಮೆ.ಟನ್ ವಿತರಣೆಯಾಗಿದ್ದು, 27,822 ಮೆ.ಟನ್ ನಷ್ಟು ಲಭ್ಯವಿರುತ್ತದೆ. ಡಿ.ಎ.ಪಿ ರಸಗೊಬ್ಬರಕ್ಕೆ ಸಂಬಂಧಿಸಿದಂತೆ ಜೂನ್ ಮಾಹೆವರೆಗೆ 18,425 ಮೆ. ಟನ್ ಬೇಡಿಕೆ ಇರುತ್ತದೆ. ಇಲ್ಲಿಯವರೆಗೆ 16,047 ಮೆ.ಟನ್ ಡಿ.ಎ.ಪಿ ರಸಗೊಬ್ಬರ ಸರಬರಾಜು ಆಗಿದ್ದು, 9,075 ಮೆ. ಟನ್ ನಷ್ಟು ವಿತರಣೆ ಮಾಡಲಾಗಿದ್ದು, 6,972 ಮೆ. ಟನ್ ಡಿ.ಎ.ಪಿ ರಸಗೊಬ್ಬರ ಮಾರಾಟಗಾರರಲ್ಲಿ ಲಭ್ಯವಿರುತ್ತದೆ. 2,400 ಮೆ.ಟನ್ ಡಿ.ಎ.ಪಿ. ಸರಬರಾಜಿಗೆ ಬೇಡಿಕೆ ಕೇಂದ್ರ ಕಛೇರಿಗೆ ಮನವಿಯನ್ನು ಸಲ್ಲಿಸಿದ್ದು, ಮುಂದಿನ 8–10 ದಿನಗಳಲ್ಲಿ ಉಳಿದ 2,400 ಮೆ. ಟನ್ ಡಿ.ಎ.ಪಿ ರಸಗೊಬ್ಬರವನ್ನು ಪಿ.ಎ.ಸಿ.ಎಸ್., ಎಫ್‌ಪಿಓಎಸ್ (PACs, FPOs) ಹಾಗೂ ಖಾಸಗಿ ಮಾರಾಟಗಾರರ ಮೂಲಕ ವಿತರಿಸಲು ಕ್ರಮ ಜರುಗಿಸಲಾಗುತ್ತದೆ.

## ಇಂದು ವಿದ್ಯುತ್ ವ್ಯತ್ಯಯ

ಬಳ್ಳಾರಿ,ಜೂ.19–ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–1 ರ ವ್ಯಾಪ್ತಿಗೆ ಬರುವ 110/11 ಕೆವಿಯ ಬಿಸಿಲಹಳ್ಳಿ ಮುಸ್ ನಿಂದ ವಿದ್ಯುತ್ ಸರಬರಾಜು ಆಗುವ ಎಫ್–63 ಮತ್ತು ಎಫ್–64 ನ ನಿರ್ವಹಣೆ ಕಾಮಗಾರಿ ಕೈಗೊಳ್ಳುತ್ತಿರುವುರಿಂದ ಜೂ.20 ರಂದು ಬೆಳಿಗ್ಗೆ 11 ಗಂಟೆಯಿಂದ ಸಂಜೆ 06 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. **ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:** ರೂಪನಗುಡಿ, ಗ್ರಾಂಡ್ ಫಂಕ್ಷನ್ ಹಾಲ್, ವೆಂಕಟರಮಣ ನಗರ, ನಬೀ ಕಾಲೋನಿ, ಅಂಜಿನಪ್ಪ ನಗರ, ಶ್ರೀರಾಂಪುರ ಕಾಲೋನಿ, ಗೋನಾಳ್, ವರಬಸಪ್ಪ ಗುಡಿ ಹಾಗೂ ಮುಂತಾದ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


## ಆರೈಕೆದಾರರಿಗೆ ಮಾಹೆಯಾನ 1000 ರೂ. ಗಳ ಪ್ರೋತ್ಸಾಹಧನ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.19–ಪ್ರಸಕ್ತ 2025–26ನೇ ಸಾಲಿಗೆ ಕಲಬುರಗಿ ಜಿಲ್ಲೆಯ ಸೆರೆಬ್ರಲ್ ಪಾಲ್ಸಿ, ಮಸ್ಕ್ಯುಲರ್ ಡಿಸ್ಟ್ರೋಫಿ, ಪಾರ್ಕಿನ್ಸನ್, ಮಲ್ಟಿಪಲ್ ಸ್ಕ್ಲೆರೋಸಿಸ್, ಬಹುವಿಧ ಅಂಗವಿಕಲತೆ (ಶ್ರವಣ ಮತ್ತು ಅಂಧತ್ವ), ಇಂಟೆಲೆಕ್ಚುಲ್ ಡಿಸೇಬಿಲಿಟಿ (ಬೌದ್ಧಿಕ ವಿಕಲತೆ) ಮತ್ತು ಆಟಿಸಂ ಕಾಯಿಲೆಯಿಂದ ಬಳಲುತ್ತಿರುವ ವ್ಯಕ್ತಿಗಳ ಆರೈ–ಕೆದಾರರಿಗೆ ಮಾಹೆಯಾನ 1000 ರೂ. ಗಳ ಪ್ರೋತ್ಸಾಹಧನ ನೀಡಲಾಗುತ್ತಿದ್ದು, ಇದಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ. ಅರ್ಹ ಆರೈ–ಕೆದಾರರು ಕಲಬುರಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿಯಿಂದ ನಿಗದಿತ ಅರ್ಜಿ ನಮೂನೆಯನ್ನು ಪಡೆದು ಭರ್ತಿ ಮಾಡಿ 2025ರ ಜೂನ್ 30 ರೊಳಗಾಗಿ ಕಲಬುರಗಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿಯಲ್ಲಿ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ–9972563646, ಕಚೇರಿ ದೂರವಾಣಿ ಸಂಖ್ಯೆ 08472–235222, ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತರು (ಎಮ್.ಆರ್. ಡಬ್ಲ್ಯೂ) ತಾಲೂಕು ಪಂಚಾಯತ ಕಚೇರಿ ಕಲಬುರಗಿ–9972079714, ಅಫಜಲಪೂರ–(ಯು.ಆರ್. ಡಬ್ಲ್ಯೂ)–8880023232, ಆಳಂದ–9483054495, ಜೇವರ್ಗಿ–9741875881, ಚಿತ್ತಾಪೂರ–9845204328, ಚಿಂಚೋಳಿ–9880671171, ಹಾಗೂ ಸೇಡಂ–9902417925 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

## ಡಾ. ಅಜಯ್‌ಸಿಂಗ್, ಸಚಿವ ಸತೀಶ ಜಾರಕಿಹೊಳಿ ಭೇಟಿ:ನರಿಬೋಳ– ಚಾಮನೂರು ಸೇತುವೆ ಪೂರ್ಣಗೊಳಿಸಲು ಮನವಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.19:ಕಲಬುರಗಿ ಜಿಲ್ಲೆಯ ಜೇವರ್ಗಿ ತಾಲೂಕಿನ ನರಿಬೋಳಿ ಗ್ರಾಮ ಮತ್ತು ಚಿತ್ತಾಪುರದ ಚಾಮನೂರು ಗ್ರಾಮಕ್ಕೆ ಸಂಪರ್ಕಿಸುವ ನರಿಬೋಳಿ–ಚಾಮನೂರು ಸೇತುವೆ ಕಾಮಗಾರಿ ಮುಕ್ತಾಯಕ್ಕೆ ಅಗತ್ಯವಿರುವ 37 . 60 ಕೋಟಿ ರು ಅನುದಾನ ಬಿಡುಗಡೆ ಮಾಡುವಂತೆ ಲೋಕೋಪಯೋಗಿ ಇಲಾಖೆಯ ಮೇಲೆ ಒತ್ತಡ ಹೆಚ್ಚಾಗುತ್ತಿದೆ.


ಕೆಕೆಆರ್‌ಡಿಬಿ ಅಧ್ಯಕ್ಷ ಹಾಗೂ ಜೇವರ್ಗಿ ಶಾಸಕ ಡಾ. ಅಜಯ್ ಧರ್ಮಸಿಂಗ್ ಅವರು ಬುಧವಾರ ಬೆಂಗಳೂರಲ್ಲಿ ಪಿಡಬ್ಲೂಡಿ ಸಚಿವ ಸತೀಶ ಜಾರಕಿಹೊಳಿ ಅವರನ್ನು ಭೇಟಿ ಮಾಡಿ 37 ಕೋಟಿರೂ ಅನುದಾನ ಒದಗಿಸುವ ಮೂಲಕ ಕಾಮಗಾರಿ ಪೂರ್ಣಗೊಳಿಸಿ ಜನರಿಗೆ ಅನುಕೂಲ ಮಾಡಿಕೊಡುವಂತೆ ಆಗ್ರಹಿಸಿದ್ದಾರೆ.

2017 ರಲ್ಲೇ ಈ ಕಾಮಗಾರಿಗೆ 50 ಕೋಟಿ ರು ಮಂಜೂರಾತಿ ನೀಡಲಾಗಿತ್ತು. ಈ ಸೇತುವೆ ಕಾಮಗಾರಿಗೆ ಸಂಬಂಧಪಟ್ಟಂತೆ ನರಿಬೋಳದಲ್ಲಿ 12. 29 ಎಕರೆ, ಚಾಮನೂರಲ್ಲಿ 10. 32 ಎಕರೆ ರೈತರ ಜಮೀನು ಸ್ವಧೀನ ಪ್ರಕ್ರಿಯೆ ಚಾಲ್ತಿಯಲ್ಲಿದೆ. ಈ ಕೆಲಸವೂ ತ್ವರಿತವಾಗಬೇಕು. ಭೂ ಸ್ವಾಧೀನದ ವಿಂಳಂಬದಂದಲೇ ಯೋಜನೆ ಪೂರ್ಣವಾಗದೆ ವಿಳಂಬವಾಗುತ್ತಿರುವ ಬಗಗೆಯೂ ಡಾ. ಅಜಯ್ ಸಿಂಗ್ ಅವರು ಸಚಿವರ ಗಮನ ಸೆಳೆದರು.

ನರಿಬೋಳ–ಚಾಮನೂರು ಸೇತುವೆಯ ಕಾಮಗಾರಿಗೆ 37. 60 ಕೋಟಿ ರು ಅನುದಾನ ಅಗತ್ಯವಿದೆ. ಪಿಡಬ್ಲೂಡಿ ಜತೆಗೇ ಕೆಕೆಆರ್‌ಡಿಬಿ ಕೂಡಾ ಕೈ ಜೋಡಿಸುವ ಮೂಲಕ ಸದರಿ ಸೇತುವೆ ಕಾಮಗಾರ ಬೇಗ ಪೂರ್ಣಗೊಳಿಸುವ ವಿಷಯದಲ್ಲಿ ಗಂಭೀರ ಚಿಂತನೆ ಸಾಗಿದೆ ಎಂದು ಡಾ. ಅಜಯ್ ಸಿಂಗ್ ಇದೇ ಸಂದರ್ಭದಲ್ಲಿ ಸ್ಪಷ್ಟಪಡಿಸದ್ದಾರೆ.

ಪಿಡಬ್ಲೂಡಿ ಸಚಿವ ಸತೀಶ ಜಾರಕಿಹೊಳಿಯವರನ್ನು ಭೇಟಿಯಾದ ಸಂದರ್ಭದಲ್ಲಿ ಕೆಕೆಆರ್‌ಡಿಬಿ ಅಧ್ಯಕ್ಷರಾದ ಡಾ. ಅಜಯ್ ಸಿಂಗ್ ಅವರೊಂದಿಗೆ ಕಲಬುರಗಿ ಶಾಸಕರಾದ ಅಲ್ಲಂಪ್ರಭು ಪಾಟೀಲರು ಜೊತೆಗಿದ್ದು ಅನುದಾನ ಬಿಡುಗಡೆ ಹಾಗೂ ಕಾಮಗಾರಿ ಪೂರ್ಣಗೊಳಿಸುವ ಅಗತ್ಯತೆ ಒತ್ತಿ ಹೇಳಿದರು.

# ಉತ್ತಮ ಆರೋಗ್ಯವೇ ಶ್ರೇಷ್ಠ ಸಂಪತ್ತು:ಅರವಿಂದ ಕುಲಕರ್ಣಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 19 : ಮನುಷ್ಯನು ಏನೆಲ್ಲಾ ಸಂಪಾದಿಸಿದರೂ ಉತ್ತಮ ಆರೋಗ್ಯ ಇರದಿದ್ದರೆ ಎಲ್ಲವೂ ಶೂನ್ಯ, ಆರೋಗ್ಯವೇ ಶ್ರೇಷ್ಠ ಸಂಪತ್ತು ಎಂದು ಐಸಿಟಿಸಿ ಪ್ರಯೋಗಶಾಲಾ ತಂತ್ರಜ್ಞರಾದ ಅರವಿಂದ ಕುಲಕರ್ಣಿ ಅಭಿಪ್ರಾಯಪಟ್ಟರು.

ಅವರು ಇಂದು ಯಾಕತ್‌ಪೂರ್ ಗ್ರಾಮದಲ್ಲಿ ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್ಷನ್ ಸೊಸೈಟಿ, ಲಾಲ್ ಬಹದ್ದೂರ್ ಶಿಕ್ಷಣ ಸಂಸ್ಥೆ, ಐಸಿಟಿಸಿ ಬ್ರಿಮ್ಸ್ ಆಸ್ಪತ್ರೆ ಸಹಯೋಗದೊಂದಿಗೆ ಹಮ್ಮಿಕೊಂಡಿರುವ ಆರೋಗ್ಯ ತಪಾಸಣೆ ಶಿಬಿರದಲ್ಲಿ ಮಾತನಾಡುತ್ತಾ, ಪ್ರತಿಯೊಬ್ಬರು ಒತ್ತಡ ಜೀವನದಲ್ಲಿ ಬದುಕಿ ಮಾನಸಿಕ ಸಮತೋಲನವನ್ನು ಕಳೆದುಕೊಂಡು ಬೀಡಿ, ಸಿಗರೇಟ್, ಗುಟ್ಕಾ, ಸಾರಾಯಿ ಮುಂತಾದ ದುಶ್ಚಟಗಳಿಗೆ ಬಲಿಯಾಗಿ ಅನೇಕ ಮಾರಣಾಂತಿಕ ರೋಗಗಳಿಗೆ ತುತ್ತಾಗುತ್ತಿರುವುದು ನೋವಿನ ಸಂಗತಿಯಾಗಿದೆ. ಯಾವುದೇ ತರಹದ ಮಾದಕ ಪದಾರ್ಥಗಳನ್ನು ನಿಯಂತ್ರಿಸಲು ಸರ್ಕಾರಿ ಆಸ್ಪತ್ರೆಯಲ್ಲಿ ಉಚಿತವಾದ ಚಿಕಿತ್ಸೆಯನ್ನು ನೀಡಿ ದುಶ್ಚಟಗಳಿಂದ ಹೊರಬರಲು ಆಪ್ತ ಸಮಾಲೋಚಕರಿಂದ ಮನಃಪರಿವರ್ತನೆ ಮಾಡಲು ಸೂಕ್ತವಾದ ಮಾರ್ಗದರ್ಶನವನ್ನು ನೀಡಲಾಗುತ್ತದೆ ಇದರ ಸದುಪಯೋಗವನ್ನು ಎಲ್ಲರೂ ಪಡೆಯಬೇಕು ಎಂದು ತಿಳಿಸಿದರು. ಎಲ್ ಬಿ ಎಸ್ ಸಂಸ್ಥೆಯ ಮಹಾದೇವಿಯವರು ಮಾತನಾಡಿ ಎಚ್‌ಐವಿ, ಹೆಪಟೈಟಿಸ್ ರೋಗಲಕ್ಷಣಗಳು ಮತ್ತು ಮುಂಜಾಗ್ರತಾ ಕ್ರಮಗಳ ಬಗ್ಗೆ ವಿವರಿಸಿದರು. ಶಿಬಿರದಲ್ಲಿ ಮಧುಮೇಹ ರಕ್ತದೊತ್ತಡ ಎಚ್‌ಐವಿ, ಹೆಪಟೈಟಿಸ್ ಸಿಫಿಲಿಸ್ ಪರೀಕ್ಷೆಗಳನ್ನು ಮಾಡಲಾಯಿತು, ಶಿಬಿರದಲ್ಲಿ ಭಾಗ್ಯಜ್ಯೋತಿ, ಅನುರಾಧ ಗ್ರಾಮ ಪಂಚಾಯತ್ ಸದಸ್ಯರಾದ ಪಂಡರಿ ಆಶಾ ಕಾರ್ಯಕರ್ತೆ ತಂಗ್ಯಮ್ಮ ಅಂಗನವಾಡಿ ಕೇಂದ್ರದ ಶಿಕ್ಷಕರು ಶಿಬಿರದಲ್ಲಿ ಭಾಗವಹಿಸಿದ್ದರು.

## ಬೀದರ ಜಿಲ್ಲಾ ಭಾರತೀಯ ಜನತಾ ಪಾರ್ಟಿಯ ಅಧ್ಯಕ್ಷರಾಗಿ ಸೋಮನಾಥ ಪಾಟೀಲ ಹುಡಗಿ ನಿಯುಕ್ತಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 19 : ಬೀದರ ಜಿಲ್ಲಾ ಭಾರತೀಯ ಜನತಾ ಪಾರ್ಟಿಯ ಅಧ್ಯಕ್ಷರಾಗಿ ಸೋಮನಾಥ ಪಾಟೀಲ ಹುಡಗಿ ಅವರನ್ನು ನಿಯೋಕ್ತಿ ಮಾಡಲಾಗಿದೆ. ಬೆಂಗಳೂರಿನ ರಾಜ್ಯಕಾರ್ಯಾಲಯ ಜಗನ್ನಾಥ ಭವನದಲ್ಲಿ ದಿನಾಂಕ 18-06-2025 ರಂದು ಪಕ್ಷದ ನೂತನ ಜಿಲ್ಲಾಧ್ಯಕ್ಷರ ಅಭಿನಂದನಾ ಸಮಾರಂಭದಲ್ಲಿ ರಾಜ್ಯಾಧ್ಯಕ್ಷ ಹಾಗೂ ಶಾಸಕರಾದ ಬಿ.ವೈ ವಿಜಯೇಂದ್ರ ಅವರು ಸೋಮನಾಥ ಪಾಟೀಲ ಹುಡಗಿ ಇವರಿಗೆ ಬೀದರ ಜಿಲ್ಲಾ ಬಿಜೆಪಿ ಅಧ್ಯಕ್ಷರ ನೇಮಕಾತಿ ಪತ್ರವನ್ನು ನೀಡಿದರು.

3 ವರ್ಷ ಕಾಲ ಅವಧಿಗೆ ಜಿಲ್ಲಾಧ್ಯಕ್ಷರಾಗಿ ಸೋಮನಾಥ ಪಾಟೀಲ ಅವರು ನೇಮಕಗೊಂಡಿದ್ದಾರೆ. ದಿನಾಂಕ 18-06-2025 ರಂದು ಬೆಂಗಳೂರಿನ ರಾಜ್ಯಕಾರ್ಯಾಲಯ ಜಗನ್ನಾಥ ಭವನದಲ್ಲಿ ನೂತನ ಪಕ್ಷದ ಜಿಲ್ಲಾಧ್ಯಕ್ಷರ ಅಭಿನಂದನಾ ಸಮಾರಂಭದಲ್ಲಿ ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಮಾಜಿ ಸಚಿವ ಸಿ.ಟಿ.ರವಿ. ರಾಜ್ಯ ಪ್ರಧಾನಕಾರ್ಯದರ್ಶಿಗಳಾದ ಟಿ.ರಾಜು. ನಂದೀಶ್ ರೆಡ್ಡಿ, ಪ್ರೀತಮ್ ಗೌಡ, ಪಕ್ಷದ ಚುನಾವಣಾ ಸಂಚಾಲಕ ಕ್ಯಾಪ್ಟನ್ ಗಣೇಶ ಕಾರ್ಣಿಕ್ ರಾಜ್ಯ ಪದಾಧಿಕಾರಿಗಳು ಸೇರಿದಂತೆ ಅನೇಕ ಬಿಜೆಪಿ ಮುಖಂಡರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು ಎಂದು ಬೀದರ ಜಿಲ್ಲಾ ಭಾರತೀಯ ಜನತಾ ಪಾರ್ಟಿಯ ಮಾಧ್ಯಮ ಪ್ರಕೋಷ್ಠದ ಸಂಚಾಲಕರಾದ ಶ್ರೀನಿವಾಸ ಚೌದರಿಯವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಮಕೃಷ್ಣ ಆಶ್ರಮ: ನಾಳೆ ಅಂತರರಾಷ್ಟ್ರೀಯ ಯೋಗ ದಿನಾಚರಣೆ



ಅಧ್ಯಕ್ಷ ಶಿವಕುಮಾರ ಪಾಖಾಲ್,

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 19 : ಸೂರ್ಯ ನಮಸ್ಕಾರ ಸಂಘವು ರೋಟರಿ ಕ್ಲಬ್‌ಗಳ ಸಹಯೋಗದಲ್ಲಿ ನಗರದ ರಾಮಕೃಷ್ಣ ವಿವೇಕಾನಂದ ಆಶ್ರಮದಲ್ಲಿ ಜೂನ್ 21 ರಂದು ಬೆಳಿಗ್ಗೆ 6ಕ್ಕೆ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಂಡಿದೆ.

ಆಶ್ರಮದ ಅಧ್ಯಕ್ಷ ಜ್ಯೋತಿರ್ಮಯಾನಂದ ಸ್ವಾಮೀಜಿ ಕಾರ್ಯಕ್ರಮ ಉದ್ಘಾಟಿಸುವರು. ಸೂರ್ಯ ನಮಸ್ಕಾರ ಸಂಘದ ಅಧ್ಯಕ್ಷ ಕಾಮಶೆಟ್ಟಿ ಚಿಕ್ಕಬಸೆ ಅಧ್ಯಕ್ಷತೆ ವಹಿಸುವರು. ರೋಟರಿ ಕ್ಲಬ್ ಆಫ್ ಬೀದರ್ ನ್ಯೂ ಸೆಂಚುರಿ ಅಧ್ಯಕ್ಷ ಶಿವಕುಮಾರ ಪಾಖಾಲ್, ರೋಟರಿ ಕ್ಲಬ್ ಆಫ್ ಬೀದರ್ ಅಧ್ಯಕ್ಷ ಸೋಮಶೇಖರ ಪಾಟೀಲ, ರೋಟರಿ ಕ್ಲಬ್ ಆಫ್ ಬೀದರ್ ಫೋರ್ಟ್ ಅಧ್ಯಕ್ಷ ಗುಂಡಪ್ಪ ಘೋದೆ, ಲಘು ಉದ್ಯೋಗ ಭಾರತಿ ಅಧ್ಯಕ್ಷ ಸಚ್ಚಿದಾನಂದ ಚಿದ್ರೆ, ಗ್ಲೋಬಲ್ ಫ್ರೆಂಡ್ಸ್ ಅಸೋಸಿಯೇಷನ್ ಅಧ್ಯಕ್ಷ ಶರಣು ಚಳಕಾಪುರೆ ಮತ್ತಿತರರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

ಯೋಗ ತರಬೇತುದಾರರಾದ ಶಿವಲೀಲಾ ಚಿದ್ರೆ, ಸತ್ಯಪ್ರಕಾಶ ಹಾಗೂ ಡಾ. ಲೋಕೇಶ ಹಿರೇಮಠ ಯೋಗದ ವಿವಿಧ ಪ್ರಕಾರಗಳನ್ನು ಹೇಳಿಕೊಡುವರು.

ಸಾರ್ವಜನಿಕರು ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಸೂರ್ಯ ನಮಸ್ಕಾರ ಸಂಘದ ಅಧ್ಯಕ್ಷ ಕಾಮಶೆಟ್ಟಿ ಚಿಕ್ಕಬಸೆ ಮನವಿ ಮಾಡಿದ್ದಾರೆ.

ಹೆಚ್ಚಿನ ಮಾಹಿತಿಗೆ ಮೊಬೈಲ್ ಸಂಖ್ಯೆ 9449274246, 9845621852, 8762164645, 8792755220 ಅಥವಾ 7022513111 ಗೆ ಸಂಪರ್ಕಿಸಬಹುದು ಎಂದು ತಿಳಿಸಿದ್ದಾರೆ.

# ಪರಿಸರ ಕಾಳಜಿಯು ಪ್ರತಿ ನಾಗರಿಕರ ಕರ್ತವ್ಯ : ಡಾ. ಎಸ್.ವಿ.ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 19 : ನಗರದ ನೆಹರು ಸ್ಟೇಡಿಯಂ ಹತ್ತಿರವಿರುವ ಪ್ರತಿಷ್ಠಿತ ಗುರು ನಾನಕ ಪಬ್ಲಿಕ್ ಶಾಲೆಯಿಂದ ವಿಶ್ವ ಪರಿಸರ ದಿನವನ್ನು ಅದ್ದೂರಿಯಾಗಿ ಆಚರಿಸಲಾಯಿತು. ಗಿಡ ನಡೆಸುವದರ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಲಾಯಿತು. ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಬೀದರಿನ ತೋಟಗಾರಿಕೆ ಮಹಾವಿದ್ಯಾಲಯದ ಡೀನ್ ಡಾ. ಎಸ್.ವಿ.ಪಾಟೀಲ ಅವರು ಮಾತನಾಡುತ್ತ ಮಾನವ ದುರಾಸೆಯಿಂದ ಪರಿಸರ ಮತ್ತು ಹವಮಾನದ ಮೇಲೆ ದುಷ್ಪರಿಣಾಮಗಳು ಉಂಟಾಗುತ್ತಿವೆ. ಮಿತಿ ಮೀರಿದ ಪ್ಲಾಸ್ಟಿಕ್ ಬಳಕೆ ಪರಿಸರ ನಾಶಕ್ಕೆ ಕಾರಣವಾಗಿದೆ. ಪ್ರಸ್ತುತ ದಿನಗಳಲ್ಲಿ ಪರಿಸರ ಕಾಳಜಿಯು ಪ್ರತಿ ನಾಗರಿಕರ ಕರ್ತವ್ಯ ಎಂದು ಹೇಳಿದರು.

ಇನ್ನೊರ್ವ ಮುಖ್ಯ ಅತಿಥಿಯಾಗಿ ಬೀದರ ಜಿಲ್ಲಾ ಆಸ್ಪತ್ರೆಯ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಆಹ್ಮದ ಉದ್ದಿನ್ ಅವರು ಮಾತನಾಡುತ್ತ ಪೋಷಕರಿಗೆ ತಮ್ಮ ಮಕ್ಕಳನ್ನು ಕಂಡು ಅತಿ ಖುಷಿಯಾಗುತ್ತದೆ. ಅದರಂತೆ ತಮ್ಮ ಮಕ್ಕಳ ಖುಷಿ ಕಾಣಬೇಕಾದರೆ ಪರಿಸರ, ನೀರು ಮತ್ತು ಆಕಾಶ ಸ್ವಚ್ಛ ಇಟ್ಟುಕೊಳ್ಳಬೇಕು. ಗಿಡಗಳನ್ನು ನೆಟ್ಟು ಒಳ್ಳೆಯ ವಾತಾವರಣ ನಿರ್ಮಿಸಿಕೊಳ್ಳಲು ಸಾಧ್ಯ ಎಂದು ನುಡಿದರು. ಗುರು ನಾನಕ ಪಬ್ಲಿಕ್ ಶಾಲೆಯು 50 ವರ್ಷ ಪೂರ್ಣಗೊಳಿಸಿದ ಅಂಗವಾಗಿ "ನಮ್ಮ ನಡಿಗೆ ಹಸಿರಿನೆಡೆಗೆ" ಎಂಬ ಘೋಷವಾಕ್ಯದೊಂದಿಗೆ ಗುರು ನಾನಕ ಸಂಸ್ಥೆಯಿಂದ ಒಂದು ಸಾವಿರ ಗಿಡ ನೆಡುವ ಸಂಕಲ್ಪ ಹೊಂದಿಲಾಗಿದ್ದು, ಗುರುದ್ವಾರದ ಪರಿಸರದಲ್ಲಿ ಚಾಲನೆ ಕೊಡಲಾಯಿತು. ಸುಮಾರು 500 ವಿದ್ಯಾರ್ಥಿಗಳು ಮತ್ತು ಶಿಕ್ಷಕ ಸಮೂದಾಯದವರು ಪಾಲ್ಗೊಂಡಿದ್ದರು. ಈ ಸಂದರ್ಭದಲ್ಲಿ ಗಿಡ ನೆಡುವ ಮೂಲಕ ಗುರು ನಾನಕ ಶಿಕ್ಷಣ ಸಂಸ್ಥೆಯ ಉಪಾಧ್ಯಕ್ಷೆ ಡಾ. ರೇಷ್ಮಾ ಕೌರ ಅವರು ಮತನಾಡುತ್ತ ಜನರಿಗೆ ಜಾಗೃತಿ ಮೂಡಿಸಿ ಹಸಿರು ಕ್ರಾಂತಿಗೆ ಒಂದು ಅಳಿಲು ಸೇವೆಯಂದು ಭಾವಿಸಿ ಇದು ಕೇವಲ ತೋರಿಕೆಯ ಕ್ರಮವಾಗದೆ ನಾವೆಲ್ಲರು ಹಸಿರನ್ನು ಉಳಿಸಿ ಬೆಳೆಸಿಕೊಂಡು ಹೋಗುವಂತಾಗಬೇಕು ಎಂದು ಕರೆ ನೀಡಿದರು.

ವಿದ್ಯಾರ್ಥಿಗಳು ಒಂದು ಸಾವಿರ ಸಸಿ ನೆಟ್ಟುತ್ತಿರುವುದು ಶ್ಲಾಘನೀಯ. ಸಸಿಗಳಿಗೆ ನೀರನ್ನು ಉಣಿಸಿ ಕಾಪಾಡಿಕೊಂಡು ಹೋಗುವುದು ನಿಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಕರೆ ಕೊಟ್ಟರು. ಯಾಂತ್ರಿಕ ಜೀವನ ಕ್ರಮದಿಂದಾಗಿ ವಾಹನಗಳ ಹೊಗೆದಟ್ಟಿನಿಂದ ಉಸಿರುಗಟ್ಟುವಂತಹ ಪರಿಸರ ನಿರ್ಮಾಣವಾಗಿದೆ. ಮನುಷ್ಯ ತನ್ನ ಸ್ವಾರ್ಥಕ್ಕಾಗಿ ಗಿಡಮರಗಳನ್ನು ತುಂಡರಿಸಿ ಇಂತಹ ಅನಾಹುತಕ್ಕೆ ಎಡೆ ಮಾಡಿಕೊಟ್ಟಿದ್ದಾನೆ. ಮುಂದಿನ ಪೀಳಿಗೆ ಸ್ವಚ್ಛ ಪರಿಸರಕ್ಕಾಗಿ ಪರದಾಡಬೇಕಾದ ಪರಿಸ್ಥಿತಿ ಒದಗಿಬರಬಹುದು. ಇದಕ್ಕೆ ಏಕೈಕ ಉಪಾಯವೆಂದರೆ ಪರಿಸರದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಿ ತಲೆಗೊಂದು ಮರ, ಊರಿಗೊಂದು ವನ ಎಂಬ ನೀತಿ ಅನುರಿಸರಿ ಅದರಂತೆ ನಡೆದರೆ ಮಾತ್ರ ಭಾವಿ ಪೀಳಿಗೆಗೆ ಉಳಿಗಾಲವಿದೆ ಎಂದು ಅಭಿಪ್ರಾಯಪಟ್ಟರು.

ಈ ಕಾರ್ಯಕ್ರಮದಲ್ಲಿ ಶ್ರೀ ನಾನಕ ಝಿರಾ ಸಾಹೇಬ್ ಫೌಂಡೇಷನ್‌ನ ಅಧ್ಯಕ್ಷ ಡಾ.ಎಸ್.ಬಲಬೀರ ಸಿಂಗ್, ಮಾಜಿ ಕರ್ನಲ್ ಜಿಎನ್‌ಡಿ ಕಾಲೇಜಿನ ಅಡಳಿತಾಧಿಕಾರಿ ಆರ್.ಡಿ.ಸಿಂಗ್, ಆರ್.ಎಫ್.ಓ. ಜಾಧವ್, ಡಿಆರ್‌ಎಫ್‌ಓ ರಾಥೋಡ್, ಗುರುನಾನಕ ಶಿಕ್ಷಣ ಸಂಸ್ಥೆಯ ಪ್ರಾಂಶುಪಾಲರು, ಪುನಿತ್ ಸಿಂಗ್, ಪವೀತ್ ಸಿಂಗ್ ಮತ್ತು ವಿದ್ಯರ್ಥಿಗಳು ಉಪಸ್ಥಿತರಿದ್ದರು.

# ಜೂ. 21 ರಂದು 11ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆ

ಕಲಬುರಗಿ, ಜೂ.19: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಆಯುಷ್ ಇಲಾಖೆ ಇವುಗಳ ಸಂಯುಕ್ತಾಶ್ರಯದಲ್ಲಿ 11ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮವನ್ನು ಜೂನ್ 21 ರಂದು ಶನಿವಾರ ಬೆಳಿಗ್ಗೆ 7 ಗಂಟೆಗೆ ಕಲಬುರಗಿ ನಗರದ ಡಾ. ಚಂದ್ರಶೇಖರ ಪಾಟೀಲ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ರಾಜ್ಯಸಭೆಯ ವಿರೋಧ ಪಕ್ಷದ ನಾಯಕರು ಹಾಗೂ ರಾಜ್ಯಸಭಾ ಸದಸ್ಯ ಡಾ. ಮಲ್ಲಿಕಾರ್ಜುನ ಖರ್ಗೆ ಅವರು ಘನ ಉಪಸ್ಥಿತಿ ವಹಿಸುವರು. ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು.

ರಾಜ್ಯದ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಖಾತೆ ಸಚಿವರಾದ ಡಾ. ಶರಣಪ್ರಕಾಶ ಪಾಟೀಲ, ರಾಜ್ಯದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ದಿನೇಶ್ ಗುಂಡೂರಾವ್, ಜೇವರ್ಗಿ ಶಾಸಕ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಡಾ. ಅಜಯಸಿಂಗ್, ಅಫಜಲಪುರ ಶಾಸಕ ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷರಾದ ಎಂ.ವೈ. ಪಾಟೀಲ, ಕರ್ನಾಟಕ ರೇಷ್ಮೆ ಉದ್ದಿಮೆಗಳ ನಿಗಮದ ನಿಯಮಿತದ ಅಧ್ಯಕ್ಷೆ ಹಾಗೂ ಉತ್ತರ ಶಾಸಕಿ ಕನೀಜ್ ಫಾತೀಮಾ, ಆಳಂದ ಶಾಸಕ ಹಾಗೂ ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರಾದ ಬಿ.ಆರ್. ಪಾಟೀಲ ಹಾಗೂ ಕರ್ನಾಟಕ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಾಬುರಾವ್ ಚಿಂಚನಸೂರ್ ಅವರು ಗೌರವ ಉಪಸ್ಥಿತಿ ವಹಿಸುವರು. ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಕಲಬುರಗಿ ಲೋಕಸಭಾ ಸದಸ್ಯ ರಾಧಾಕೃಷ್ಣ ದೊಡ್ಡಮನಿ, ಬೀದರ ಲೋಕಸಭಾ ಸದಸ್ಯ ಸಾಗರ ಖಂಡ್ರೆ, ಶಾಸಕರುಗಳಾದ ಬಸವರಾಜ ಮತ್ತಿಮಡು, ಡಾ. ಅವಿನಾಶ ಉಮೇಶ ಜಾಧವ, ವಿಧಾನ ಪರಿಷತ್ ಶಾಸಕರುಗಳಾದ ಶಶೀಲ ಜಿ. ನಮೋಶಿ, ಡಾ. ಬಿ.ಜಿ. ಪಾಟೀಲ, ಡಾ. ಚಂದ್ರಶೇಖರ ಪಾಟೀಲ ಹುಮನಾಬಾದ, ತಿಮ್ಮಣ್ಣಪ್ಪ ಕಮಕನೂರ, ಸುನೀಲ್ ವಲ್ಯಾಪುರೆ, ಡಾ. ತಳವಾರ ಸಾಬಣ್ಣಾ, ಜಗದೇವ ಗುತ್ತೇದಾರ್, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಅಧ್ಯಕ್ಷ ದೇವಿಂದ್ರಪ್ಪ ಮರತೂರ, ಕರ್ನಾಟಕ ವಕ್ಫ್ ಮಂಡಳಿಯ ಅಧ್ಯಕ್ಷ ಸೈಯದ್ ಮಹಮ್ಮದ್ ಅಲಿ ಅಲ್ ಹುಸೇನಿ, ಅಚ್ಚುಕಟ್ಟು ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಅಬ್ದುಲ್ ರಶೀದ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್, ಕಲಬುರಗಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರಿ ಹಾಗೂ ಮಹಾನಗರಪಾಲಿಕೆ ಮಹಾಪೌರ ಯಲ್ಲಪ್ಪ ನಾಯ್ಕೋಡಿ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತ ಕೃಷ್ಣ ಭಾಜಪೇಯಿ, ಕಲಬುರಗಿ ಈಶಾನ್ಯವಲಯದ ಪೊಲೀಸ್ ಉಪಮಹಾನಿರೀಕ್ಷಕ ಅಜಯ ಹಿಲೋರಿ ಹಾಗೂ ಕಲಬುರಗಿ ವಿಭಾಗದ ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತ ಡಾ. ಆಕಾಶ ಎಸ್ ಅವರು ವಿಶೇಷ ಆಹ್ವಾನಿತರಾಗಿ ಉಪಸ್ಥಿತರಿರುವರು.

ಭಾರತ ಸರ್ಕಾರದ ಮಾರ್ಗಸೂಚಿಗಳನ್ವಯ ಅಂದು ಬೆಳಿಗ್ಗೆ 7 ರಿಂದ 7.45 ಗಂಟೆಯವರೆಗೆ ಯೋಗ ಪ್ರದರ್ಶನ ಹಾಗೂ ಬೆಳಿಗ್ಗೆ 7.45 ರಿಂದ 9 ಗಂಟೆಯವರೆಗೆ ವೇದಿಕೆ ಕಾರ್ಯಕ್ರಮ ಜರುಗಲಿದೆ. "ಒಂದು ಭೂಮಿ, ಒಂದು ಆರೋಗ್ಯಕ್ಕಾಗಿ ಯೋಗ" ಎಂಬುವುದು ಈ ವರ್ಷದ ಅಂತರರಾಷ್ಟ್ರೀಯ ಯೋಗದ ದಿನಾಚರಣೆಯ ಘೋಷವಾಕ್ಯವಾಗಿದೆ.

## ಒಕ್ಕೂಟದಿಂದ 450 ಸಸಿ ನೆಡುವಿಕೆ



ಬೀದರ. ಜೂ. 19 : ಇಲ್ಲಿಯ ಬೆನಕನಳ್ಳಿ ರಸ್ತೆಯಲ್ಲಿ ಇರುವ ದಿಕ್ಷಿತ್ ಲೇಔಟ್‌ನಲ್ಲಿ ಭಾರತದ ರಿಯಲ್ ಎಸ್ಟೇಟ್ ಡೆವಲಪರ್‍ಸ್‌ಗಳ ಸಂಘಟನೆಗಳ ಒಕ್ಕೂಟದಿಂದ ಗುರುವಾರ 450 ಸಸಿಗಳನ್ನು ನೆಡಲಾಯಿತು.

ಹೃದಯ ರೋಗ ತಜ್ಞ ಡಾ. ನಿತಿನ್ ಗುದಗೆ ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಪರಿಸರ ಸಂರಕ್ಷಣೆಗೆ ಹೆಚ್ಚು ಹೆಚ್ಚು ಸಸಿಗಳನ್ನು ನೆಟ್ಟು ಬೆಳೆಸುವುದು ಅವಶ್ಯಕವಾಗಿದೆ. ಒಕ್ಕೂಟ ಸಸಿ ನೆಡುವ ಅಭಿಯಾನ ಹಮ್ಮಿಕೊಂಡಿರುವುದು ಶ್ಲಾಘನೀಯ ಎಂದು ಹೇಳಿದರು.

ಸ್ವಚ್ಛ, ಹಸಿರು ಹಾಗೂ ಆರೋಗ್ಯಕರ ಬೀದರ್ ನಿರ್ಮಾಣಕ್ಕಾಗಿ ಪ್ರತಿಯೊಬ್ಬರೂ ಸಂಕಲ್ಪ ಮಾಡಬೇಕು. ಈ ದಿಸೆಯಲ್ಲಿ ನಡೆಯುವ ಚಟುವಟಿಕೆಗಳಿಗೆ ಕೈಜೋಡಿಸಬೇಕು ಎಂದು ಒಕ್ಕೂಟದ ಅಧ್ಯಕ್ಷ ರವಿ ಮೂಲಗೆ ನುಡಿದರು.

ಒಕ್ಕೂಟದ ಕಾರ್ಯದರ್ಶಿ ಅನಿಲ್ ಖೇಣಿ, ಸದಸ್ಯರಾದ ಹಾವಶೆಟ್ಟಿ ಪಾಟೀಲ, ಗುರುರಾಜ ಸ್ವಾಮಿ, ಸತೀಶ್ ನೌಬಾದೆ, ಕಾರ್ತಿಕ ರೆಡ್ಡಿ, ಅನಿಲಕುಮಾರ ಔರಾದೆ, ಮನೋಹರ ದಿಕ್ಷಿತ್ ಇದ್ದರು.

# ಜೂನ್.21 ರಂದು ಹನ್ನೊಂದನೇಯ ಅಂತರಾಷ್ಟ್ರೀಯ ಯೋಗ ದಿನಾಚರಣೆ

ಬೀದರ, ಜೂ.19: ಜಿಲ್ಲಾಡಳಿತ ಬೀದರ, ಜಿಲ್ಲಾ ಪಂಚಾಯತ, ಜಿಲ್ಲಾ ಆಯುಷ್ ಇಲಾಖೆ, ಯುವ ಸಬಲೀಕರಣ ಕ್ರೀಡಾ ಇಲಾಖೆ ಬೀದರ ಹಾಗೂ ಇನ್ನಿತರ ಯೋಗ ಸಂಘ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಜೂನ್. 21 ರಂದು ಹನ್ನೊಂದನೇಯ ಅಂತರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗಿದೆ. ಅಂದು ಬೆಳಿಗ್ಗೆ 6.30 ಗಂಟೆಗೆ ಬೀದರ ಕೋಟೆಯಲ್ಲಿ ಧ್ಯೇಯವಾಕ್ಯ: ಒಂದು ಭೂಮಿ, ಒಂದು ಆರೋಗ್ಯಕ್ಕಾಗಿ ಯೋಗ "ಯೋಗ ಸಂಗಮ" ನಡೆಯಲಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಮಾಡಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆ ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ್ ವಹಿಸಲಿದ್ದಾರೆ. ಕಾರ್ಯಕ್ರಮದ ಘನ ಉಪಸ್ಥಿತಿಯನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವರಾದ ದಿನೇಶ್ ಗುಂಡೂರಾವ್ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಬೀದರ ಲೋಕಸಭಾ ಸದಸ್ಯರಾದ ಸಾಗರ ಈಶ್ವರ ಖಂಡ್ರೆ, ಔರಾದ (ಬಿ) ಶಾಸಕ ಪ್ರಭು ಬಿ.ಚವ್ಹಾಣ, ಬಸವಕಲ್ಯಾಣ ಶಾಸಕ ಶರಣು ಸಲಗರ, ಬೀದರ ದಕ್ಷಿಣ ಶಾಸಕ ಡಾ.ಶೈಲೇಂದ್ರ ಕೆ.ಬೆಲ್ದಾಳೆ, ಹುಮನಾಬಾದ ಶಾಸಕ ಡಾ.ಸಿದ್ಧಲಿಂಗಪ್ಪ ಎನ್.ಪಾಟೀಲ್ ಹಾಗೂ ವಿಧಾನ ಪರಿಷತ್ ಶಾಸಕರುಗಳಾದ ಡಾ.ಚಂದ್ರಶೇಖರ ಬಿ.ಪಾಟೀಲ, ಶಶೀಲ ಜಿ.ನಮೋಶಿ, ಭೀಮರಾವ ಬಿ.ಪಾಟೀಲ, ಡಾ.ಎಂ.ಜಿ.ಮೂಳೆ ಹಾಗೂ ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಮಾಲಾ ನಾರಾಯಣರಾವ, ಬೀದರ ನಗರಸಭೆ ಅಧ್ಯಕ್ಷರಾದ ಮಹ್ಮದ ಗೌಸ್, ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ ಅವರುಗಳು ಭಾಗವಹಿಸಲಿದ್ದಾರೆ.

## ಜೂ.21 ರಂದು ಅಂಚೆ ಕಚೇರಿಗಳ ಸೇವೆಗಳು ಅಲಭ್ಯ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಜೂ.19: ಭಾರತೀಯ ಅಂಚೆ ಇಲಾಖೆ ಆದೇಶದಂತೆ ದಿನಾಂಕ ಜೂನ್.23 ರಂದು ಬೀದರ ಜಿಲ್ಲೆಯ ಎಲ್ಲಾ ಅಂಚೆ ಕಛೇರಿಗಳಲ್ಲಿ ಎಪಿಟಿ 2.ಔ ಎಂಬ ಹೊಸ ತಂತ್ರಾಂಶ ಅಳವಡಿಕೆ ಕಾರ್ಯ ಜಾರಿಯಲ್ಲಿರುತ್ತದೆ. ಈ ಹಿನ್ನಲೆಯಲ್ಲಿ ಎಪಿಟಿ 2.ಔ ಎಂಬ ಹೊಸ ತಂತ್ರಾಂಶ ಅಳವಡಿಕೆಯ ಪೂರ್ವ ಸಿದ್ಧತೆಗಾಗಿ ಬೀದರ ಜಿಲ್ಲೆಯ ಎಲ್ಲಾ ಅಂಚೆ ಕಛೇರಿಗಳಲ್ಲಿ ಜೂನ್.21 ರಂದು ವ್ಯವಹಾರ – ವಹಿವಾಟು ಇರುವುದಿಲ್ಲ ಹಾಗು ಜೂನ್.23 ರಿಂದ ಸೇವೆಗಳು ಪುನರಾಂಭಗೊಳ್ಳಲಿವೆ. ಕಾರಣ ಅಂಚೆ ಕಛೇರಿಯ ಗ್ರಾಹಕರು ಸಹಕರಿಸಬೇಕೆಂದು ಬೀದರ ವಿಭಾಗೀಯ ಅಂಚೆ ಅಧೀಕ್ಷಕರು ವಿ.ಎಲ್.ಚಿತ್ತಕೋಟೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯೋಗದಿನ ಆಚರಣೆಯ ಇತಿಹಾಸ ಹಾಗೂ ಪ್ರಭಾವ

ಭಾರತೀಯ ತತ್ವಶಾಸ್ತ್ರದ ಪದ್ಧತಿಗಳನ್ನು ದರ್ಶನಗಳೆಂದು ಕರೆಯಲಾಗುತ್ತದೆ. ಪಾಶ್ಚಿಮಾತ್ಯ ತತ್ವ ಸಿದ್ಧಾಂತಗಳಂತೆ ಸಂಪೂರ್ಣವಾಗಿ ತರ್ಕ ಮತ್ತು ಕಾರಣಗಳ ಮೇಲೆ ಅವಲಂಬಿಸದೆ ನಮ್ಮ ಪದ್ಧತಿಗಳು ಸತ್ಯದ ಅರಿವನ್ನು ಅಥವಾ ನೋಟವನ್ನು ಅಥವಾ ಅನುಭವವನ್ನು ಅತೀಂದ್ರಿಯ ಸ್ಥಿತಿಯಲ್ಲಿ ಕಂಡುಕೊಳ್ಳುವುದರ ಮೇಲೆ ನಿಂತಿದೆ. ಆದ್ದರಿಂದ ದರ್ಶನ ಪದವು ಹೆಚ್ಚು ಸೂಕ್ತವೆನಿಸುತ್ತದೆ. ನಮ್ಮ ಋಷಿಮುನಿಗಳು ನೀಡಿದ ಆರು ದರ್ಶನಗಳೆಂದರೆ ನ್ಯಾಯ, ವೈಶೇಷಿಕ, ಸಾಂಖ್ಯ, ಯೋಗ, ಉತ್ತರ ಮೀಮಾಂಸ ಮತ್ತು ದಕ್ಷಿಣ ಮೀಮಾಂಸ.

ಈ ಆರು ದರ್ಶನಗಳಲ್ಲಿ ಪತಂಜಲಿ ಮಹರ್ಷಿಯ ಯೋಗದರ್ಶನ ಲಿಖಿತ ರೂಪದಲ್ಲಿದೆ. ಆ ಮಹರ್ಷಿ ರಚಿಸಿದ ಯೋಗ ಸೂತ್ರವೆಂಬ ಮೂಲ ಗ್ರಂಥದಲ್ಲಿ ಜಿಜ್ಞಾಸಾ ಅಥವಾ ಮೀಮಾಂಸಾ ಎನ್ನುವುದಕ್ಕಿಂತ ಅನುಶಾಸನ ಅನ್ನುವ ಪದವನ್ನು ಬಳಸಿದ್ದಾರೆ. ಅಂದರೆ ಯೋಗ ಪದ್ಧತಿಯು ಸಾಧನೆ ಅಥವಾ ಆಧ್ಯಾತ್ಮಿಕ ನಿಯಮಗಳಿಗೆ ಹೆಚ್ಚು ಒತ್ತು ಕೊಡುತ್ತದೆ.

ಆಧುನಿಕ ವಿಜ್ಞಾನಕ್ಕೆ ಸವಾಲೆನಿಸಿದ ಅನೇಕ ಸಮಸ್ಯೆಗಳ ಪರಿಹಾರವನ್ನು ಯೋಗ ತನ್ನ ಒಡಲಲ್ಲಿ ಇರಿಸಿಕೊಂಡಿದೆ. ಭಾರತೀಯ ಪುರಾತನ ಜ್ಞಾನವಾದ ಯೋಗ ಇಂದು ಜಾತಿ, ಮತ, ಪಂಥ, ರಾಷ್ಟ್ರಗಳ ಗಡಿಗಳನ್ನು ಮೀರಿ ಮನುಕುಲಕ್ಕೆ ವರದಾನವಾಗಿರುವುದರಿಂದ ಇಂದು ಪ್ರತಿ ದೇಶಗಳು ಇದನ್ನು ಅಭಿಮಾನದಿಂದ ಸ್ವೀಕರಿಸಲು ಸಾಧ್ಯವಾಗಿದೆ. ಇತ್ತೀಚಿನ ಕಾಲಮಾನದಲ್ಲಿ ಯೋಗದ ಪರಿಚಯ ಜಗತ್ತಿಗೆ ಆಗಲು ಅಂತಾರಾಷ್ಟ್ರೀಯ ಯೋಗದಿನದ ಆಚರಣೆಯೂ ಕಾರಣವಾಗಿದೆ. ಪ್ರತಿವರ್ಷ ಜೂನ್ 21ರಂದು ಇಡೀ ವಿಶ್ವ ಒಗ್ಗೂಡಿ ಯೋಗಾಸನಗಳನ್ನು ಅಭ್ಯಾಸ ಮಾಡಿ ಉತ್ತಮ ಆರೋಗ್ಯ ಹಾಗೂ ಸ್ವಾಸ್ಥ್ಯ ಪಡೆಯಲು ಮುನ್ನುಡಿಯಾಗುತ್ತಿದೆ.

2015 ರಂದು ಜೂನ್ 21ರಂದು ಮೊದಲ ಅಂತಾರಾಷ್ಟ್ರೀಯ ಯೋಗ ದಿನವನ್ನು ಆಚರಿಸಲಾಯಿತು. ಜೂನ್ 21ನ್ನೇ ಏಕೆ ಯೋಗದಿನದ ಆಚರಣೆ ಮಾಡಲು ಆಯ್ಕೆ ಮಾಡಿಕೊಳ್ಳಲಾಯಿತು ಎಂದರೆ, ಉತ್ತರಾರ್ಧ ಗೋಳದಲ್ಲಿ ಜೂನ್ 21 ಗರಿಷ್ಠ ಹಗಲನ್ನು ಹೊಂದಿರುವ ದಿನವಾಗಿದೆ ಹಾಗಾಗಿ ವೈಜ್ಞಾನಿಕವಾಗಿ ಆ ದಿನವನ್ನೇ ಆಯ್ಕೆ ಮಾಡಿಕೊಳ್ಳಲಾಗಿದೆ. ಯೋಗದಿನದ ಆಚರಣೆಯ ಪರಿಕಲ್ಪನೆಯನ್ನು ಮೊದಲು ಪ್ರಸ್ತಾಪಿಸಿದ್ದು ನಮ್ಮ ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿಯವರು. ಅವರು 2014 ಸೆಪ್ಟೆಂಬರ್ 27ರಂದು ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಮಾತನಾಡುತ್ತಾ ಈ ವಿಚಾರವನ್ನು ಸದಸ್ಯ ರಾಷ್ಟ್ರಗಳ ಗಮನಕ್ಕೆ ತಂದಾಗ ಭಾರಿ ಕರತಾಡನ ಮೂಲಕ ಸ್ವಾಗತಿಸಲಾಯಿತು. ಆ ಸಭೆಯಲ್ಲಿ ಶ್ರೀ ನರೇಂದ್ರ ಮೋದಿಯವರು ಯೋಗದ ಬಗ್ಗೆ ಆಡಿದ ಮಾತುಗಳು ಯೋಗದ ವಿಸ್ತಾರವಾದ ಅರ್ಥವನ್ನು ಕೆಲವೇ ಮಾತುಗಳಲ್ಲಿ ಪರಿಣಾಮಕಾರಿಯಾಗಿ ಕಟ್ಟಿಕೊಡುವಂತಿವೆ. ಅವರ ಮಾತಲ್ಲೇ ಯೋಗದ ಬಗ್ಗೆ ಹೇಳುವುದಾದರೆ ಭಾರತದ ಪುರಾತನ ಪದ್ಧತಿಯ ಬೆಲೆ ಕಟ್ಟಲಾಗದ ಕೊಡುಗೆಯೇ ಯೋಗ. ಅದು ಮನಸ್ಸು ಮತ್ತು ದೇಹದ ಚಿಂತನೆ ಹಾಗೂ ಕ್ರಿಯೆಯ ಒಗ್ಗೂಡಿಸುವ ಪ್ರಕ್ರಿಯೆಯಾಗಿದೆ. ಸಂತೃಪ್ತ ಜೀವನ ನಡೆಸಲು ಅಗತ್ಯವಾದ ಸಮಸ್ತ ಆರೋಗ್ಯದ ಬಗ್ಗೆ ಒತ್ತು ಕೊಡುತ್ತಾ ಸಾಮಾನ್ಯ ದೈಹಿಕ ಕಸರತ್ತು ಅಭ್ಯಾಸಗಳಿಗಿಂತ ಭಿನ್ನವಾಗಿದೆ. ಮನುಷ್ಯ ಮತ್ತು ಪ್ರಕೃತಿಯ ನಡುವೆ ಸಾಮರಸ್ಯ ಸೃಷ್ಟಿಸುವ ಅಮೂಲ್ಯ ಕ್ರಿಯೆಯಾಗಿದೆ. ನಮ್ಮ ಜೀವನ ಶೈಲಿ ಉತ್ತಮಪಡಿಸಿ ಪ್ರಕೃತಿಯ ನಡುವೆ ಒಂದಾಗಿ ಅತ್ಯುತ್ತಮ ವ್ಯಕ್ತಿತ್ವದ ನಿರ್ಮಾಣದ ಕಡೆ ನಮ್ಮನ್ನು ಕೊಂಡೊಯ್ಯುತ್ತದೆ. ಸುಮಾರು 177 ರಾಷ್ಟ್ರಗಳು ಒಪ್ಪಿ ಅಪ್ಪಿಕೊಂಡಿವೆ.

ಅಂತಾರಾಷ್ಟ್ರೀಯ ಯೋಗ ದಿನದ ಆಚರಣೆ ಸೃಷ್ಟಿಸಿದ ಯೋಗದ ಅಲೆಗಳು

2015ರ ಜೂನ್ 21ರಂದು ಯೋಗದಿನದ ಮೊದಲ ಆಚರಣೆ ಪ್ರಪಂಚದಾದ್ಯಂತ ನಡೆಯಿತು. ಆಯುಷ್ ಮಂತ್ರಾಲಯ ನವದೆಹಲಿಯಲ್ಲಿ ಆಯೋಜಿಸಿದ್ದ ಭವ್ಯವಾದ ಆಚರಣೆಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಸೇರಿ 35 ಸಾವಿರಕ್ಕೂ ಹೆಚ್ಚು ಜನರು ಪಾಲ್ಗೊಂಡಿದ್ದರು. 84 ದೇಶಗಳಿಂದ ಆಗಮಿಸಿದ್ದ ಗಣ್ಯಾತಿಗಣ್ಯರು ನೆರೆದ ಜನರ ಜೊತೆಗೆ 35 ನಿಮಿಷಗಳ ಕಾಲ 21 ಆಸನಗಳನ್ನು ಮಾಡಿದ್ದು ವಿಶೇಷವಾಗಿತ್ತು. ಕೋಟಿಗಟ್ಟಲೆ ಜನ ಜಗತ್ತಿನ ವಿವಿಧ ಭಾಗದಲ್ಲಿ ಈ ದಿನದ ಆಚರಣೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡರು. ಎನ್‌ಸಿಸಿ ಕೆಡೆಟ್‌ಗಳು ದೇಶದ ಬೇರೆ ಬೇರೆ ಭಾಗದಲ್ಲಿ ಏಕಕಾಲದಲ್ಲಿ ಒಂದೇ ಸಮವಸ್ತ್ರದಲ್ಲಿ ಅತ್ಯಂತ ದೊಡ್ಡ ಯೋಗ ಪ್ರದರ್ಶನ ನೋಡುವುದರ ಮೂಲಕ ಲಿಮ್ಕಾ ಬುಕ್‌ನಲ್ಲಿ ದಾಖಲೆ ನಿರ್ಮಿಸಿದರು. ರಾಜಪಥದಲ್ಲಿ ಆಯುಷ್ ಇಲಾಖೆಯವರು ಆಯೋಜಿಸಿದ ಕಾರ್ಯಕ್ರಮಕ್ಕೆ ಗಿನ್ನಿಸ್ ವಿಶ್ವದಾಖಲೆಯವರು ಪುರಸ್ಕಾರ ನೀಡಿದರು.

2016ರಲ್ಲಿ ಆಯುಷ್ ಇಲಾಖೆ ಚಂಡೀಗಢದಲ್ಲಿ "The National Event of mass Yoga and demonstration'ಇದರಲ್ಲೂ ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿಯವರು ಭಾಗವಹಿಸಿ ಜನಸಂಚಲನ ಮೂಡಿಸಿದರು.


2017ರಲ್ಲಿ 'ಆರೋಗ್ಯಕ್ಕಾಗಿ ಯೋಗ' ಎಂಬ ಘೋಷ ವಾಕ್ಯದ ಅಡಿಯಲ್ಲಿ ಯೋಗ ದಿನದ ಆಚರಣೆ ಮಾಡಲಾಯಿತು. 51 ಸಾವಿರ ಜನ ಲಕ್ನೋದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿಯವರೊಂದಿಗೆ ಪಾಲ್ಗೊಂಡು ಇತಿಹಾಸ ಸೃಷ್ಟಿಸಿದರು. ಆ ವರ್ಷದಲ್ಲಿ ನ್ಯೂಯಾರ್ಕ್ ನಗರದ ಟೈಮ್ಸ್ ಸ್ಕ್ವೇರ್‌ನಲ್ಲಿ ಸಾವಿರಗಟ್ಟಲೆ ಜನ ನೆರೆದು ಯೋಗಾಭ್ಯಾಸ ಮಾಡಿ ಯೋಗದಿನದ ಆಚರಣೆ ಮಾಡಿದರು. 2017ರ ಏಪ್ರಿಲ್‌ನಲ್ಲಿ ಜಪಾನ್ ದೇಶದ ಪಾರ್ಲಿಮೆಂಟ್‌ನಲ್ಲಿ ಯೋಗದ ಅರಿವನ್ನು ದೇಶದಲ್ಲಿ ಮೂಡಿಸಲು ನಿರ್ಣಯ ಕೈಗೊಳ್ಳಲಾಯಿತು. 2018ರಲ್ಲಿ 'ಶಾಂತಿಗಾಗಿ ಯೋಗ' ಎಂಬ ಪರಿಕಲ್ಪನೆಯಲ್ಲಿ ಶ್ರೀಯುತ ನರೇಂದ್ರ ಮೋದಿಯವರು ಡೆಹ್ರಾಡೂನ್‌ನಲ್ಲಿ 50 ಸಾವಿರ ಸ್ವಯಂಸೇವಕರ ಜೊತೆ ಸೇರಿ ಯೋಗ ಮಾಡುವುದರ ಮೂಲಕ ಯೋಗದಿನದ ಆಚರಣೆ ಮಾಡಿದರು. ಅದೇ ವರ್ಷ ಒಂದು ಲಕ್ಷಕ್ಕೂ ಹೆಚ್ಚು ಜನ ರಾಜಸ್ಥಾನದಲ್ಲಿ ಯೋಗಪ್ರದರ್ಶನ ನೀಡುವುದರ ಮೂಲಕ ಗಿನ್ನಿಸ್ ದಾಖಲೆ ನಿರ್ಮಿಸಿದರು.

ಹೀಗೆ ಪ್ರತಿ ವರ್ಷ ವಿವಿಧ ಘೋಷ ವಾಕ್ಯಗಳೊಡನೆ ಲಕ್ಷಾಂತರ ಜನರು ಯೋಗದಿನದ ಆಚರಣೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿರುವುದು ಇದರ ಜನಪ್ರಿಯತೆಗೆ ಹಿಡಿದ ಕೈಗನ್ನಡಿಯಾಗಿದೆ.

**ಶಿವಗಂಗಾ ಕೇಂದ್ರದಲ್ಲಿ ಯೋಗ:**

2015ರಿಂದಲೂ ಶಿವಮೊಗ್ಗದ ಶ್ರೀ ಶಿವಗಂಗಾ ಯೋಗ ಕೇಂದ್ರ ಯೋಗದಿನದ ಆಚರಣೆಯನ್ನು ಅತ್ಯಂತ ಸಂಭ್ರಮದಿಂದ ಆಚರಿಸಿಕೊಂಡು ಬರುತ್ತಿದೆ. ಈ ಕೇಂದ್ರದಲ್ಲಿ ಉತ್ಸಾಹಿ ವಿಶ್ವಸ್ಥ ಮಂಡಳಿಯ ಸದಸ್ಯರು ಹಾಗೂ ಯೋಗ ಶಿಕ್ಷಕರು ಮತ್ತು ಯೋಗಾರ್ಥಿಗಳು ಹಬ್ಬದ ರೀತಿಯಲ್ಲಿ ಈ ದಿನದ ಆಚರಣೆ ಮಾಡುತ್ತಿರುವುದರಿಂದ ಮಲೆನಾಡಿನ ಭಾಗದಲ್ಲಿ ಯೋಗ ಚಳುವಳಿ ಶುರುವಾಗಲು ಕಾರಣವಾಗಿದೆ. ಶಿವಮೊಗ್ಗದ ವಿವಿಧ ಬಡಾವಣೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಈ ಕೇಂದ್ರದ 36 ಶಾಖೆಗಳು ಯೋಗವನ್ನು ಮನೆ ಮನೆಗೆ ಮನ ಮನಕ್ಕೆ ತಲುಪಿಸುವಲ್ಲಿ ಯಶಸ್ವಿಯಾಗಿವೆ.

ಕುವೆಂಪು ವಿಶ್ವವಿದ್ಯಾಲಯದ ಸಹಯೋಗದಲ್ಲಿ ಪಿಜಿ ಡಿಪ್ಲೊಮಾ ನಡೆಸಿ 100 ಜನ ಅರ್ಹ ಯೋಗ ಶಿಕ್ಷಕರನ್ನು ಈ ಸಮಾಜಕ್ಕೆ ಕೊಡುಗೆಯಾಗಿ ನೀಡಿ ಉತ್ಕೃಷ್ಟ ಗುಣಮಟ್ಟದ ಯೋಗ ಶಿಕ್ಷಣ ನೀಡಲು ಕಾರಣವಾಗಿದೆ.



**–ಯೋಗಾಚಾರ್ಯ ಸಿ.ವಿ.ರುದ್ರಾರಾಧ್ಯ**
**ಕಾರ್ಯಾಧ್ಯಕ್ಷರು, ಶ್ರೀ ಶಿವಗಂಗಾ ಯೋಗ ಕೇಂದ್ರ (ರಿ)**

## ತೋಟಗಾರಿಕೆ ಇಲಾಖೆಯಿಂದ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 19–2025–26ನೇ ಸಾಲಿನ ತೋಟಗಾರಿಕೆ ಇಲಾಖೆ (ಜಿ.ಪಂ) ದೇವದುರ್ಗ ತಾಲ್ಲೂಕ ವತಿಯಿಂದ ವಿವಿಧ ಯೋಜನೆಗಳಡಿ ಸಹಾಯಧನ ಪಡೆಯಲು ಆಸಕ್ತ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರಾದ ನವೀನಕುಮಾರ ತಿಳಿಸಿದ್ದಾರೆ. ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ವಿವಿಧ ಘಟಕಗಳಾದ ಹೊಸ ಪ್ರದೇಶ ವಿಸ್ತರಣೆಯಲ್ಲಿ ಬಾಳೆ, ದಾಳಿಂಬೆ, ಹೂವು ಮತ್ತು ಹೈಬ್ರಿಡ್ ತರಕಾರಿ ಹಾಗೂ ವೈಯಕ್ತಿಕ ಕೃಷಿಹೊಂಡ, ನೀರು ಸಂಗ್ರಹಣ ಘಟಕ (4500,6000.ಘ.ಮೀ ಸಾಮರ್ಥ್ಯ) ಪ್ಲಾಸ್ಟಿಕ್ ಹೊದಿಕೆ, ವೀಡ್ ಮ್ಯಾಟ್. ಯಾಂತ್ರೀಕರಣ ಮಿನಿ ಟ್ರ್ಯಾಕ್ಟರ್– 20 ಹೆಚ್.ಪಿ, ಪ್ಯಾಕಹೌಸ್, ಶೀಥಲಗೃಹ, ಸಮಗ್ರ ಕೀಟ /ಪೋಷಕಾಂಶ ನಿರ್ವಾಹಣೆ, ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಹನಿ ನೀರಾವರಿ ಪದ್ಧತಿ ಅಳವಡಿಸಲು ಹಾಗೂ ತಾಳೆ ಬೆಳೆ ಪ್ರದೇಶ ವಿಸ್ತರಣೆಗೆ ಸಹಾಯಧನ ಪಡೆಯಲು ಅರ್ಜಿ ಸಲ್ಲಿಸಬಹುದು.

ರೈತರು ಸಂಬಂಧಪಟ್ಟ ಹೋಬಳಿ ಅಧಿಕಾರಿಗಳು ಅಥವಾ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ದೇವದುರ್ಗ ಕಚೇರಿಗೆ ಭೇಟಿ ನೀಡಿ ಜೂನ್ 30ರೊಳಗೆ ಅಗತ್ಯ ದಾಖಲೆಗಳಾದ ಪಹಣಿ, ಭಾವಚಿತ್ರ, ಆಧಾರ್ ಕಾರ್ಡ್, ಬ್ಯಾಂಕ್ ಪಾಸಬುಕ್ ಜೆರಾಕ್ಸ್, ಜಾತಿ ಪ್ರಮಾಣ ಪತ್ರ, ಗಣಕೀಕೃತ ಬೆಳೆ ಧೃಢೀಕರಣ, ಚೆಕ್‌ಬಂದಿ ಇತ್ಯಾದಿಗಳನ್ನು ಅರ್ಜಿಯೊಂದಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸಹಾಯಕ ತೋಟಗಾರಿಕೆ ಅಧಿಕಾರಿ ದೇವದುರ್ಗಾ –9686246128, ಅರಕೇರಾ –9535121367, ಗಬ್ಬೂರು –9901251996, ಜಾಲಹಳ್ಳಿ –7996717257, ರೈತ ಸಂಪರ್ಕ ಕೇಂದ್ರಗಳಿಗೆ ಸಂಪರ್ಕಿಸಬಹುದು ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗ್ರಾಮೀಣ ಪ್ರದೇಶದಲ್ಲಿ ಇಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 19 –ಇಲ್ಲಿನ ಜೆಸ್ಕಾಂ ಗ್ರಾಮೀಣ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ವ್ಯಾಪ್ತಿಗೆ ಬರುವ 33/11 ಕೆವಿ ಚಂದ್ರಬಂಡ ಮತ್ತು ಜವಹಾರನಗರ ವಿದ್ಯುತ್ ಉಪ–ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಜೂನ್ 20ರ ಬೆಳಗ್ಗೆ 10 ಗಂಟೆಯಿಂದ ಸಂಜೆ 04 ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಗ್ರಾಮೀಣ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪಡಿತರ ಚೀಟಿಗಳ ಫಲಾನುಭವಿಗಳಿಗೆ ಹಣದ

## ಬದಲಿಗೆ ಹೆಚ್ಚುವರಿ 05 ಕೆ.ಜಿ ಅಕ್ಕಿ ವಿತರಣೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 19 (ಕರ್ನಾಟಕ ವಾರ್ತೆ): ಜೂನ್ 2025 ರ ಮಾಹೆಗೆ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ರಾಯಚೂರು ಜಿಲ್ಲೆಯ ಕೇಂದ್ರ ವ್ಯಾಪ್ತಿಯ ಪ್ರತಿ ಅಂತ್ಯೋದಯ (ಎಎವೈ) ಪಡಿತರ ಚೀಟಿಗೆ 21 ಕೆ.ಜಿ ಸಾರವರ್ಧಿತ ಅಕ್ಕಿ ಮತ್ತು 14 ಕೆ.ಜಿ ಜೋಳ ಹಾಗೂ ಕೇಂದ್ರ ವ್ಯಾಪ್ತಿಯ ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 03 ಕೆ.ಜಿ ಸಾರವರ್ಧಿತ ಅಕ್ಕಿ ಮತ್ತು 02 ಕೆ.ಜಿ ಜೋಳ ಮತ್ತು ರಾಜ್ಯ ವ್ಯಾಪ್ತಿಯ ಪಡಿತರ ಚೀಟಿದಾರರಿಗೆ 05 ಕೆ.ಜಿ ಸಾರವರ್ಧಿತ ಅಕ್ಕಿ ಇದರ ಜೊತೆಗೆ ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯಡಿಯಲ್ಲಿ ಪ್ರಸ್ತುತ ಜಿಲ್ಲೆಯಲ್ಲಿರುವ ಕೇಂದ್ರ ಮತ್ತು ರಾಜ್ಯ ವ್ಯಾಪ್ತಿಯ ಅಂತ್ಯೋದಯ (ಎಎವೈ) ಮತ್ತು ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಗಳ ಫಲಾನುಭವಿಗಳಿಗೆ ಹಣದ ಬದಲಿಗೆ ಹೆಚ್ಚುವರಿಯಾಗಿ 05 ಕೆ.ಜಿ ಅಕ್ಕಿ ವಿತರಣೆ ಮಾಡಲಾಗುವುದು ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ತಿಳಿಸಿದ್ದಾರೆ. ರಾಜ್ಯ ಸರ್ಕಾರದ ಮಾರ್ಗಸೂಚಿಯಂತೆ ಏಕ ಸದಸ್ಯ, ದ್ವಿ ಸದಸ್ಯ ಮತ್ತು ತ್ರಿ ಸದಸ್ಯ ಎಎವೈ ಪಡಿತರ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕಿಂತ ಹೆಚ್ಚಿನ ಸದಸ್ಯರುಳ್ಳ ಅಂತ್ಯೋದಯ (ಎಎವೈ) ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಮತ್ತು ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 05 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುವುದು.

ಒಂದು ರಾಷ್ಟ್ರ ಒಂದು ಪಡಿತರ ಚೀಟಿ (ಅಂತರ್ ರಾಜ್ಯ/ ಅಂತರ್ ಜಿಲ್ಲೆ) ಪೋರ್ಟೆಬಿಲಿಟಿ ಜಾರಿಯಲ್ಲಿರುವುದರಿಂದ ಯಾವುದೇ ರಾಜ್ಯದ ಪಡಿತರ ಚೀಟಿದಾರರು ಯಾವುದೇ ವರ್ಗದ ಪಡಿತರ ಚೀಟಿದಾರರು ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರವನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಯಾವುದೇ ನ್ಯಾಯಬೆಲೆ ಅಂಗಡಿಕಾರರು ಕಡಿಮೆ ಪ್ರಮಾಣದ ಪಡಿತರವನ್ನು ವಿತರಣೆ ಮಾಡಿದ್ದಲ್ಲಿ, ಹಣ ಕೇಳಿದ್ದಲ್ಲಿ ಮತ್ತು ಇತರೆ ದೂರುಗಳಿಗೆ ನಿಶುಲ್ಕ ದೂರವಾಣಿ ಸಂಖ್ಯೆ 1967ಗೆ ಹಾಗೂ ತಾಲ್ಲೂಕಿನಲ್ಲಿರುವ ತಹಶೀಲ್ದಾರರ ಕಛೇರಿಗೆ ಅಥವಾ ಜಿಲ್ಲೆಯ ಉಪನಿರ್ದೇಶಕರ ಕಛೇರಿಗೆ ದೂರನ್ನು ಸಲ್ಲಿಸಬಹುದಾಗಿದೆ.

ಈ ಯೋಜನೆಯಡಿ ವಿತರಿಸಲಾದ ಆಹಾರ ಧಾನ್ಯಗಳನ್ನು ಹಣಕ್ಕಾಗಿ ಪಡಿತರ ಚೀಟಿದಾರರು ಮಾರಾಟ ಮಾಡುವುದಾಗಲಿ ಅಥವಾ ಸಂಗ್ರಹಣೆ ಮಾಡುವುದು ಕಂಡುಬಂದಲ್ಲಿ ಅಂತಹ ಪಡಿತರ ಚೀಟಿದಾರರಿಗೆ ವಿತರಿಸಲಾದ ಆಹಾರ ಧಾನ್ಯಗಳಿಗೆ ಮುಕ್ತ ಮಾರುಕಟ್ಟೆ ದರಕ್ಕೆ ದಂಡ ವಿಧಿಸಲಾಗುವುದು ಮತ್ತು ಸದರಿ ಪಡಿತರ ಚೀಟಿಯನ್ನು ಆರು ತಿಂಗಳ ಅವಧಿಗೆ ಅಮಾನತ್ತುಗೊಳಿಸಲಾವುದು ಎಂದು ಅವರು ಎಚ್ಚರಿಕೆ ನೀಡಿದ್ದಾರೆ.

# ಕಾರ್ಯಕರ್ತರ ಕುಂದು ಕೊರತೆಗಳ ಆಲಿಸಿದ ಮಾಜಿ ಸಚಿವ ಹಾಗೂ ನಿಜ ಶರಣ ಅಂಬಿಗರ ಚೌಡಯ್ಯ ನಿಗಮದ ಅಧ್ಯಕ್ಷ ಚಿಂಚನಸೂರ್

ಮಲ್ಲಮ್ಮ ನುಡಿ ವಾರ್ತೆ

ಗುರುಮಠಕಲ। ಮತಕ್ಷೇತ್ರದ ಕಾಂಗ್ರೆಸ್ ಕಾರ್ಯಕರ್ತರು ಹಲವಾರು ದಶಕಗಳಿಂದ ಪಕ್ಷಕ್ಕೆ ತಮ್ಮ ಅಭೂತಪೂರ್ವ ಪರಿಶ್ರಮದಿಂದ ಪಕ್ಷ ಸದೃಢವಾಗಿ ಬೆಳೆಯಲು ಸಹಕರಿಸಿದ್ದಾರೆ, ಕಾರ್ಯಕರ್ತರ ಕುಂದು ಕೊರತೆಗಳ ಬಗೆಹರಿಸಲು ತಿಂಗಳಿಗೆ ಎರಡು ಬಾರಿ ಸಭೆಯನ್ನು ಆಯೋಜಿಸಿ ಮನೋ ಧೈರ್ಯ ಬೆಳೆಸಿ ಪಕ್ಷದ ಸಂಘಟನೆಗೊಳಿಸಿ ಮುಂಬರುವ ಚುನಾವಣೆಯಲ್ಲಿ ಜಯಗಳಿಸುವದಾಗಿ ಅವರು ಹೇಳಿದರು.

ಓಐಅ ಮಾಡುವಂತೆ ನಾನು ಕೇಳುವದಿಲ್ಲ, ಅನ್ಯಮಾರ್ಗದ ದಾರಿ ಹಿಡಿಯುವದಿಲ್ಲ ಚುನಾವಣೆ ಮುಖಾಂತರ ಆಯ್ಕೆಯಾಗಿ ಉನ್ನತ ಸ್ಥಾನಮಾನ ಗಳಿಸುವೆ ಎಂದು ಅವರು ಮಾತನಾಡಿದರು.

ಗುರುಮಠಕಲ ತಾಲೂಕು ಸೇರಿದಂತೆ ಮತಕ್ಷೇತ್ರದ ಎಲ್ಲಾ ಗ್ರಾಮಗಳ ಸರ್ವಾಂಗಿಣ ಅಭಿವೃದ್ಧಿಗಾಗಿ ಪರಿಶ್ರಮ ಪಡುವೆ ಹಾಗೂ ಅದಕ್ಕೆ ಬೇಕಾಗಿರುವ



ಅನುದಾನವನ್ನು ನಾನು ರಾಜ್ಯದ ವರಿಷ್ಠ ನಾಯಕರೊಂದಿಗೆ ಚರ್ಚಿಸಿ ಕಾರ್ಯ ರೂಪದ ಮುಖಾಂತರ ಅಭಿವೃದ್ಧಿಗೆ ನಾಂದಿ ಹಾಡಲು ಮುಂದಾಗಿದ್ದೆ, ಅಪಪ್ರಚಾರದ ಮೂಲಕ ನನ್ನನ್ನು ಚುನಾವಣೆಯಲ್ಲಿ ಸೋಲಿಸಿರಬಹುದು ನಾನು ಚುನಾವಣೆಯಲ್ಲಿ ವಿಜಯಶಾಲಿಯಾಗಿದ್ದರೆ ಸದ್ಯ ಉನ್ನತ ಸ್ಥಾನಮಾನದ ಜೊತೆ ಕ್ಷೇತ್ರದ ಅಭಿವೃದ್ಧಿಯು ಸಹ ಶರವೇಗದಲ್ಲಿ ಮಾಡಲು ಸಹಕಾರಿಯಾಗುತ್ತಿತ್ತು ಆದ–ರೆ ದುರದೃಷ್ಟವಶಾತ್ ಜನ ಕೈಹಿಡಿಯಲಿಲ್ಲ ಎಂದು ಅವರು ವಿಷಾಧ ವ್ಯಕ್ತಪಡಿಸಿದರು.

ಚುನಾವಣೆಯಲ್ಲಿ ಸೋತಿರಬಹುದು ಆದರೆ ಜನಸೇವೆ ಮಾಡುವ ಇಚ್ಚಾಶಕ್ತಿ ಕಡಿಮೆಯಾಗಿಲ್ಲ, ಕ್ಷೇತ್ರದ ಜನತೆಯ ಜೊತೆ ಸದಾ ಸಕ್ರಿಯವಾಗಿ ಪಾಲ್ಗೊಂಡು ನಿಮ್ಮ ಸೇವೆ ಮಾಡುತ್ತೇನೆ ಎಂದು ಆಶಾ ನುಡಿ ನುಡಿದರು.

ಇದೇ ವೇಳೆ ಮಾಜಿ ಕಾಡಾ ನಿರ್ದೇಶಕ ವಿಜಯ ಕುಮಾರ್ ನೀರೆಟಿ ನಿರೂಪಣೆ ಮಾಡಿದರು, ಕೃಷ್ಣ ಚಪೆಟ್ಲಾ ಬ್ಲಾಕ ಅಧ್ಯಕ್ಷರು, ಶ್ರೀನಿವಾಸ ಗುಮಡಲ್ ಖಜಾಂಚಿ, ಶ್ರೀಮತಿ ರೇಣುಕಾ ಪಡಿಗೆ ಪುರಸಭೆ ಉಪಾಧ್ಯಕ್ಷರು, ಬಾಲಪ್ಪ ನೀರೆಟಿ, ಸಂಜೀವ ಕುಮಾರ್ ಚಂದಾಪುರ, ಲಕ್ಷ್ಮೀರೆಡ್ಡಿ ನಜರಾಪುರ, ಸೇರಿದಂತೆ ಪುರಸಭೆಯ ಸದಸ್ಯರು, ನಾಮ ನಿರ್ದೇಶಕ ಸದಸ್ಯರು, ಪಕ್ಷದ ಮುಖಂಡರುಗಳು ಕಾರ್ಯಕರ್ತರು ಹಾಜರಿದ್ದರು.

# ಕರ್ತವ್ಯ ನಿರತ ಅಧಿಕಾರಿಗಳ ಮೇಲಿನ ಹಲ್ಲೆ ಖಂಡನೀಯ ಕಠಿಣ ಕ್ರಮಕ್ಕೆ ಸಂತೋಷ ನೀರೆಟಿ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ/ಗುರುಮಠಕಲ್: ತಾಲೂಕಿನ ಪಸಪೂಲ್ ತಾಂಡಾದಲ್ಲಿ ಮೊನ್ನೆ ದಿ:17–06–2025ರಂದು ಕರ್ತವ್ಯ ನಿರತ ಅಬಕಾರಿ ಪೇದೆ ಮತ್ತು ಗೃಹ ರಕ್ಷಕ ಸಿಬ್ಬಂದಿ ಮೇಲೆ ಹಲ್ಲೆ ಮಾಡಿರುವ ವ್ಯಕ್ತಿಗಳ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಲು ತಹಸೀಲ್ದಾರ್ ಮುಖಾಂತರ ಜಿಲ್ಲಾಧಿಕಾರಿಗಳಿಗೆ ಇಂದು ಸಂತೋಷ ನೀರೆಟಿ, ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಗುರುಮಠಕಲ ತಾಲೂಕಧ್ಯಕ್ಷರು ಮತ್ತು ಪದಾಧಿಕಾರಿಗಳಿಂದ ಉಪ ತಹಸೀಲ್ದಾರ್ ನರಸಿಂಹಸ್ವಾಮಿಯವರಿಗೆ ಮನವಿ ನೀಡಿದರು.



ಯಾದಗಿರಿ ಜಿಲ್ಲೆಯ ಗುರುಮಠಕಲ್ ತಾಲೂಕಿನ ಪಸಪೂಲ ತಾಂಡಾದಲ್ಲಿ ಕರ್ತವ್ಯನಿರತ ಇಬ್ಬರು ಸಿಬ್ಬಂದಿಗಳ ಮೇಲೆ ಹಲ್ಲೆ ಮಾಡಿದ ಪಸಪೂಲ ತಾಂಡಾದ ಕೆಲವು ಗೂಂಡಾಗಳು ಸೇರಿಕೊಂಡು ಅಬಕಾರಿ ಪೇದೆಯಾದ ಶ್ರೀ ಪರಶುರಾಮ ರಾಠೋಡ್ ಮತ್ತು ಸಹಾಯಕ ಗೃಹ ರಕ್ಷಕ ಸಿಬ್ಬಂದಿ ಭೀಮರಾಯ ಇವರ ಮೇಲೆ ಹಲ್ಲೆ ಮಾಡಿ ಗೃಹ ಬಂಧನದಲ್ಲಿ ಇಟ್ಟು ಅವರಿಂದ ಫೋನ್ ಮತ್ತು ಸರಕಾರಿ ದ್ವೀ–ಚಕ್ರವಾಹನವನ್ನು ಕಿತ್ತುಕೊಂಡಿರುವ ಅಮಾನವೀಯ ಘಟನೆ ಜರುಗಿದೆ. ಈ ಘಟನೆ ಕುರಿತಾಗಿ ಮಾತನಾಡಿದ ಸಂತೋಷ ನೀರೆಟಿ ಹಲ್ಲೆ ಮಾಡಿ ಅವರಿಗೆ ಇನ್ನೊಂದು ಸಲ ನಮ್ಮ ಪಸಪೂಲ ತಾಂಡಾಕ್ಕೆ ಬಂದು ಕಳ್ಳ ಬಟ್ಟಿ ಸರಾಯಿ ತಪಾಸಣೆ ಮಾಡಿದರೆ ನಿಮ್ಮನ್ನು ಸುಮ್ಮನೆ ಬಿಡುವುದಿಲ್ಲ ಎಂದು ಜೀವ ಬೆದರಿಕೆ ಹಾಕಿ ಗುಂಡಾ ವರ್ತನೆ ತೋರಿ ಮನಬಂದಂತೆ ಹಲ್ಲೆ ಮಾಡಿರುವುದು ಖಂಡನೀಯ ಈ ರೀತಿಯ ವರ್ತನೆಯಿಂದ ಅಬಕಾರಿ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಭಯಭೀತರಾಗಿದ್ದಾರೆ ಹಾಗೂ ಸರಕಾರಿ ಸೇವೆ ಸಲ್ಲಿಸಲು ತಾಂಡಾಗಳಿಗೆ ಹೋಗಿ ಕರ್ತವ್ಯ ನಿರ್ವಹಿಸಲು ಹೆದರುತ್ತಿದ್ದಾರೆ. ಇದೇ ರೀತಿಯ ವಾತಾವರಣ ಮುಂದುವರೆದರೆ ಎಲ್ಲಾ ಸರಕಾರಿ ನೌಕರರು ಸುಗಮವಾಗಿ ಕರ್ತವ್ಯ ನಿರ್ವಹಿಸಲು ತೊಂದರೆಯಾಗುತ್ತದೆ. ಹಲ್ಲೆಕೋರರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಿ ತಪ್ಪಿತಸ್ಥರರನ್ನು ಕೂಡಲೇ ಬಂಧಿಸಿ ಕರ್ತವ್ಯನಿರತ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಸೂಕ್ತ ರಕ್ಷಣೆ ನೀಡಲು ಮನವಿ ನೀಡಿದರು. ಈ ಸಂದರ್ಭದಲ್ಲಿ ಗುರುಮಠಕಲ್ ತಾಲೂಕ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಪದಾಧಿಕಾರಿಗಳಾದ ಹರೀಶ್ ಕುಮಾರ್, ಪ್ರಶಾಂತ್, ವೆಂಕಟಪ್ಪ, ಶ್ರೀನಾಥ, ಶಿವಕುಮಾರ, ಗಣೇಶ್, ವಿಜಯ ಪವಾರ್, ಶಾರದಾ, ರೇಖಾ ಉಪಸ್ಥಿತರಿದ್ದರು.

# ಜೂನ್ 28, 29ಕ್ಕೆ ರಾಯಚೂರು ಜಿಲ್ಲಾಮಟ್ಟದ ಟೇಬಲ್ ಟೆನ್ನಿಸ್ ಕ್ರೀಡಾ ಪಂದ್ಯಾವಳಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 19–ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಟೇಬಲ್ ಟೆನ್ನಿಸ್ ಸಂಸ್ಥೆ ರಾಯಚೂರು ಹಾಗೂ ರೋಟರಿ ಕ್ಲಬ್ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಟೇಬಲ್ ಟೆನ್ನಿಸ್ ಕ್ರೀಡೆಯನ್ನು ಉತ್ತೇಜಿಸುವಸಲುವಾಗಿ ರಾಯಚೂರು ಜಿಲ್ಲೆಯ ಕ್ರೀಡಾಪಟುಗಳಿಗೆ ಮಾತ್ರ ಜೂನ್ 28 ಮತ್ತು ಜೂನ್ 29ರ ಬೆಳಿಗ್ಗೆ 8.30ಕ್ಕೆ ಜಿಲ್ಲಾ ಮಟ್ಟದ ಟೇಬಲ್ ಟೆನ್ನಿಸ್ ಕ್ರೀಡಾ ಪಂದ್ಯಾವಳಿಗಳನ್ನು ನಗರದ ಒಳಾಂಗಣ ಮಹಾತ್ಮಗಾಂಧಿ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದೆ.

ಜೂನ್ 28ರಂದು 14 ವರ್ಷದೊಳಗಿನವರಿಗೆ ಟೇಬಲ್ ಟೆನ್ನಿಸ್ ಪಂದ್ಯ ವೈಯಕ್ತಿಕ ಬಾಲಕ ಮತ್ತು ಬಾಲಕಿಯರಿಗಾಗಿ ಪ್ರತ್ಯೇಕವಾಗಿ ನಡೆಯಲಿದೆ. ಜೂನ್ 19ರಂದು ನಡೆಯುವ ಸ್ಪರ್ಧೆಗೆ ವಯಸ್ಸಿನ ನಿರ್ಭಂಧವಿರುವುದಿಲ್ಲ. ಅಂದು ಟೇಬಲ್ ಟೆನ್ನಿಸ್, ವೈಯಕ್ತಿಕ ಮತ್ತು ಡಬಲ್ಸ್ ಪುರುಷ ಮತ್ತು ಮಹಿಳೆಯರಿಗೆ ಪ್ರತ್ಯೇಕವಾಗಿ ಸ್ಪರ್ಧೆಗಳು ನಡೆಯಲಿವೆ.

ಪಂದ್ಯಾವಳಿಗಳಲ್ಲಿ ಭಾಗವಹಿಸುವುದು ಉಚಿತವಾಗಿದೆ. ಯಾವುದೇ ಪ್ರವೇಶ ಶುಲ್ಕ ಇರುವುದಿಲ್ಲ. ವಿಜೇತರಿಗೆ ಪ್ರಮಾಣ ಪತ್ರ, ಫದಕ ಮತ್ತು ಟ್ರಾಫಿ ನೀಡಲಾಗುವುದು. ಜಿಲ್ಲೆಯ ಟೇಬಲ್ ಟೆನ್ನಿಸ್ ಕ್ರೀಡಾಪಟುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಕೋರಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣ ರಾಯಚೂರು ಇಲ್ಲಿ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ. ಅಥವಾ ಶ್ರೀ ವಿಲಕ್ಷ್ಮೀನಾರಾಯಣ ಮೋ ಸಂಖ್ಯೆ : 9845861363, ಶ್ರೀ ವೀರಣ್ಣ ಮೋ ಸಂ.9448837766 ಕ್ಕೆ ಸಂಪರ್ಕಿಸಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಈರೇಶ್ ನಾಯಕ ಅವರು ತಿಳಿಸಿದ್ದಾರೆ.

# ಜೂನ್ 21ರಂದು ರಾಯಚೂರು ಅಂಚೆ ಕಚೇರಿಗಳಲ್ಲಿ ವಹಿವಾಟು ಸ್ಥಗಿತ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 19: ನಗರದ ಪ್ರಧಾನ ಅಂಚೆ ಕಚೇರಿಯಿಂದ ಐಟಿ 2.0 ಅಡಿಯಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸುತ್ತಿರುವ ಹಿನ್ನೆಲೆಯಲ್ಲಿ ರಾಯಚೂರು ಪ್ರಧಾನ ಅಂಚೆ ಕಚೇರಿ ಮತ್ತು ಅದರ ಅಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಉಪ ಅಂಚೆ ಕಚೇರಿಗಳಲ್ಲಿ ಜೂನ್ 21ರಂದು ಯಾವುದೇ ರೀತಿಯ ವಹಿವಾಟು ಇರುವುದಿಲ್ಲವೆಂದು ರಾಯಚೂರು ಅಂಚೆ ವಿಭಾಗದ ಅಂಚೆ ಅಧೀಕ್ಷಕರಾದ ಶಿವಾನಂದ ಆರ್.ಹೆಚ್ ಅವರು ತಿಳಿಸಿದ್ದಾರೆ.

ಈ ಕುರಿತು ರಾಯಚೂರು ಅಂಚೆ ವಿಭಾಗದ ವ್ಯಾಪ್ತಿಯಲ್ಲಿ ಬರುವ ರಾಯಚೂರು ಪ್ರಧಾನ ಅಂಚೆ ಕಚೇರಿ, ಮುಕ್ರಮ್ ಗಂಜ್, ಜವಾಹರನಗರ, ನಯಾ ಬಜಾರ್, ರಾಯಚೂರು ಸಾತ್ ಕಚೇರಿ, ರಾಯಚೂರು ಆರ್ ಎಸ್., ರಾಯಚೂರು ಯುಎಎಸ್, ಮಾನವಿ, ಸಿಂಧನೂರು, ಲಿಂಗಸಗೂರು, ಸಿರವಾರ, ಮಸ್ಕಿ, ದೇವದುರ್ಗ, ಜಾಲಹಳ್ಳಿ ಗಬ್ಬೂರ್, ಕಲ್ಮಲಾ, ಕಲ್ಲೂರು, ಕುರ್ಡಿ, ಮಟಮಾರಿ, ಯರಗೇರಾ, ಶಕ್ತಿನಗರ, ಯರಮರಸ್, ಯರಮರಸ್ ಕ್ಯಾಂಪ್, ದಡೇಸುಗೂರು, ತುರ್ವಿಹಳ, ಜವಳಗೇರಾ, ಹಟ್ಟಿ, ಕವಿತಾಳ, ರೊಡಲಬಂಡ, ಗುರುಗುಂಟಾ, ಲಿಂಗಸುಗೂರು ಕಚೇರಿ, ಸಿಂಧನೂರು ಕೋರ್ಟ್ ಕಚೇರಿ, ಗಬ್ಬೂರು, ಗುಂಜಹಳ್ಳಿ ಸೇರಿ 36 ಅಂಚೆ ಕಚೇರಿಗಳು ಹಾಗೂ ಅವುಗಳ ವ್ಯಾಪ್ತಿಯಲ್ಲಿ ಬರುವ ಶಾಖ ಅಂಚೆ ಕಚೇರಿಗಳಲ್ಲಿ ಜೂನ್ 21 ರಂದು ಯಾವುದೇ ವ್ಯವಹಾರ ವಹಿವಾಟು ಇರುವುದಿಲ್ಲ, ಆದ್ದರಿಂದ ಅಂಚೆ ಕಚೇರಿಯ ಗ್ರಾಹಕರು ಸಹಕರಿಸಬೇಕಾಗಿ, ಸಾರ್ವಜನಿಕರಲ್ಲಿ ವಿನಂತಿ ಮಾಡಿಕೊಳ್ಳಲಾಗಿದೆ ಎಂದು ರಾಯಚೂರು ಅಂಚೆ ವಿಭಾಗದ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9449287890

ಬಳ್ಳಾರಿ: ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಸಭೆಯಲ್ಲಿ ಎಡಿಸಿ ಮಹಮ್ಮದ್ ಎನ್.ಝುಬೇರ್ ಸೂಚನೆ

# ತಂಬಾಕು ಮುಕ್ತ ಶಿಕ್ಷಣ ಸಂಸ್ಥೆಗಳನ್ನಾಗಿ ಘೋಷಿಸಲು ಕ್ರಮವಹಿಸಿ: ಜಿಲ್ಲಾಧಿಕಾರಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.19–ಜಿಲ್ಲೆಯಲ್ಲಿನ ಪ್ರಾಥಮಿಕ, ಪ್ರೌಢ ಶಿಕ್ಷಣ ಮತ್ತು ಪದವಿ ಪೂರ್ವ ಶಿಕ್ಷಣ ಇಲಾಖೆಗಳಡಿ ಬರುವ ಎಲ್ಲಾ ಶಾಲಾ–ಕಾಲೇಜುಗಳನ್ನು ತಂಬಾಕು ಮುಕ್ತ ಶಿಕ್ಷಣ ಸಂಸ್ಥೆಗಳನ್ನಾಗಿ ಘೋಷಿಸಲು ಈ ಕೂಡಲೇ ಕ್ರಮವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರು ಡಿಡಿಪಿಐ, ಡಿಡಿಪಿಯು ಅಧಿಕಾರಿಗಳಿಗೆ ಸೂಚಿಸಿದರು.



ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದಡಿ ಜಿಲ್ಲೆಯ ಎಲ್ಲಾ ಸಾರ್ವಜನಿಕ ಪ್ರದೇಶಗಳಲ್ಲಿ ಕೋಟ್ಪಾ ಕಾನೂನನ್ನು ಪರಿಣಾಮಕಾರಿಯಾಗಿ ಜಾರಿಗೆ ತರುವ ಕುರಿತಂತೆ ಚರ್ಚಿಸಲು ನಗರದ ಜಿಲ್ಲಾಧಿಕಾರಿಗಳ ಕಚೇ–ರಿಯ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ ಗುರುವಾರ ಏರ್ಪಡಿಸಿದ್ದ ತಂಬಾಕು ನಿಯಂತ್ರಣ ಕೋಶದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ತಂಬಾಕು ಮುಕ್ತ ಶಿಕ್ಷಣ ಸಂಸ್ಥೆಗಳನ್ನಾಗಿ ಘೋಷಿಸಲು ಟಿಒಎಫ್‌ಇಐ ಆಪ್ ಲಿಂಕ್ ಸೃಷ್ಟಿಸಲಾಗಿದ್ದು, ಎಲ್ಲಾ ಶಾಲಾ–ಕಾಲೇಜುಗಳಿಗೆ ಲಿಂಕ್ ಕಳುಹಿಸಲಾಗಿದೆ. ಅದರಲ್ಲಿ ತಪ್ಪದೇ ಮಾಹಿತಿ ನಮೂದಿಸಬೇಕು ಎಂದು ತಿಳಿಸಿದರು.

*ತಂಬಾಕು ಉತ್ಪನ್ನಗಳ ಜಾಹೀರಾತು ತೆರವುಗೊಳಿಸುವ ಕಾರ್ಯವಾಗಲಿ:*

ಕಕರಸಾನಿ ಬಳ್ಳಾರಿ ವಿಭಾಗ ವ್ಯಾಪ್ತಿಯಲ್ಲಿ ಬರುವ ನಿಲ್ದಾಣಗಳಲ್ಲಿ ತಂಬಾಕು ಉತ್ಪನ್ನಗಳ ಮಾರಾಟ ನಿಷೇಧ ಮತ್ತು ಬಸ್‌ಗಳ ಮೇಲೆ ಮುದ್ರಿಸಲಾಗಿರುವ ಜಾಹೀರಾತು ಫಲಕಗಳು ಕಂಡುಬರುತ್ತಿದ್ದು, ಫಲಕಗಳನ್ನು ಕೂಡಲೇ ತೆರವುಗೊಳಿಸುವ ಕಾರ್ಯ ಮಾಡಬೇಕು ಎಂದು ಸಾರಿಗೆ ನಿಗಮದ ಅಧಿಕಾರಿಗಳಿಗೆ ಸೂಚಿಸಿದರು.

ವಿವಿಧ ಮಾನದಂಡಗಳಡಿ ಜಿಲ್ಲೆಯಲ್ಲಿ ತಂಬಾಕು ಮುಕ್ತ ಗ್ರಾಮವನ್ನಾಗಿ ಘೋಷಿಸಲು ಒಟ್ಟು 25 ಗ್ರಾಮಗಳನ್ನು ಗುರುತಿಸಲಾಗಿದ್ದು, ಆಯ್ಕೆ ಮಾಡಲು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಯವರ ಶಿಫಾರಸ್ಸಿಗೆ ಕೂಡಲೇ ಕಳುಹಿಸುವಂತೆ ಜಿಪಂ ಸಹಾಯಕ ನಿರ್ದೇಶಕರಿಗೆ ಸೂಚಿಸಿದರು.

ಬೆಂಗಳೂರಿನ ತಂಬಾಕು ನಿಯಂತ್ರಣ ಕೋಶದ ಸಹ–ಸಂಯೋಜಕರಾದ ಮಹಾಂತೇಶ್ ಉಳ್ಳಾಗಡ್ಡಿ ಅವರು ಮಾತನಾಡಿ, ಟಿಒಎಫ್‌ಇಐ ಮಾರ್ಗಸೂಚಿಗಳು ಶಾಲೆಗಳು ಮತ್ತು ಕಾಲೇಜುಗಳು ತಮ್ಮ ಕ್ಯಾಂಪಸ್‌ಗಳನ್ನು ತಂಬಾಕು ಮುಕ್ತವಾಗಿಡಲು ಕೈಗೊಳ್ಳಬೇಕಾದ ಒಂಬತ್ತು ಚಟುವಟಿಕೆಗಳನ್ನು ಸಭೆಗೆ ವಿವರಿಸಿದರು.

ಶಾಲಾ ಆವರಣದೊಳಗೆ 'ತಂಬಾಕು ಮುಕ್ತ ಪ್ರದೇಶ' ಎಂಬ ಫಲಕದ ಪ್ರದರ್ಶನ, ಪ್ರವೇಶದ್ವಾರದಲ್ಲಿ 'ತಂಬಾಕು ಮುಕ್ತ ಶಿಕ್ಷಣಸಂಸ್ಥೆ' ಎಂಬ ಫಲಕದ ಪ್ರದರ್ಶನ, ಆವರಣದಲ್ಲಿ ತಂಬಾಕು ಬಳಕೆ–ಯ ಯಾವುದೇ ಪುರಾವೆಗಳಿಲ್ಲ, ತಂಬಾಕಿನ ಹಾನಿಗಳ ಕುರಿತು ಜಾಗೃತಿ ಸಾಮಗ್ರಿಗಳ ಪ್ರದರ್ಶನ, ಪ್ರತಿ ಆರು ತಿಂಗಳಿಗೊಮ್ಮೆ ಕನಿಷ್ಠ ಒಂದು ತಂಬಾಕು ನಿಯಂತ್ರಣ ಚಟುವಟಿಕೆ, ತಂಬಾಕು ಮೇಲ್ವಿಚಾರಕರ ನಾಮನಿರ್ದೇಶನ, ಶಾಲಾ ನೀತಿ ಸಂಹಿತೆಯಲ್ಲಿ ತಂಬಾಕು ಮುಕ್ತನೀತಿಯನ್ನು ಸೇರಿಸುವುದು, ತಂಬಾಕು ಮುಕ್ತ ವಲಯವನ್ನು ಗೊತ್ತುಪಡಿಸಲು ಶಿಕ್ಷಣ ಸಂಸ್ಥೆಗಳ ಸುತ್ತ 100 ಅಡಿ ಸುತ್ತ ಹಳದಿರೇಖೆಯನ್ನು ಗುರುತಿಸುವುದು ಮತ್ತು ಆ 100 ಅಡಿ ಅಂತರ ವಲಯದೊಳಗೆ ಯಾವುದೇ ಅಂಗಡಿಗಳು ಅಥವಾ ಮಾರಾಟಗಾರರು ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡದಂತೆ ನೋಡಿಕೊಳ್ಳುವುದು ಸೇರಿದಂತೆ ಸರ್ಕಾರದ 9 ಮಾರ್ಗಸೂಚಿಗಳನ್ವಯ ಲಿಂಕ್ ನಲ್ಲಿ ನಮೂದಿಸಿ ಅಪ್‌ಲೋಡ್ ಮಾಡಬೇಕು ಎಂದು ಸಭೆಗೆ ತಿಳಿಸಿದರು.

ಎಡಿಸಿ ಮಹಮ್ಮದ್ ಝುಬೇರ್ ಅವರು ಮಾತನಾಡಿ, ಜಿಲ್ಲೆಯ ಎಲ್ಲಾ ಬಾರ್ ಮತ್ತು ರೆಸ್ಟೋರೆಂಟ್‌ಗಳಲ್ಲಿ ಕಡ್ಡಾಯವಾಗಿ ಧೂಮಪಾನ ಪ್ರದೇಶವನ್ನು ಪ್ರತ್ಯೇಕವಾಗಿ ಸ್ಥಾಪಿಸಬೇಕು ಮತ್ತು ಅದರ ಕ್ರಮಬದ್ಧತೆ ಕುರಿತು ನಿಯಮಿತವಾಗಿ ಪರಿಶೀಲನೆ ನಡೆಸುತ್ತಿರಬೇಕು ಎಂದು ಅಬಕಾರಿ ಅಧಿಕಾರಿಗಳಿಗೆ ತಿಳಿಸಿದರು. ಅದೇರೀತಿಯಾಗಿ ಆಹಾರ ಮಾರಾಟಕ್ಕೆ ಪರವಾನಿಗೆ ಪಡೆದ ಅಂಗಡಿ, ಹೋಟೆಲ್, ಬೇಕರಿ, ಬಾರ್ ಅಂಡ್ ರೆಸ್ಟೋರೆಂಟ್, ವಾಣಿಜ್ಯ ಮಳಿಗೆಗಳು ಮತ್ತು ಎಲ್ಲಾ ಔಷಧಿ ಅಂಗಡಿಗಳಲ್ಲಿ ಕೋಟ್ಪಾ ಕಾಯ್ದೆಯ ಸೆಕ್ಷನ್–4 ಮತ್ತು ಸೆಕ್ಷನ್–6 ನಾಮಫಲಕಗಳನ್ನು ಕಡ್ಡಾಯವಾಗಿ ಅಳವಡಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಅಧಿಕಾರಿಯೂ ಆದ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ವಿ.ಕೆ ಅವರು ಪ್ರಗತಿ ವರದಿಯೊಂದಿಗೆ ಸಭೆ ನಿರ್ವಹಿಸಿದರು. ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ, ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ಮೌನೇಶ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ದಾಸಪ್ಪನವರ, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಸಂಯೋಜಕ ಪ್ರಶಾಂತ್ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ವಿವಿಧ ಕಾರ್ಯಕ್ರಮ ಅಧಿಕಾರಿಗಳು, ಆರೋಗ್ಯ ಇಲಾಖೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಜೂ. 20 ಮತ್ತು 21 ರಂದು ಅಂಚೆ ಕಚೇರಿ ವ್ಯವಹಾರ ಸ್ಥಗಿತ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಭಾರತೀಯ ಅಂಚೆ ಇಲಾಖೆಯ ಆದೇಶದಂತೆ ಜೂನ್ 23 ರಂದು ಕೊಪ್ಪಳ ಪ್ರಧಾನ ಅಂಚೆ ಕಚೇರಿಯ ಮತ್ತು ಅದರ ವ್ಯಾಪ್ತಿಯ ಎಲ್ಲಾ ಉಪ ಹಾಗೂ ಶಾಖಾ ಅಂಚೆ ಕಚೇರಿಗಳಲ್ಲಿ ಹೊಸ ತಂತ್ರಾಂಶ( ಒಕಖಿ 2.0 )ಅಳವಡಿಕೆ ಜಾರಿಯಾಗುತ್ತಿರುವ ಹಿನ್ನೆಲೆಯಲ್ಲಿ ಪೂರ್ವ ಸಿದ್ಧತೆಗಾಗಿ ಜೂ.20 ಮತ್ತು 21 ರಂದು ಕೊಪ್ಪಳ ಪ್ರಧಾನ ಅಂಚೆ ಕಚೇರಿ ಮತ್ತು ಅದರ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಉಪ ಹಾಗೂ ಶಾಖಾ ಅಂಚೆ ಕಚೇರಿಗಳಲ್ಲಿ ಎಲ್ಲಾ ರೀತಿಯ ವ್ಯವಹಾರ, ವಹಿವಾಟುಗಳು ಸ್ಥಗಿತಗೊಳ್ಳಲಿವೆ.

ಹೊಸತಂತ್ರಾಂಶಜಾರಿಯಾಗುತ್ತಿರುವ ಹಿನ್ನೆಲೆಯಲ್ಲಿ ಪೂರ್ವ ಸಿದ್ಧತೆಗಾಗಿ ಮೇಲೆ ತಿಳಿಸಿದ ದಿನಾಂಕಗಳಂದು ಕೊಪ್ಪಳ ಜಿಲ್ಲೆಯ ಅಡಿಯಲ್ಲಿ ಬರುವ ಎಲ್ಲಾ ಅಂಚೆ ಕಚೇರಿಗಳಲ್ಲಿ ಕಾರ್ಯನಿರ್ವಹಣೆ ಸ್ಥಗಿತಗೊಳ್ಳಲಿದ್ದು, ಮೇಲೆ ತಿಳಿಸಿದ ಎರಡು ದಿನಗಳಲ್ಲಿ ಯಾವುದೇ ವಹಿವಾಟುಗಳು ಇರುವುದಿಲ್ಲ. ಜೂನ್ 23 ರಿಂದ ಕೊಪ್ಪಳ ಜಿಲ್ಲೆಯ ಎಲ್ಲಾ ಅಂಚೆ ಕಚೇರಿಗಳಲ್ಲಿ ಸೇವೆ ಲಭ್ಯವಿರುತ್ತದೆ. ಗ್ರಾಹಕರು ಸಹಕರಿಸಬೇಕೆಂದು ಕೊಪ್ಪಳ ಅಂಚೆ ವಿಭಾಗದ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರವೇಶದ ದ್ವಾರಕ್ಕೆ ತಾಗಿಕೊಂಡು ಹೆಣವನ್ನು ಹೂಳಿರುತ್ತಾರೆ ಶಾಲೆ ಅಧ್ಯಕ್ಷ ಸಹಾಯಕ ಆಯುಕ್ತರಿಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಲಿಂಗಸೂಗೂರು:ನಮ್ಮ ಸರಕಾರಿ ಆದರ್ಶ ವಿದ್ಯಾಲಯ (ಆರ್.ಎಂ.ಎಸ್.ಎ) ಲಿಂಗಸುಗೂರು ಶಾಲೆಯ ಮುಂಭಾಗದಲ್ಲಿ 18–06–2025 ರಂದು ಬುಧವಾರ ಶಾಲಾ ಪ್ರವೇಶದ ದ್ವಾರಕ್ಕೆ ತಾಗಿ–ಕೊಂಡು ಹೆಣವನ್ನು ಹೂಳಿರುತ್ತಾರೆ. ಇದರಿಂದ ಶಾಲೆಗೆ ದಿನನಿತ್ಯ 6 ರಿಂದ 10ನೇ ತರಗತಿಯವರೆಗಿನ ಮಕ್ಕಳು ಶಾಲೆಗೆ ಬರಲು ಮತ್ತು ಹೋಗಲು ಭಯ ಪಡುತ್ತಿದ್ದಾರೆ.



ಶಾಲಾ ಅವಧಿಗಳು ಜರಗುವ ಸಮಯದಲ್ಲಿ ಶವವನ್ನು ಬ್ಯಾಂಡ್ ಸಪ್ಪಳ ಮಾಡುತ್ತಾ ಬರುವ ಸದ್ದು ಹಾಗೂ ಅಳುವ ಸದ್ದು ಶಾಲೆಯಲ್ಲಿ ಕೇಳಿ ಬರುತ್ತದೆ. ಇದರಿಂದ ಶಾಲಾ ಶಿಕ್ಷಕರಿಗೆ ಪಾಠ ಬೋಧಿಸಲು ಮತ್ತು ಮಕ್ಕಳಿಗೆ ಪಾಠ ಕೇಳಲು ತುಂಬಾತೊಂದರೆಯಾಗುತ್ತದೆ.

ಕಾರಣ ಮಾನ್ಯರು ಶಾಲಾ ಮುಂಭಾಗದಲ್ಲಿ ಶವ ಹೂಳುವುದನ್ನು ನಿಲ್ಲಿಸಿ ಬೇರೆ ಜಾಗವನ್ನು ಅವರಿಗೆ ಮಂಜೂರಿ ಮಾಡಿ ಶಾಲೆಯಲ್ಲಿ ಉತ್ತಮ ಕಲಿಕಾ ವಾತಾವರಣವನ್ನು ಕಲ್ಪಿಸಲು ಸರಕಾರಿ ಆದರ್ಶ ವಿದ್ಯಾಲಯ ಶಾಲೆ ಅಧ್ಯಕ್ಷ ಸಹಾಯಕ ಆಯುಕ್ತರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಎಸ್ ಡಿ ಎಂ ಸಿ ಅಧ್ಯಕ ಅಮರೇಶ, ಬಸವರಾಜ್ ಹುನೂರ, ಡಾ ಮೊಹಮದ್ ಜಾವೀದ್ , ಹನುಮಂತಪ್ಪ ,ವಿಜಯ್ ಕುಮಾರ್, ಗೀತಾ ಕೆಂಭಾವಿ, ಭಾರತಿ ಎಮ್ ಬಯ್ಯಾಪುರ ಸೇರಿ ಇತರಿದ್ದರು.

# ಇಂದು ಕರ್ನಾಟಕ ರಾಜ್ಯ ಸರ್ಕಾರದ ಸಾಧನೆ ಬಿಂಬಿಸುವ ವಸ್ತು ಪ್ರದರ್ಶನ ಉದ್ಘಾಟನಾ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.19–ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಮತ್ತಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ, ಬಳ್ಳಾರಿ ವಿಭಾಗ ಇವರ ಸಂಯುಕ್ತಾಶ್ರಯದಲ್ಲಿ ಜೂ.20 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಟ್ಯಾಂಕ್ ಬಂಡ್ ರಸ್ತೆಯ ಕೇಂದ್ರ ಬಸ್ ನಿಲ್ದಾಣದಲ್ಲಿ ಕರ್ನಾಟಕ ರಾಜ್ಯ ಸರ್ಕಾರದ ಸಾಧನೆ ಬಿಂಬಿಸುವ ವಸ್ತು ಪ್ರದರ್ಶನ ಉದ್ಘಾಟನಾ ಕಾರ್ಯಕ್ರಮ ಆಯೋಜಿಸಲಾಗಿದೆ.

ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಉಸ್ತುವಾರಿ ಸಚಿವ ಬಿ.ಝಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.

ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಶಾಸಕ ಜೆ.ಎನ್ ಗಣೇಶ್, ಸಂಸದರಾದ ಈ.ತುಕಾರಾಂ, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕರಾದ ಬಿ.ನಾಗೇಂದ್ರ, ವಿಧಾನಪರಿಷತ್ ಶಾಸಕರಾದ ಡಾ.ಚಂದ್ರಶೇಖರ್ ಬಿ.ಪಾಟೀಲ, ಶಾಸಕರಾದ ಬಿ.ಎಂ.ನಾಗರಾಜ, ಈ.ಅನ್ನಪೂರ್ಣ, ವಿಧಾನಪರಿಷತ್ ಶಾಸಕರಾದ ಶಶೀಲ್ ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ.ವಿ.ಜೆ., ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ವಿಭಾಗೀಯ ನಿಯಂತ್ರಣಾಧಿಕಾರಿ ಇನಾಯತ್ ಭಾಗವಾನ್ ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿರುವರು.

*ಜೂ.20 ರಿಂದ 26 ರ ವರೆಗೆ ವಿಕ್ಷೀಸಲು ಅವಕಾಶ:*

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವತಿಯಿಂದ ರಾಜ್ಯ ಸರ್ಕಾರದ ಎರಡು ವರ್ಷಗಳ ಸಾಧನೆ ಹಾಗೂ ಯೋಜನೆಗಳನ್ನು ಬಿಂಬಿಸುವ ವಸ್ತು ಪ್ರದರ್ಶನವನ್ನು ನಗರದ ಟ್ಯಾಂಕ್ ಬಂಡ್ ರಸ್ತೆಯ ಕೇಂದ್ರ ಬಸ್ ನಿಲ್ದಾಣದಲ್ಲಿ ಜೂ.20 ರಿಂದ 26 ರ ವರೆಗೆ ಏರ್ಪಡಿಸಲಾಗುತ್ತಿದೆ. ಈ ವಸ್ತು ಪ್ರದರ್ಶನವು ಸಾರ್ವಜನಿಕರ ವೀಕ್ಷಣೆಗೆ ಅವಕಾಶ ಲಭ್ಯವಿರುತ್ತದೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಿರಿಯ ಸಹಾಯಕ ನಿರ್ದೇಶಕರು ಬಿ.ವಿ.ತುಕಾರಾಂ ರಾವ್ ಅವರು ತಿಳಿಸಿದ್ದಾರೆ.

# ರೈತರು ಡಿಎಪಿ ಗೊಬ್ಬರಕ್ಕೆ ಪರ್ಯಾಯವಾಗಿ ಸಂಯುಕ್ತ ರಸಗೊಬ್ಬರ ಬಳಸಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.19–ರೈತರು ಬೆಳೆಗಳಲ್ಲಿ ಗುಣಮಟ್ಟದ ಇಳುವರಿ ಪಡೆಯಲು ಡಿಎಪಿ ಗೊಬ್ಬರದ ಬದಲಾಗಿ ಸಂಯುಕ್ತ ರಸಗೊಬ್ಬರ ಬಳಸಬೇಕು ಎಂದು ಸಹಾಯಕ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ಸಸ್ಯಗಳ ಬೆಳವಣಿಗೆ ಮತ್ತು ಅಭಿವೃದ್ಧಿಗೆ ಹದಿನೇಳು ಪೋಷಕಾಂಶಗಳ ಅಗತ್ಯವಿರುತ್ತದೆ. ಇವುಗಳಲ್ಲಿ ಇಂಗಾಲ, ಜಲಜನಕ ಮತ್ತು ಆಮ್ಲಜನಕವು ಸ್ವಾಭಾವಿಕವಾಗಿ ದೊರೆಯಲಿದ್ದು, ಗಾಳಿ ಮತ್ತು ನೀರಿನ ಮೂಲಕ ಸಸ್ಯಗಳಿಗೆ ಲಭ್ಯವಾಗುತ್ತವೆ. ಉಳಿದ ಹದಿನಾಲ್ಕು ಪೋಷಕಾಂಶಗಳಲ್ಲಿ ಸಾರಜನಕ, ರಂಜಕ, ಪೊಟ್ಯಾಷ್ ಹೆಚ್ಚಿನ ಪ್ರಮಾಣದಲ್ಲಿ ಬೇಕಿದ್ದು, ಇವುಗಳನ್ನು ಪ್ರಧಾನ ಪೋಷಕಾಂಶಗಳೆಂದು ಹೇಳಲಾಗುತ್ತದೆ.

ಕಾಲ್ಸಿಯಂ, ಮೆಗ್ನೆಷಿಯಂ, ಗಂಧಕ, ಕಬ್ಬಿಣ, ಜಿಂಕ್, ಬೋರಾನ್, ತಾಮ್ರ, ಮ್ಯಾಂಗನೀಸ್, ಮಾಲಿಬಿನಂ. ಕ್ಲೋರಿನ್ ಮತ್ತು ನಿಕಲ್ ಕಡಿಮೆ ಪ್ರಮಾಣದಲ್ಲಿ ಬೇಕಿದ್ದು ಇವುಗಳನ್ನು ಲಘು ಪೋಷಕಾಂಶಗಳೆಂದು ವಿಂಗಡಿಸಲಾಗಿದೆ. ಇವುಗಳಲ್ಲಿ ಯಾವುದೇ ಒಂದು ಪೋಷಕಾಂಶದ ಕೊರತೆಯಾದರೂ ಸಸ್ಯಗಳ ಬೆಳವಣಿಗೆ ಮತ್ತು ಅಭಿವೃದ್ಧಿಯ ಮೇಲೆ ಪರಿಣಾಮಬೀರಿ ಇಳುವರಿ ಕುಂಠಿತವಾಗುತ್ತದೆ.

ಪ್ರಧಾನ ಪೋಷಕಾಂಶಗಳು ಮತ್ತು ಲಘು ಪೋಷಕಾಂಶಗಳಿಗೆ ಭೂಮಿಯೇ ಮುಖ್ಯ ಅಧಾರ. ಮಣ್ಣಿನಿಂದ ಈ ಎಲ್ಲಾ ಪೋಷಕಾಂಶಗಳು ಬೆಳೆಗಳಿಗೆ ಬೇಕಾದ ಪ್ರಮಾಣದಲ್ಲಿ ದೊರೆಯುವುದಿಲ್ಲವಾದ್ದರಿಂದ ಬಾಹ್ಯವಾಗಿ ನೀಡುವುದು ಅನಿವಾರ್ಯ.

ಬೆಳೆಗಳಿಗೆ ಬೇಕಾಗುವ ಈ ಬಾಹ್ಯ ಪೋಷಕಾಂಶಗಳನ್ನು ಸಾವಯವ (ಕೊಟ್ಟಿಗೆ ಗೊಬ್ಬರ, ಹಸಿರೆಲೆ ಗೊಬ್ಬರ, ಹಿಂಡಿ ಇತ್ಯಾದಿ) ಮತ್ತು ರಸಗೊಬ್ಬರಗಳಿಂದ ಒದಗಿಸಬೇಕು.

*ರೈತರು ಅನುಸರಿಸಬೇಕಾದ ಕ್ರಮ:*

ರೈತರು ಕೇವಲ ಒಂದು ಅಥವಾ ಎರಡು ಪೋಷಕಾಂಶ ಒದಗಿಸುವ ಯೂರಿಯಾ ಹಾಗೂ ಡಿ.ಎ.ಪಿ.ಯನ್ನು ರೂಢಿಗತವಾಗಿ ಬಳಸುತ್ತಿದ್ದು, ಇವುಗಳಲ್ಲಿ ಸಾರಜನಕ ಮತ್ತು ರಂಜಕದ ಅಂಶ ಮಾತ್ರವಿರುತ್ತದೆ. ಆದರೆ, ಬೆಳೆಗಳಿಗೆ ಬರ ಮತ್ತು ರೋಗ ನಿರೋಧಕ ಶಕ್ತಿ ನೀಡಿ ಕಾಳಿನ ತೂಕ ಹೆಚ್ಚಿಸಲು ಅತ್ಯಂತ ಅವಶ್ಯಕವಾಗಿರುವ ಪೊಟ್ಯಾಷ್ ಲಭ್ಯವಿರುವುದಿಲ್ಲ. ಮಾರುಕಟ್ಟೆಯಲ್ಲಿ ವಿವಿಧ ಶ್ರೇಣಿಯ (ಗ್ರೇಡ್) ಸಾರಜನಕ, ರಂಜಕ ಮತ್ತು ಪೊಟ್ಯಾಷ್ಯುಕ್ತ ಬಹಳಷ್ಟು ರಸಗೊಬ್ಬರಗಳು ಲಭ್ಯವಿದ್ದು, ಶಿಫಾರಸ್ಸಿನಂತೆ ವಿವಿಧ ರಸಗೊಬ್ಬರಗಳ ಸಂಯೋಜನೆಯೊಂದಿಗೆ ಬಳಸಬಹುದು.

ಶಿಫಾರಸ್ಸಿನಂತೆ ಬೆಳೆಗಳಿಗೆ ಸಾರಜನಕ:ರಂಜಕ:ಪೊಟ್ಯಾಷ್ ರಸಗೊಬ್ಬರಗಳನ್ನು 4:2:1 ರ ಅನುಪಾತದಲ್ಲಿ ಬಳಸಬೇಕು. ಆದರೆ ಇತ್ತೀಚಿನ ವರ್ಷಗಳಲ್ಲಿ ರೈತರು ಬಳಸುತ್ತಿರುವ ರಸಗೊಬ್ಬರಗಳ ಅನುಪಾತವು ರಾಜ್ಯದಲ್ಲಿ 5:3:1 ಆಗಿದೆ. ಹಾಗಾಗಿ ರೈತರು ಸಮತೋಲನಾತ್ಮಕ ರಸಗೊಬ್ಬರಗಳ ಬಳಕೆ ಮಾಡಬೇಕು.

ರೈತರು ರಸಗೊಬ್ಬರವನ್ನು ಕೇವಲ ಒಂದೇ ಸಂಸ್ಥೆಯ ಅಥವಾ ಒಂದೇ ರಸಗೊಬ್ಬರಕ್ಕೆ ಆದ್ಯತೆ ನೀಡದೇ, ಡಿ.ಎ.ಪಿ ರಸಗೊಬ್ಬರಕ್ಕೆ ಪರ್ಯಾಯವಾಗಿ ಗಂಧಕ ಒದಗಿಸುವ 20:20:0:13 ಹಾಗೂ ಪೊಟ್ಯಾಷ್ ಒದಗಿಸುವ ಇತರೆ ಸಂಯುಕ್ತ ರಸಗೊಬ್ಬರಗಳಾದ 15:15:15, 10.26.26, 12:32:16, 22:22:11, 14:35:14, 17:17:17, 14:28:14, 19:19:19, 20:10:10 ಇತ್ಯಾದಿ ರಸಗೊಬ್ಬರಗಳನ್ನೂ ಸಹ ಬಳಸಬಹುದಾಗಿದೆ.

ವಿವಿಧ ಹಂತಗಳಲ್ಲಿ ಜರಗುವ ತರಬೇತಿಗಳು, ಕಾರ್ಯಗಾರಗಳು, ಅಭಿಯಾನಗಳಲ್ಲಿ ಕಡ್ಡಾಯವಾಗಿ ರೈತರಿಗೆ ರಸಗೊಬ್ಬರ ಮಾರಾಟಗಾರರು ಮಾರಾಟ ಮಾಡುವಾಗ ಪೊಟ್ಯಾಷಯುಕ್ತ ಸಂಯುಕ್ತ ರಸಗೊಬ್ಬರಗಳ ಉಪಯುಕ್ತತೆಯ ಬಗ್ಗೆ ಸೂಚನೆಯನ್ನು ನೀಡಬೇಕು.

ಹೆಚ್ಚಿನ ಮಾಹಿತಿಗಾಗಿ ರೈತರು ತಮ್ಮ ಸಮೀಪದ ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಭೇಟಿ ನೀಡಿ ಮಾಹಿತಿ ಪಡೆದುಕೊಳ್ಳಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವ್ಯಕ್ತಿ ಕಾಣೆ: ಪತ್ತೆಗೆ ಸಹಕರಿಸಲು ಮನವಿ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಕೊಪ್ಪಳದ ಬೆಂಕಿನಗರ ನಿವಾಸಿಯಾದ ಖಾಜಾ ಹುಸೇನ್ ಮಾಬು ಸಾಬ ಕಳಸಾಪೂರ ಎಂಬ 54 ವರ್ಷದ ವ್ಯಕ್ತಿಯು 2024 ರ ಅಕ್ಟೋಬರ್ 25 ರಿಂದ ಕಾಣೆಯಾಗಿದ್ದು, ಈವರೆಗೂ ಪತ್ತೆಯಾಗಿರುವುದಿಲ್ಲ. ಈ ಬಗ್ಗೆ ಕೊಪ್ಪಳ ನಗರ ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ: 13/2025 ಕಲಂ: ಮನುಷ್ಯ ಕಾಣೆ ಅಡಿ ಪ್ರಕರಣ ದಾಖಲಾಗಿದೆ.



ವ್ಯಕ್ತಿಯ ಚಹರೆ:

ವ್ಯಕ್ತಿಯು 5.6 ಅಡಿ ಎತ್ತರವಿದ್ದು, ಸಾದಾಕಪ್ಪು ಮೈಬಣ್ಣ, ಸದೃಢ ಮೈಕಟ್ಟು, ದುಂಡುಮುಖ ಹೊಂದಿದ್ದು, ಕನ್ನಡ, ತೆಲುಗು, ಹಿಂದಿ ಭಾಷೆ ಮಾತನಾಡುತ್ತಾರೆ. ಕಾಣೆಯಾದಾಗ ಬಿಳಿ ಬಣ್ಣದ ತುಂಬು ತೋಳಿನ ಅಂಗಿ ಮತ್ತು ಕಪ್ಪು ಬಣ್ಣದ ಪ್ಯಾಂಟ್ ಧರಿಸಿದ್ದರು.

ಮೇಲ್ಕಂಡ ಚಹರೆಯ ವ್ಯಕ್ತಿಯ ಬಗ್ಗೆ ಯಾರಿಗಾದರೂ ಮಾಹಿತಿ ಇದ್ದಲ್ಲಿ ಅಥವಾ ದೊರೆತಲ್ಲಿ ಕೊಪ್ಪಳ ಕಂಟ್ರೋಲ್ ರೂಂ.08539–230100, 230222, ನಗರ ಠಾಣೆ ಪಿಎಸ್‌ಐ: 9480803745, ನಗರ ಠಾಣೆ: 08539–220333 ಗೆ ಸಂಪರ್ಕಿಸಿ ಮಾಹಿತಿ ನೀಡುವಂತೆ ಕೊಪ್ಪಳ ನಗರ ಪೊಲೀಸ್ ಠಾಣೆ ಪ್ರಕಟಣೆ ಕೋರಿದೆ.

# ಜೂ.21 ರಂದು ವಿದ್ಯುತ್ ಗ್ರಾಹಕರ ಸಂವಾದ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.19–ಬಳ್ಳಾರಿ ಗ್ರಾಮೀಣ ಜೆಸ್ಕಾಂ ಕಾರ್ಯ ಮತ್ತು ಪಾಲನಾ ಶಾಖೆ–3 ರ ವ್ಯಾಪ್ತಿಯ ಬರುವ ವಿದ್ಯುತ್ ಗ್ರಾಹಕರಿಗೆ ವಿದ್ಯುತ್ ಸಂಬಂಧಿಸಿದ ಸಮಸ್ಯೆಗಳನ್ನು ಬಗೆಹರಿಸಲು ಜೂ.21 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1.30 ವರೆಗೆ ಮುಂಡರಿಗಿ ಪ್ರದೇಶದ ಎಲ್ಲಪ್ಪ ತಾತಾ ಮಠದ ಆವರಣದಲ್ಲಿ ವಿದ್ಯುತ್ ಗ್ರಾಹಕರ ಸಂವಾದ ಸಭೆ ಆಯೋಜಿಸಲಾಗಿದ್ದು, ಸಾರ್ವಜನಿಕರು ಭಾಗವಹಿಸಿ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೂ.20, 21 ರಂದು ಅಂಚೆ ವಹಿವಾಟು ಸ್ಥಗಿತ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.19–ಭಾರತೀಯ ಅಂಚೆ ಇಲಾಖೆಯ ಆದೇಶದಂತೆ ಬಳ್ಳಾರಿ ಪ್ರಧಾನ ಕಚೇರಿ ವ್ಯಾಪ್ತಿಗೆ ಬರುವ ಎಲ್ಲಾ ಉಪ ಅಂಚೆ ಕಚೇರಿ ಹಾಗೂ ಶಾಖಾ ಅಂಚೆ ಕಚೇರಿಗಳಲ್ಲಿ ಹೊಸ ತಂತ್ರಾಂಶ (ಎಪಿಟಿ 2.0) ಅಳವಡಿಕೆ ಜಾ–ರಿಯಾಗುತ್ತಿದ್ದು, ಈ ಹಿನ್ನಲೆಯಲ್ಲಿ ಜೂ. 20 ಮತ್ತು 21 ರಂದು ಎರಡು ದಿನಗಳ ಕಾಲ ಅಂಚೆ ಕಚೇರಿಗಳಲ್ಲಿ ವಹಿವಾಟು ಸ್ಥಗಿತಗೊಳಿಸಲಾಗುವುದು ಎಂದು ಬಳ್ಳಾರಿ ವಿಭಾಗದ ಅಂಚೆ ಅಧೀಕ್ಷಕ ಪಿ.ಚಿದಾನಂದ ಅವರು ತಿಳಿಸಿದ್ದಾರೆ.

ಭಾರತೀಯ ಅಂಚೆ ಇಲಾಖೆಯು ಆಧುನಿಕ ಹಾಗೂ ಗ್ರಾಹಕ ಸ್ನೇಹಿ ತಂತ್ರಾಂಶವನ್ನು ಅಭಿವೃದ್ಧಿಪಡಿಸಿ, ಆಧುನಿಕ ತಂತ್ರಜ್ಞಾನದ ನೆಟ್ವರ್ಕ್ ಸಮಸ್ಯೆಯಂತಹ ತೊಡಕುಗಳಿಂದ ಗ್ರಾಹಕರ ಸೇವೆಗಳಿಗೆ ಚ್ಯುತಿ ಬರದಂತೆ ಗಮನಹರಿಸಿ (ಅಡ್ವಾನ್ಸ್ಡ್ ಪೋಸ್ಟಲ್ ಟೆಕ್ನಾಲಜಿ 2.0) ಯನ್ನು ದೇಶಾದ್ಯಂತ ಎಲ್ಲಾ ಅಂಚೆ ಕಚೇರಿಗಳಲ್ಲಿ ಅಳವಡಿಸಲು ಮುಂದಾಗಿದೆ. ಇದರ ಪ್ರಯುಕ್ತ ಬಳ್ಳಾರಿ ಅಂಚೆ ವಿಭಾಗದ ಬಳ್ಳಾರಿ ಪ್ರಧಾನ ಅಂಚೆ ಕಚೇರಿ ಹಾಗೂ ಅದರಡಿ ಬರುವ ಎಲ್ಲಾ ಉಪ ಅಂಚೆ ಕಚೇರಿಗಳು ಮತ್ತು ಶಾಖಾ ಅಂಚೆ ಕಚೇರಿಗಳಲ್ಲಿ ಎ.ಪಿ.ಟಿ 2.0 ತಂತ್ರಾಂಶವನ್ನು ಜೂ.23 ರಂದು ಅಳವಡಿಸಲು ಮುಂದಾಗಿದೆ.

ಈ ಚಟುವಟಿಕೆಯ ಪೂರ್ವಭಾವಿಯಾಗಿ ಬಳ್ಳಾರಿ ಅಂಚೆ ವಿಭಾಗದ ವ್ಯಾಪ್ತಿಗೆ ಬರುವ ಬಳ್ಳಾರಿ ಪ್ರಧಾನ ಅಂಚೆ ಕಚೇರಿ, ಬಳ್ಳಾರಿ ನಗರದಲ್ಲಿರುವ ಇತರೆ ಎಲ್ಲಾ ಅಂಚೆ ಕಚೇರಿಗಳು, ಸಿರುಗುಪ್ಪ, ಸಿರುಗುಪ್ಪ ಸದಾಶಿವನಗರ, ಹಚ್ಚೊಳ್ಳಿ, ತೆಕ್ಕಲಕೋಟೆ, ಎಮ್ಮಿಗನೂರು, ಕುರುಗೋಡು, ಸಿರಿಗೇರಿ, ಕರೂರು, ಕೋಳೂರು, ಮೋಕಾ, ಚೆಳ್ಳಗುರ್ಕಿ, ಕುಡುತಿನಿ, ಬಿ.ಟಿ.ಪಿ.ಎಸ್, ತೋರಣಗಲ್ಲು, ವಿದ್ಯಾನಗರ, ಶಂಕರಹಿಲ್ ಟೌನ್, ಸಂಡೂರು, ಸಂಡೂರು ಲಕ್ಷ್ಮೀಪುರ, ದೇವಗಿರಿ, ದೋಣಿಮಲೈ ಟೌನ್ ಶಿಪ್, ಯಶವಂತನಗರ, ಉಪ ಅಂಚೆ ಕಚೇರಿಗಳು ಹಾಗೂ ಸಂಬಂಧಿತ ಶಾಖಾ ಅಂಚೆ ಕಚೇರಿಗಳಲ್ಲಿ ಜೂನ್ 20 ಮತ್ತು 21ರಂದು ಯಾವುದೇ ವ್ಯವಹಾರ, ವಹಿವಾಟು ಇರುವುದಿಲ್ಲ.

ಅಂಚೆ ಕಚೇರಿಯ ಗ್ರಾಹಕರು ಸಹಕರಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರವಾಸೋದ್ಯಮ ಅತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.19–ಪ್ರವಾಸೋದ್ಯಮ ಇಲಾಖೆ ವತಿಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಅಭ್ಯರ್ಥಿಗಳಿಗೆ ಪ್ರವಾಸೋದ್ಯಮ ಹಾಗೂ ಅತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ನೀಡಲಾಗುತ್ತಿದ್ದು, ಆನ್ ಲೈನ್ ಮೂಲಕ ಅರ್ಜಿ ಅಹ್ವಾನಿಸಲಾಗಿದೆ.

ತರಬೇತಿ ಪಡೆಯುವ ಅಭ್ಯರ್ಥಿಯ ವಯಸ್ಸು ಕನಿಷ್ಠ 20 ರಿಂದ 45 ವರ್ಷದೊಳಗಿರಬೇಕು.

**ತರಬೇತಿಯ ವಿವರ:**

ಆಹಾರ ಮತ್ತು ಪಾನೀಯ ಪಾನೀಯಗಳ ವಿತರಣೆ (ಫುಡ್ ಅಂಡ್ ಬೆವರೇಜ್ ಸರ್ವೀಸ್): ತರಬೇತಿಯ ಕಾಲಾವಧಿ 4 ತಿಂಗಳು ಹಾಗೂ 10 ನೇ ತರಗತಿ ಉತ್ತೀರ್ಣರಾಗಿರಬೇಕು.

ವಿವಿಧ ಆಹಾರ ತಯಾರಕರು (ಮಲ್ಟಿ ಕ್ಯೂಸೆನ್ ಕುಕ್): ತರಬೇತಿಯ ಕಾಲಾವಧಿ 5 ತಿಂಗಳು ಹಾಗೂ 8 ನೇ ತರಗತಿ ಉತ್ತೀರ್ಣರಾಗಿರಬೇಕು.

ಕೊಠಡಿ ನಿರ್ವಹಣೆ (ರೂಂ ಅಟೆಂಡಂಟ್) : ತರಬೇತಿಯ ಕಾಲಾವಧಿ 4 ತಿಂಗಳು ಹಾಗೂ ಐದನೇ ತರಗತಿ ಉತ್ತೀರ್ಣರಾಗಿರಬೇಕು.

ಸ್ವಾಗತಕಾರರು: ತರಬೇತಿಯ ಅವಧಿ 4 ತಿಂಗಳು (12 ನೇ ತರಗತಿ ಉತ್ತೀರ್ಣರಾಗಿರಬೇಕು).

ಕೇಂದ್ರ ಹಾಗೂ ರಾಜ್ಯ ಸರ್ಕಾರದ ಅತಿಥ್ಯ ಕ್ಷೇತ್ರದ ಸಂಸ್ಥೆಗಳಾದ ಐಹೆಚ್‌ಎಂ ಬೆಂಗಳೂರು ಮತ್ತು ಎಫ್‌ಸಿಐ ಮೈಸೂರು ಸಂಸ್ಥೆಗಳು ಪ್ರತಿಷ್ಠಿತ ಅತಿಥ್ಯ ಕ್ಷೇತ್ರದಲ್ಲಿ ತರಬೇತಿ ನೀಡಲಾಗುತ್ತಿದ್ದು, ತರಬೇತಿ ಅವಧಿಯಲ್ಲಿ ಊಟ, ವಸತಿ ಹಾಗೂ ಪ್ರೋತ್ಸಾಹಧನದ ನೀಡಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕ ಕಚೇರಿ ಅಥವಾ ದೂ.08392–228537, ಮೊ.9740477810 ಮತ್ತು ಜಿಲ್ಲಾ ಪ್ರವಾಸೋದ್ಯಮ ಇಲಾಖೆಯ ಸಮಾಲೋಚಕರ ಮೊ.7406648594 ಗೆ ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈತ ಸಂಪರ್ಕ ಕೇಂದ್ರಗಳಲ್ಲಿ ಬಿತ್ತನೆ ಬೀಜ ವಿತರಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.19–ಬಳ್ಳಾರಿ ಮತ್ತು ಕುರುಗೋಡು ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ಎಲ್ಲಾ ರೈತ ಸಂಪರ್ಕ ಕೇಂದ್ರಗಳಲ್ಲಿ ರೈತರಿಗೆ ಅವಶ್ಯವಿರುವ ಬಿತ್ತನೆ ಬೀಜಗಳಾದ ತೊಗರಿ, ಸಜ್ಜೆ, ನವಣೆ, ಜೋಳ, ಮೆಕ್ಕೆಜೋಳ, ಶೇಂಗಾ ಮುಂತಾದ ಬಿತ್ತನೆ ಬೀಜಗಳು ದಾಸ್ತಾನೀಕರಿಸಲಾಗಿದೆ ಎಂದು ಸಹಾಯಕ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ರೈತರು ಸಹಾಯಧನದಡಿ ಬಿತ್ತನೆ ಬೀಜ ಪಡೆಯಲು ತಮ್ಮ ಆಧಾರ್ ಪ್ರತಿ, ಬ್ಯಾಂಕ್ ಖಾತೆಯ ಪುಸ್ತಕ ಪ್ರತಿ, ಪಹಣಿ ಹಾಗೂ ಜಾತಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಲ್ಲಿಸಬೇಕು.

ರೈತರು ಖಾಸಗಿ ಮಳಿಗೆಯಲ್ಲಿ ಬಿತ್ತನೆ ಬೀಜ ಖರೀದಿಸಿದರೆ ಕಡ್ಡಾಯವಾಗಿ ರಶೀದಿಯನ್ನು ಪಡೆಯಬೇಕು. ಬಿತ್ತನೆ ಬೀಜಗಳನ್ನು ಬಿತ್ತುವ ಮುನ್ನ ಬೀಜೋಪಚಾರ ಮಾಡುವುದರಿಂದ ಮುಂದೆ ಸಂಭವಿಸಬಹುದಾದ ರೋಗ ಹಾಗೂ ಕೀಟಭಾದೆ ತಡೆಗಟ್ಟಬಹುದು. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರಗಳಿಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ: ಶುಲ್ಕ ಮರುಪಾವತಿಗೆ ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.19– ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2024–25ನೇ ಸಾಲಿನ ಮೆಟ್ರಿಕ್ ನಂತರದ ಕೋರ್ಸ್ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ ರಾಜೀವ್ ಗಾಂಧಿ ವಿಶ್ವವಿದ್ಯಾಲಯದ ಕೋರ್ಸ್ಗಳಿಗೆ ಶುಲ್ಕ ಮರುಪಾವತಿ ಸೌಲಭ್ಯಕ್ಕಾಗಿ ಈಗಾಗಲೇ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವ ಅವಧಿಯನ್ನು ಜೂ.30 ರ ವರೆಗೆ ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂ.08392–275751, ಮೊ.8050770005 ಗೆ ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಭಾನುಮತಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿಎಪಿ ನಕಲಿ ರಸಗೊಬ್ಬರ ಪೂರೈಕೆ ತಡೆಗೆ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.19–ಜಿಲ್ಲೆಯಲ್ಲಿ ಡಿಎಪಿ ನಕಲಿ ರಸಗೊಬ್ಬರ ಪೂರೈಕೆ ಹಾವಳಿ ನಡೆಯುತ್ತಿದ್ದು, ನಕಲಿ ರಸಗೊಬ್ಬರ ತಯಾರಕರು ಹಾಗೂ ಪೂರೈಕೆ ಮಾಡುವವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕೆಂದು ಭಾರತೀಯ ಕಿಸಾನ ಸಂಘದ ಜಿಲ್ಲಾಧ್ಯಕ್ಷ ವಿರುಪಾಕ್ಷಯ್ಯ ಹಿರೇಮಠ ಆಗ್ರಹಿಸಿದ್ದಾರೆ. ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಕಲಿ ರಸಗೊಬ್ಬರ ಪೂರೈಸುವ ಸಮಯದಲ್ಲಿ ಪೂರೈಕೆದಾರರನ್ನು ರೈತ ಸಂಘಟನೆಗಳು ಹಿಡಿದು ಬಾದಾಮಿ ತಾಲೂಕಿನ ಕೆರೂರ ಪೊಲೀಸ್ ಠಾಣೆಯಲ್ಲಿ ಕೃಷಿ ಇಲಾಖೆ ಅಧಿಕಾರಿಗಳ ಮೂಲಕ ಪ್ರಕರಣ ದಾಖಲಾಗಿದೆ.

ಈ ರೀತಿ ಅನಕ್ಷರಸ್ಥರು ರೈತರು ನಕಲಿ ರಸಗೊಬ್ಬರವನ್ನು ಬೆಳೆಗಳಿಗೆ ಹಾಕುವುದರಿಂದ ಯಾವುದೇ ಬೆಳೆ ಬಾರದೆ ರೈತರು ಸಂಕಷ್ಟಕ್ಕೆ ಪಡುವ ಪರಿಸ್ಥಿತಿ ನಿರ್ಮಾಣವಾಗುತ್ತೆ ಎಂದ ಅವರು, ಡಿಎಪಿ ನಕಲಿ ರಸಗೊಬ್ಬರ ತಯಾರಕರ ಹಾಗೂ ಪೂರೈಕೆ ಮಾಡುವವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕೆಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಬಸವರಾಜ ಗೋನಾಳ, ಪರಶುರಾಮ ಮಂಟೂರ, ಮಲ್ಲಪ್ಪ ಗಾಣಗೇರ, ಅರುಣ ಕಟ್ಟಿಮನಿ, ಸಿದ್ರಾಮ ಮತ್ತಿತರರು ಇದ್ದರು.

# ಸ್ವಚ್ಛ ಪರಿಸರದಿಂದ ಉತ್ತಮ ಆರೋಗ್ಯ–ಜಡಗನ್ನವರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.19–ಸ್ವಚ್ಛ ಪರಿಸರ, ಪೋಷಕಾಂಶವುಳ್ಳ ಆಹಾರ ಸೇವನೆಯಿಂದ ಉತ್ತಮ ಆರೋಗ್ಯ ಪ್ರಾಪ್ತವಾಗುತ್ತದೆ ಎಂದು ಆರೋಗ್ಯ ಇಲಾಖೆಯ ಆರೋಗ್ಯ ಶಿಕ್ಷಣಾಧಿಕಾರಿ ಆರ್.ಪಿ.ಜಡಗನ್ನವರ ಹೇಳಿದರು.

ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್.ನರಸಾಪೂರ ಕಲಾ ಹಾಗೂ ಎಂ.ಬಿ.ಶಿರೂರ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಗುರುವಾರ ಎನ್‌ಎಸ್‌ಎಸ್ ಘಟಕಗಳು ಆಯೋಜಿಸಿದ್ದ ಡೆಂಗ್ಯು ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿ, ಡೆಂಗ್ಯು ಸೇರಿ ಮಾರಕ ರೋಗಗಳ ಬಗ್ಗೆ ಯಾರೂ ಉದಾಸೀನ ಮಾಡಬಾರದು ಎಂದರು.

ಪರಿಸರ ಸ್ವಚ್ಛವಾಗಿದ್ದರೆ ಸೊಳ್ಳೆಗಳ ಕಾಟ ಇರುವುದಿಲ್ಲ. ಹೀಗಾಗಿ ಜನರಲ್ಲಿ ಪರಿಸರ ಸ್ವಚ್ಛತೆ, ನೀರಿನ ತೊಟ್ಟಿಗಳ ಮೇಲೆ ಮುಚ್ಚಳಿಕೆ ಹಾಕುವುದು ಸೇರಿದಂತೆ ಮುಂಜಾಗ್ರತಾ ಕ್ರಮಗಳ ಕುರಿತು ಜಾಗೃತಿ ಮೂಡಿಸುವುದು ಅವಶ್ಯವಾಗಿದೆ ಎಂದ ಜಡಗನ್ನವರ, ನಮ್ಮ ಆರೋಗ್ಯ ರಕ್ಷಣೆ ನಮ್ಮ ಕೈಯಲ್ಲಿದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಶ್ರೀನಿವಾಸ ನರಗುಂದ, ಜೀವನದಲ್ಲಿ ಸಾಧನೆ ಮಾಡಲು ಉತ್ತಮ ಆರೋಗ್ಯ ಬೇಕು. ಉತ್ತಮ ಹವ್ಯಾಸ ಮತ್ತು ಒಳ್ಳೆಯ ಆಹಾರ ಪದ್ಧತಿಯಿಂದ ಆರೋಗ್ಯಪೂರ್ಣ ಜೀವನ ನಡೆಸಬಹುದು ಎಂದರು.

ಉಪನ್ಯಾಸಕರಾದ ನಮಿತಾ ನಾಯಕ, ಮೈತ್ರಾ ಗುಡೂರ ಇದ್ದರು. ಸುಮಾ ವಡ್ಡರ ಹಾಗೂ ಸಹನಾ ನರೇಗಲ್ ಪ್ರಾರ್ಥಿಸಿದರು. ಎನ್‌ಎಸ್‌ಎಸ್ ಅಧಿಕಾರಿ ಎಸ್.ಎಂ.ಹಡಪದ ಸ್ವಾಗತಿಸಿದರು. ಜ್ಯೋತಿ ಬಿಳಿಜಾಡರ ನಿರೂಪಿಸಿದರು. ಎಸ್.ವಾಯ್.ಬೊಮ್ಮಣ್ಣವರ ವಂದಿಸಿದರು.

# ಅಂತಾರಾಷ್ಟ್ರೀಯ ಯೋಗ ದಿನಾಚರಣೆಗೆ ಅಗತ್ಯ ಸಿದ್ಧತೆಯಾಗಲಿ: ಶಿವಾನಂದ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 19–'ಒಂದು ಭೂಮಿ ಒಂದು ಆರೋಗ್ಯಕ್ಕಾಗಿ ಯೋಗ' ಘೋಷವಾಕ್ಯದಡಿ ಜೂನ್ 21ರಂದು ಆಚರಿಸಲ್ಪಡುವ ಅಂತಾರಾಷ್ಟ್ರೀಯ ಯೋಗಾ ದಿನಾಚರಣೆಗೆ ಅಗತ್ಯ ಸಿದ್ದತೆ ಮಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಹೇಳಿದರು.

ಜೂನ್ 17ರಂದು ನೂತನ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸಭಾಂಗಣದಲ್ಲಿ 11ನೇ ಅಂತಾರಾಷ್ಟ್ರೀಯ ಯೋಗಾ ದಿನಾಚರಣೆಯ ನಿಮಿತ್ತ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆ, ರಾಯಚೂರು ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಆಶ್ರಯದಲ್ಲಿ 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಜೂನ್ 21ರ ಬೆಳಗ್ಗೆ 6.30ಕ್ಕೆ ಮಹಾತ್ಮ ಗಾಂಧಿ ಕ್ರೀಡಾಂಗಣದಲ್ಲಿ ಯೋಗ ಶಿಬಿರ ಆಯೋಜಿಸಲಾಗಿದೆ. 6.45 ರಿಂದ 7 ಗಂಟೆವರೆಗೆ ಧ್ಯಾನ, 7 ಗಂಟೆಯಿಂದ 7.45ರವರೆಗೆ ಯೋಗ ಪ್ರದರ್ಶನ, 8 ರಿಂದ 8.30ರವರೆಗೆ ವೇದಿಕೆಯ ಕಾರ್ಯಕ್ರಮ ನಡೆಯಲಿದೆ. ಇದೆ ವೇಳೆ ಬಹುಮಾನ ವಿತರಣೆ ಮಾಡಲಾಗುತ್ತದೆ ಎಂದರು.

ವಿಶ್ವದಲ್ಲಿ ಸಾರ್ವತ್ರಿಕವಾಗಿ ಜೂನ್ 21ರಂದು ಅಂತಾರಾಷ್ಟ್ರೀಯ ಯೋಗ ದಿನ ಎಂದು ಆಯೋಜಿಸಲಾಗುತ್ತಿದೆ. ಅನಾದಿಕಾಲದಿಂದಲೂ ಯೋಗ ಸಾಧನೆಗೆ ಅತಿ ಮಹತ್ವವಿದೆ. ಇಂದಿನ ಜಗತ್ತು ದೈಹಿಕ ಮತ್ತು ಮಾನಸಿಕ ಆರೋಗ್ಯದ ಗಂಭೀರ ಬಿಕ್ಕಟ್ಟನ್ನು ಎದುರಿಸುತ್ತಿದೆ. ಜನಸಾಮಾನ್ಯರನ್ನು ಇದು ತೀವ್ರವಾಗಿ ಕಾಡುತ್ತಿದೆ. ಇದಕ್ಕೆ ಸುಲಭೋಪಾಯ ಯೋಗ ಮಾತ್ರ ಆಗಿದೆ. ದೀರ್ಘಕಾಲದವರೆಗೆ ಆರೋಗ್ಯವಂತರಾಗಿ ಬಾಳಲು ಯೋಗ ಅತ್ಯಂತ ಸಹಕಾರಿಯಾಗಿದೆ. ಈ ನಿಟ್ಟಿನಲ್ಲಿ ಸ್ವಾಸ್ಥ್ಯ ಸಮಾಜದ ಪರಿಕಲ್ಪನೆಗಾಗಿ ಜಿಲ್ಲಾಡಳಿತ ವತಿಯಿಂದ ಯೋಗ ಶಿಬಿರ ಆಯೋಜಿಸಲಾಗಿದ್ದು, ಸಾರ್ವಜನಿಕರು, ಶಾಲಾ–ಕಾಲೇಜು ವಿದ್ಯಾರ್ಥಿಗಳು, ಯುವಕ ಹಾಗೂ ಯುವತಿಯರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡೆಯಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ಸಭೆಯ ಮೂಲಕ ಮನವಿ ಮಾಡಿದರು.

ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ಜೂನ್ 18ರಂದು ಬೆಳಗ್ಗೆ 9 ಗಂಟೆಗೆ ಮಹಿಳೆಯರು ಮತ್ತು ಪುರುಷರಿಗೆ ವಯೋ ಆಧರಿತ ಯೋಗ ಸ್ಪರ್ಧೆಯನ್ನು ಆಯೋಜಿಸಲಾಗಿದೆ. ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಯೋಗ ಕುರಿತು ಪ್ರಬಂಧ ಸ್ಪರ್ಧೆಯನ್ನು ಮಧ್ಯಾಹ್ನ 2 ಗಂಟೆ ವೇಳೆಗೆ ರಾಯಚೂರ ಏಕ್ ಮಿನಾರ್ ಹತ್ತಿರದ ಜಿಲ್ಲಾ ಅಯುಷ್ ಆಸ್ಪತ್ರೆ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ನೋಂದಣಿಗಾಗಿ ಡಾ.ತಿಮ್ಮಪ್ಪ ವಡ್ಡೆಪಲ್ಲಿ ಮೊ:9900778049 ಇವರಿಗೆ ಸಂಪರ್ಕಿಸಲು ತಿಳಿಸಲಾಗಿದೆ. ಜೂನ್ 19ರಂದು ಬೆಳಗ್ಗೆ 7.30 ರಿಂದ ಮಹಾತ್ಮಗಾಂಧಿ ಕ್ರೀಡಾಂಗಣದಿಂದ ಜಿಲ್ಲಾ ಆಯುಷ್ ಆಸ್ಪತ್ರೆವರೆಗೆ ಯೋಗ ಜಾಗೃತಿ ಶಿಬಿರ ಆಯೋಜಿಸಲಾಗಿದೆ. ಈ ಕಾರ್ಯಕ್ರಮಕ್ಕೆ ರಾಯಚೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆರೋಗ್ಯ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಎನ್.ಸಿ.ಸಿ, ನೆಹರು ಯುವ ಕೇಂದ್ರ, ರಾಷ್ಟ್ರೀಯ ಸೇವಾ ಯೋಜನೆ, ಆಯುಷ್ ಸಂಸ್ಥೆಗಳು, ಆರ್‌ಟಿಪಿಎಸ್ /ವೈಟಿಪಿಎಸ್, ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ರಿಮ್ಸ್ ಮೆಡಿಕಲ್ ಕಾಲೇಜು, ರಾಯಚೂರು ವಿಶ್ವವಿದ್ಯಾಲಯ, ಆರೋಗ್ಯ ಚಿಂತನೆ ಚಾರಿಟೆಬಲ್ ಟ್ರಸ್ಟ್, ಸ್ವಾಮಿ ವಿವೇಕಾನಂದ ಹೋಲಿಸ್ಟಿಕ್ ಹೆಲ್ತ್‌ಕೇರ್ ಸೆಂಟರ್, ಶ್ರೀ ಪತಂಜಲಿ ಯೋಗ ಸೇವಾ ಸಮಿತಿ, ರಾಯಚೂರು ಜಿಲ್ಲಾ ಯೋಗಾಸನ ಕ್ರೀಡಾ ಸಂಘ, ಸಹಜ ಸ್ಥಿತಿ ಯೋಗ ಜ್ಞಾನ ಮಂದಿರ, ವ್ಯಕ್ತಿ ವಿಕಾಸ ಕೇಂದ್ರ ಆರ್ಟ ಆಫ್ ಲಿವಿಂಗ್, ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿಯ ವಿದ್ಯಾಲಯ, ರಾಮಕೃಷ್ಣ ಜ್ಞಾನ ಮಂದಿರ, ರೋಟರಿ ಕ್ಲಬ್, ಲಯನ್ಸ್ ಕ್ಲಬ್, ಎಸ್.ಎಸ್.ಎಮ್ ಕಾಲೇಜ್, ನೆಹರು ಯುವ ಕೇಂದ್ರ ಸ್ಕೌಟ್ & ಗೈಡ್ಸ್ ಸಂಸ್ಥೆ, ರೆಡ್ ಕ್ರಾಸ್ ಸಂಸ್ಥೆ, ಭಾರತ ಸೇವಾ ದಳ, ತಾರನಾಥ ಶಿಕ್ಷಣ ಸಂಸ್ಥೆ, ಟ್ಯಾಗೋರ್ ಶಿಕ್ಷಣ ಸಂಸ್ಥೆ, ನವೋದಯ ಶಿಕ್ಷಣ ಸಂಸ್ಥೆ, ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರ ರಾಯಚೂರು, ಬಿ.ಎನ್.ಡಬ್ಲೂ ಪತಂಜಲಿ ಯೋಗ ಪ್ರತಿಷ್ಠಾನ ವಡ್ಡೆಪಲ್ಲಿ, ಪತಂಜಲಿ ಯೋಗ ಪ್ರತಿಷ್ಠಾನ ಟ್ರಸ್ಟ್, ಪೂರ್ಣಿಮಾ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ವಂದೆ ಮಾತರಂ ಯುವ ಸಂಘ, ಅನ್ನದಾನಯ್ಯ ಸ್ವಾಮಿ ಯೋಗ ಸನ್ನಿಧಿ, ಜ್ಞಾನ ವಿದ್ಯಾಪೀಠ ಟ್ರಸ್ಟ್ ಹಾಗೂ ಯೋಗ ಆಸಕ್ತ ಖಾಸಗಿ ಶಿಕ್ಷಣ ಸಂಸ್ಥೆಗಳು ಸಹಯೋಗ ನೀಡುತ್ತಿವೆ ಎಂದು ಇದೆ ವೇಳೆ ಜಿಲ್ಲಾ ಆಯುಷ್ ಅಧಿಕಾರಿಗಳಾದ ಡಾ.ಶಂಕರಗೌಡ ಅವರು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಆಯುಷ್ ವೈದ್ಯಾಧಿಕಾರಿ ಡಾ.ಶಂಕರಗೌಡ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಕೆ ಕೊಟ್ರಬಸಪ್ಪ, ಬಿಇಓ ಪರಶುರಾಮ, ಭಾರತ ಸೇವಾ ದಳದ ಶಿವಕುಮಾರ, ಭಾರತ ಸ್ಕೌಟ್ ಮತ್ತು ಗೈಡ್ಸನ ಮಹಮ್ಮದ್ ಶಫುದ್ದೀನ್, ಸಹಜ ಯೋಗ ಪ್ರತಿಷ್ಠಾನದ ನರಸಯ್ಯ, ಆರ್ಟ್ ಆಫ್ ಲಿವಿಂಗ್‌ನ ಮಲ್ಲಿಕಾರ್ಜುನ ಸ್ವಾಮಿ, ಯೋಗಾ ಫೌಂಡೇಶನ್‌ನ ರಮೇಶ್, ಸಿದ್ಧಾರ್ಥ, ಯೋಗಾ ಅಸೋಸಿಯೇಶನ್‌ನ ಡಾ.ತಿಮ್ಮಯ್ಯ, ವೈಟಿಪಿಎಸ್‌ನ ಗಂಗಾಧರ ಎಂ.ಆರ್., ರವೀಶ್ ಕುಮಾರ ಸೇರಿದಂತೆ ಇನ್ನಿತರರು ಇದ್ದರು.

# ಜೂ.22 ಗಾಣಿಗ ಸಮಾಜದ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.19–ಗಾಣಿಗ ಸಮಾಜದ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ ಹಾಗೂ ಸಮಾಜದ ಅಧಿಕಾರಿಗಳು, ನಿವೃತ್ತ ನೌಕರರು ಮತ್ತು ಸಾಧಕರಿಗೆ ಸನ್ಮಾನಿಸುವ ಸಂಬಂಧ ಚರ್ಚಿಸಲು ಜೂ.22 ರಂದು ಬೆಳಿಗ್ಗೆ 11 ಗಂಟೆಗೆ ನವನಗರದ ಜ್ಯೋತಿ ಬ್ಯಾಂಕಿನ ಸಭಾ ಭವನದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ.

ಸಭೆಯ ಅಧ್ಯಕ್ಷತೆಯನ್ನು ಸಮಾಜದ ಜಿಲ್ಲಾಧ್ಯಕ್ಷ ಅಶೋಕ ಲಾಗಲೋಟಿ ವಹಿಸಲಿದ್ದು, ತಾಲೂಕಿನ ಸಮಾಜ ಬಾಂಧವರು ಸಭೆಯಲ್ಲಿ ಪಾಲ್ಗೊಳ್ಳುವಂತೆ ಜಿಲ್ಲಾ ಪ್ರಧಾನ ಕಾರ್ಯದರ್ಶಿ ನಿಂಗಣ್ಣ ಗೋಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೂ.21 ಅಂಚೆ ಕಛೇರಿ ವಹಿವಾಟಿಲ್ಲ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.19–ಐಟಿ 2.0 ಅಡಿಯಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸುತ್ತಿರುವ ಹಿನ್ನೆಲೆಯಲ್ಲಿ ಜಿಲ್ಲೆಯ ಜಮಖಂಡಿ ಪ್ರಧಾನ ಅಂಚೆ ಕಛೇರಿ ಮತ್ತು ಅದರ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪ ಅಂಚೆ ಕಚೇರಿಗಳಾದ ಬನಹಟ್ಟಿ ಎಸ್.ಓ, ಬನಹಟ್ಟಿ ಸೋಮವಾರಪೇಟೆ ಎಸ್.ಓ, ಬೆಳಗಲಿ ಎಸ್.ಓ, ಬೀಳಗಿ ಎಸ್.ಓ, ಗಲಗಲಿ ಎಸ್.ಓ, ಹಿಪ್ಪರಗಿ ಎಸ್.ಓ, ಹುನ್ನೂರು ಎಸ್.ಓ ಜಮಖಂಡಿ ಗಿರೀಶ ನಗರ ಎಸ್.ಓ, ಜಮಖಂಡಿ ಹೆಚ್.ಓ, ಕಲಾದಗಿ ಎಸ್.ಓ ಕೊಣ್ಣೂರು ಎಸ್.ಓ, ಲೋಕಾಪುರ ಎಸ್.ಓ, ಮಹಾಲಿಂಗಪುರ ಎಸ್.ಓ, ಮುಧೋಳ ವಿಸ್ತರಣೆ ಎಸ್.ಓ., ಮುಧೋಳ ಎಸ್.ಓ, ರಬಕವಿ ಎಸ್.ಓ, ರಬಕವಿ ಟೌನ್ ಎಸ್.ಓ, ಸಮೀರವಾಡಿ ಎಸ್.ಓ, ಸಾವಳಗಿ ಎಸ್.ಓ ಮತ್ತು ತೇರದಾಳ ಅಂಚೆ ಕಛೇರಿಗಳು ಜೂನ್ 21 ರಂದು ಯಾವುದೇ ವಹಿವಾಟು ನಡೆಸುವುದಿಲ್ಲ ಎಂದು ಬಾಗಲಕೋಟೆ ಅಂಚೆ ವಿಭಾಗದ ಅಂಚೆ ಅಧೀಕ್ಷಕರಾದ ಎಚ್.ಬಿ.ಹಸಬಿ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

# ರೈತರಿಗೆ ಸೂಕ್ತ ಪರಿಹಾರ ನೀಡದ ಕೆಪಿಟಿಸಿಎಲ್ ವಿರುದ್ಧ : ತಹಸಿಲ್ದಾರ ಅವರಿಗೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಬೇವೂರು ಗ್ರಾಮದ 110 ಕೆವಿ ಪವರ್ ಸ್ಟೇಷನ್ ನಿಂದ ಕೊಪ್ಪಳ ತಾಲೂಕಿನ ಚಿಲುಕಮೂಕಿ ಗ್ರಾಮದ 110 ಕೆವಿ ಪವರ್ ಸ್ಟೇಷನಗೆ ವಿದ್ಯುತ್ ಪೂರೈಸಲು ಸ್ಥಾವರ (ಟವರ್) ಹಾಗೂ ವೈರ್ ಎಳೆದು ವಿದ್ಯುತ್ ಪೂರೈಸಿದರೂ ರೈತರಿಗೆ ಸೂಕ್ತ ಪರಿಹಾರ ನೀಡದ ಕೆಪಿಟಿಸಿಎಲ್ ವಿರುದ್ಧ ಇಂದು ಮಾನ್ಯ ಜಿಲ್ಲಾಧಿಕಾರಿಗಳ ಅನುಪಸ್ಥಿತಿಯಲ್ಲಿ ತಾಸಿಲ್ದಾರರಿಗೆ ರವರಿಗೆ ನೆಲಜೇರಿ ಹಾಗೂ ವಟಪರವಿ ಗ್ರಾಮದ ರೈತರೊಂದಿಗೆ ಸುಮಾರು 36ಕ್ಕೂ ಹೆಚ್ಚು ರೈತರ ಪ್ರತ್ಯೇಕ ಮನವಿ ಸಲ್ಲಿಸಿ ಸೂಕ್ತ ಪರಿಹಾರ ನೀಡಲು ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಹಿರಿಯರಾದ ಪಂಪನಗೌಡ ಮಾಲಿಪಾಟೀಲ್, ಮಲ್ಲನಗೌಡ ಕೋನನಗೌಡ, ಶೇಖಣ್ಣ ಚುಕಣಿ, ವಿರುಪಾಕ್ಷಿ ಓಜನಹಳ್ಳಿ, ಮಂಜುನಾಥ ಹೊಸೂರು, ಹೇಮನಗೌಡ ಪಾಟೀಲ್, ಕಾಶಿಂಸಾಬ್ ಕಿಲ್ಲೆದಾರ್, ಕನಕಪ್ಪ ತಳವಾರ್, ರಾಮಣ್ಣ ಉಪ್ಪಾರ್, ಶೇಖಣ್ಣ ವಟಪರವಿ, ಶ್ರೀಮತಿ ರಸಲುಬಿ, ಬಸವರಾಜ ಹೊಸಳ್ಳಿ, ಶೇಖಪ್ಪ ಓಜನಹಳ್ಳಿ, ಭೀಮೇಶ್ ಚಳಗೇರಿ, ಮಂಗಳೇಶ ಚುಕುಣಿ, ಮಾರುತಿ ಬೈರನಾಯಕನಹಳ್ಳಿ ಹಾಗೂ ಇತರರು ಇದ್ದರು.

# ಕೆಎಸ್‌ಆರ್‌ಟಿಸಿ ಬಸ್ಸಿನಲ್ಲಿ ಹೃದಯ ಅಪಘಾತದಿಂದ ಓರ್ವ ಸಾವು

ಮಲ್ಲಮ್ಮ ನುಡಿ ವಾರ್ತೆ

ನಾರಾಯಣಪುರ:ಮುದ್ದೇಬಿಹಾಳ ದಿಂದ ಸಂಡೂರ್ ಹೋಗುತ್ತಿರುವ ಬಸ್ಸಿನಲ್ಲಿ ಪ್ರಯಾಣಿಸುತ್ತಿರುವ ವ್ಯಕ್ತಿ ಓರ್ವ ಮುದ್ದೇಬಿಹಾಳ ದಿಂದ ಹಾಲುಬಾಯಿವರೆಗೂ ಪಯಣ ಮಾಡುತ್ತಿರುವಾಗ ಮಧ್ಯ ಭಾಗವಾದ ನಾರಾಯಣಪುರ ಬಸ್ ನಿಲ್ದಾಣದಲ್ಲಿ ಬಂದ ತಕ್ಷಣವೇ ಹೃದಯಘಾತದಿಂದ ಮೃತಪಟ್ಟಿರುವ ಘಟನೆ ಸಂಭವಿಸಿದೆ. ತಮ್ಮಣ್ಣ ತಂದೆ ಧನಸಿಂಗ್ ಚವ್ಹಾಣ (55) ಲಿಂಗಸಗೂರು ತಾಲೂಕಿನ ಹಾಲುಬಾವಿ ತಾಂಡ ನಿವಾಸಿ ಎಂದು ಗುರುತಿಸಲಾಗಿದೆ. ದಂಪತಿಗಳು ಕೂಡಿ ಮುದ್ದೇಬಿಹಾಳ ದಿಂದ



ಹಾಳಬಾವಿಗೆ ಬರುತ್ತಿರುವಾಗ ಈ ಘಟನೆ ನಡೆದಿದೆ ಎಂದು ಪೊಲೀಸ್ ಮೂಲಗಳಿಂದ ತಿಳಿದು ಬಂದಿದೆ.

'ಗ್ಯಾರಂಟಿ' ಯೋಜನೆ ಪ್ರಗತಿ ಪರಿಶೀಲನಾ ಸಭೆ

# ಫಲಾನುಭವಿಗಳೊಂದಿಗೆ ಸೌಜನ್ಯದಿಂದ ವರ್ತಿಸಿ–ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.19–ರಾಜ್ಯ ಸರಕಾರ ಬಡವರು, ಮಹಿಳೆಯರ ಸಬಲೀಕರಣ ಮತ್ತು ಸ್ವಾವಲಂಬಿ ಜೀವನಕ್ಕೆ ಪೂರಕವಾಗಿ ಪಂಚ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸಿದ್ದು, ಯೋಜನೆಗಳನ್ನು ಫಲಾನುಭವಿಗಳಿಗೆ ತಲುಪಿಸುವಲ್ಲಿ ಅನುಷ್ಠಾನ ಇಲಾಖೆಯ ಅಧಿಕಾರಿಗಳು ಪ್ರಾಮಾಣಿಕವಾಗಿ ಕೆಲಸ ಮಾಡಬೇಕು. ಜೊತೆಗೆ ಸೌಜನ್ಯದಿಂದ ವರ್ತಿಸಬೇಕು ಎಂದು ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಎಸ್.ಆರ್.ಪಾಟೀಲ ಹೇಳಿದರು.

ಜಿಲ್ಲಾ ಪಂಚಾಯತ ಹಳೆಯ ಸಭಾಂಗಣದಲ್ಲಿ ಗುರುವಾರ ಜರುಗಿದ ಬಾಗಲಕೋಟೆ ಜಿಲ್ಲಾಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳ ಬಗ್ಗೆ ಶ್ಲಾಘನೆ ವ್ಯಕ್ತವಾಗಿದೆ. ಮಹಿಳೆಯರು, ಬಡವರು ಈ ಯೋಜನೆಗಳ ಸಹಾಯದಿಂದ ಸ್ವಾವಲಂಬಿ ಮತ್ತು ಸ್ವಾಭಿಮಾನದ ಬದುಕು ಕಟ್ಟಿಕೊಳ್ಳುತ್ತಿದ್ದಾರೆ ಎಂದರು.

ಅರ್ಹ ಫಲಾನುಭವಿಗೆ ಪಂಚ ಗ್ಯಾರಂಟಿ ಯೋಜನೆಗಳನ್ನು ತಲುಪಿಸುವುದು ಅಧಿಕಾರಿಗಳ ಕರ್ತವ್ಯವಾಗಿದೆ. ಕ್ಷೇತ್ರಮಟ್ಟದಲ್ಲಿ ಯೋಜನೆ ತಲುಪಿಸುವ ಅಧಿಕಾರಿ, ಸಿಬ್ಬಂದಿಗಳು ತೋರುವ ವರ್ತನೆ ಮತ್ತು ಸೌಜನ್ಯತೆ ಯೋಜನೆಗಳ ಯಶಸ್ಸು ಹೆಚ್ಚಿಸುತ್ತದೆ ಎಂದ ಪಾಟೀಲ, ಶಕ್ತಿ ಯೋಜನೆಯಿಂದ ಪ್ರಯಾಣಿಕರ ಸಂಖ್ಯೆ ಹೆಚ್ಚಳವಾಗಿದೆ. ಈ ಹಿನ್ನೆಲೆಯಲ್ಲಿ ಜಿಲ್ಲೆಗೆ ಹೆಚ್ಚುವರಿ ಬಸ್‌ಗಳು ಬಂದಿವೆ ಎಂದು ಹೇಳಿದರು.

ಪ್ರಸಕ್ತ ಮೇ ತಿಂಗಳ ಅಂತ್ಯಕ್ಕೆ ಅಂದಾಜು 434473 ಗೃಹ ಜ್ಯೋತಿ ಸ್ಥಾವರಗಳಿದ್ದು ಅದರಲ್ಲಿ 424217 ಸ್ಥಾವರಗಳು ಗೃಹ ಜ್ಯೋತಿ ಯೋಜನೆ ಅಡಿ ನೋಂದಾಯಿಸಲ್ಪಟ್ಟಿರುತ್ತವೆ. ಉಳಿದಂತೆ 10,256 ಸ್ಥಾವರಗಳ ನೋಂದಣಿ ಹಂತ ಪ್ರಗತಿಯಲ್ಲಿರುತ್ತದೆ. ಶಕ್ತಿ ಯೋಜನೆಯಲ್ಲಿ ಏಪ್ರಿಲ್ 1 ರಿಂದ ಜೂನ್ 17 ರವರೆಗೆ ಒಟ್ಟು 5955.24 ಲಕ್ಷ ರೂ. ಸಂಗ್ರಹವಾಗಿದೆ. ಸಾರಿಗೆ ಸಂಸ್ಥೆಯ ಒಟ್ಟಾರೆ ಆದಾಯದಲ್ಲಿ ಶೇ.56 ರಷ್ಟು ಶಕ್ತಿ ಯೋಜನೆಯ ಪಾಲು ಇದೆ. ಅದರಂತೆ ಅನ್ನಭಾಗ್ಯ ಯೋಜನೆಯಡಿ ಹೆಚ್ಚುವರಿಯಾಗಿ ಪ್ರತಿ ಫಲಾನುಭವಿಗೆ 5 ಕೆ.ಜಿಯಂತೆ ಫೆಬ್ರವರಿ 2025 ರಿಂದ ಮೇ 2025 ರವರೆಗೆ 2,89,790 ಕ್ವಿಂಟಲ್ ಅಕ್ಕಿಯನ್ನು ವಿತರಿಸಲಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ಬಾಗಲಕೋಟೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹೊರತಂದ ಪಂಚ ಗ್ಯಾರಂಟಿ ಯೋಜನೆಗಳ ಜಿಲ್ಲಾ ಪ್ರಗತಿನೋಟ ಪುಸ್ತಿಕೆಯನ್ನು ವಿತರಿಸಲಾಯಿತು.

ಜಿಲ್ಲಾಧಿಕಾರಿ ಸಂಗಪ್ಪ ಎಂ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷ ಡಾ.ಸಾಗರ ತೆಕ್ಕೆನ್ನವರ, ಉಪಾಧ್ಯಕ್ಷರು, ತಾಲ್ಲೂಕು ಅಧ್ಯಕ್ಷರು ಹಾಗೂ ಸದಸ್ಯರು ಉಪಸ್ಥಿತರಿದ್ದರು.

# 11ನೇ ಅಂತಾರಾಷ್ಟ್ರೀಯ ಯೋಗ ದಿನ: ವಿದ್ಯಾರ್ಥಿಗಳಿಗೆ ಯೋಗ ಸ್ಪರ್ಧೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 19–11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಹಿನ್ನೆಲೆಯಲ್ಲಿ ಯೋಗದ ಮಹತ್ವವನ್ನು ವಿದ್ಯಾರ್ಥಿಗಳಿಗೆ ತಿಳಿಸಲು ಮತ್ತು ದೈಹಿಕ ಮತ್ತು ಮಾನಸಿಕ ಆರೋಗ್ಯದ ಮಾಹಿತಿ ನೀಡುವ ಹಿನ್ನೆಲೆಯಲ್ಲಿ ಆಯುಷ್ ಇಲಾಖೆ ಬೆಂಗಳೂರು, ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಆಯುಷ್ ಇಲಾಖೆ ರಾಯಚೂರು ಇವರ ಸಂಯುಕ್ತ ಆಶ್ರಯದಲ್ಲಿ ಜೂನ್ 18ರಂದು ಯೋಗ ಸ್ಪರ್ಧೆ ನಡೆಯಿತು.

ಆಯುಷ್ ಇಲಾಖೆಯ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮವನ್ನು ಜಿಲ್ಲಾ ಆಯುಷ್ ಇಲಾಖೆಯ ಅಧಿಕಾರಿಗಳಾದ ಡಾ. ಶಂಕರಗೌಡ ಅವರು ಉದ್ಘಾಟಿಸಿ ಮಾತನಾಡಿ, ವಿದ್ಯಾರ್ಥಿಗಳಿಗೆ ಯೋಗ ಅದರ ಮಹತ್ವ ಅದನ್ನು ದಿನನಿತ್ಯದಲ್ಲಿ ಅಳವಡಿಸಿಕೊಂಡಲ್ಲಿ ಆಗುವ ಲಾಭಗಳು, ಜೊತೆಗೆ ಅಂತರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಹಾಕಿಕೊಂಡಿರುವ ಕಾರ್ಯಕ್ರಮಗಳ ಕುರಿತು ಮಾಹಿತಿ ನೀಡಿದರು. ಈ ವರ್ಷದ ಘೋಷವಾಕ್ಯ ಒಂದು ಭೂಮಿ ಒಂದು ಆರೋಗ್ಯಕ್ಕಾಗಿ ಆಗಿದ್ದು ವಿದ್ಯಾರ್ಥಿಗಳು ಯೋಗ ಅಭ್ಯಾಸವನ್ನು ಕಲಿಯಿರಿ ಆರೋಗ್ಯವನ್ನು ವೃದ್ಧಿಸಿಕೊಳ್ಳಿರಿ ಎಂದು ತಿಳಿಸಿದರು.

ಮುಖ್ಯ ಅತಿಥಿ, ಭಾರತೀಯ ರೆಡ್‌ಕ್ರಾಸ್ ಸಂಸ್ಥೆಯ ಜಿಲ್ಲಾ ಸಂಚಾಲಕರಾದ ಡಾ.ದಂಡಪ್ಪ ಬಿರಾದಾರ್ ಮಾತನಾಡಿ, ವಿಶ್ವದಲ್ಲಿ ಸಾರ್ವತ್ರಿಕವಾಗಿ ಅಂತಾರಾಷ್ಟ್ರೀಯ ಯೋಗ ದಿನವನ್ನು ಜೂನ್ 21 ರಂದು ಆಚರಣೆ ಮಾಡಲಾಗುತ್ತದೆ. ಅನಾದಿ ಕಾಲದಿಂದಲೂ ಯೋಗ ಸಾಧನೆಗೆ ಅತಿ ಮಹತ್ವವಿದೆ. ದೀರ್ಘ ಕಾಲದವರೆಗೆ ಆರೋಗ್ಯವಂತರಾಗಿ ಬಾಳಲು ಯೋಗ ಸಹಕಾರಿಯಾಗಿದೆ. ಇದೀಗ ಜಗತ್ತಿನ ನೂರಾರು ರಾಷ್ಟ್ರಗಳಲ್ಲಿ ಈ ದಿನಾಚರಣೆಯನ್ನು ಆಚರಣೆ ಮಾಡುತ್ತಿರುವುದು ಹೆಮ್ಮೆಯ ವಿಷಯ. ವಿದ್ಯಾರ್ಥಿಗಳು ಇಂದು ಆರೋಗ್ಯವಿತವಾದ ಅಭ್ಯಾಸವನ್ನು ರೂಡಿ ಮಾಡಿಕೊಂಡು ತಮ್ಮ ಆರೋಗ್ಯವನ್ನು ಸದೃಢಪಡಿಸಿಕೊಳ್ಳಿರಿ ಎಂದು ಹೇಳಿದರು. ಯೋಗ ತರಬೇತಿದಾರ ಡಾ.ತಿಮಪ್ಪ ವಡ್ಡೆಪಳ್ಳಿ ಅವರು 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಹಿನ್ನೆಲೆಯಲ್ಲಿ ಹಾಕಿಕೊಂಡ ಕಾರ್ಯಕ್ರಮಗಳ ಮಾಹಿತಿ ಮತ್ತು ಈ ಸ್ಪರ್ಧೆಗೆ ಇರುವಂತ ನಿಯಮಗಳ ಕುರಿತು ವಿದ್ಯಾರ್ಥಿಗಳಿಗೆ ತಿಳಿಸಿದರು. ವೇದಿಕೆ ಮೇಲೆ ಡಾ.ಪೂಜಾ, ಡಾ.ನವೀನ್, ಡಾ.ಅರ್ಪಿತ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು. ಆಯುಷ್ ಇಲಾಖೆಯ ಶ್ರೀಮತಿ ಸಂಗಮ್ಮ ಪ್ರಾರ್ಥಿಸಿದರು. ಹನುಮಂತ ಸ್ವಾಗತಿಸಿ ನಿರೂಪಿಸಿದರು.

# ರಾಹುಲ್ ಗಾಂಧಿ ಜನ್ಮದಿನ: ಮಕ್ಕಳಿಗೆ ನೋಟ್ ಬುಕ್ ವಿತರಣೆ

ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಅಖಿಲ ಭಾರತ ಕಾಂಗ್ರೆಸ್ ಸಮಿತಿ ಮಾಜಿ ಅಧ್ಯಕ್ಷ, ಕಾಂಗ್ರೆಸ್ ಪಕ್ಷದ ರಾಷ್ಟ್ರೀಯ ನಾಯಕರಾದ ರಾಹುಲ್ ಗಾಂಧಿ ಅವರ 55ನೇ ಜನ್ಮದಿನದ ಪ್ರಯುಕ್ತ ಯುವ ಕಾಂಗ್ರೆಸ್ ಸಮಿತಿ ತಾಳಿಕೋಟಿ ವತಿಯಿಂದ ಪಟ್ಟಣದ ಶ್ರೀ ಸರಸ್ವತಿ ವಿದ್ಯಾ ಮಂದಿರದ ವಿದ್ಯಾರ್ಥಿಗಳಿಗೆ ನೋಟ್ ಪುಸ್ತಕಗಳನ್ನು ವಿತರಿಸಲಾಯಿತು. ಈ ಸಂದರ್ಭದಲ್ಲಿ ತಾಳಿಕೋಟಿ ಬ್ಲಾಕ್ & ಮುದ್ದೇಬಿಹಾಳ ಗ್ರಾಮೀಣ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಆಸಿಫ್ ಕೆಂಭಾವಿ ಮಾತನಾಡಿ ಇಂದು ಇಡೀ ದೇಶದಲ್ಲಿ ನಮ್ಮ ಪಕ್ಷದ ರಾಷ್ಟ್ರೀಯ ನಾಯಕರಾದ ಶ್ರೀ ರಾಹುಲ್ ಗಾಂಧಿಯವರ 55ನೇ ಹುಟ್ಟು ಹಬ್ಬವನ್ನು ಅವರ ಅಭಿಮಾನಿಗಳಾದ ನಾವು ವಿಶಿಷ್ಟ ರೀತಿಯಲ್ಲಿ ಹಲವಾರು ಸಮಾಜ ಸೇವಾ ಕಾರ್ಯಗಳ ಮೂಲಕ ಆಚರಿಸುತ್ತಿದ್ದೇವೆ. ಇಂದು ಈ ಶಾಲೆಯ ಮಕ್ಕಳಿಗೆ ವಿದ್ಯಾಭ್ಯಾಸಕ್ಕಾಗಿ ಅನುಕೂಲವಾಗಲು ನೋಟ್ ಬುಕ್‌ಗಳನ್ನು ವಿತರಿಸಿದ್ದೇವೆ ಮಕ್ಕಳು ಆಸಕ್ತಿಯಿಂದ ವಿದ್ಯಾಭ್ಯಾಸ ಮಾಡಿ ದೇಶದ ಉತ್ತಮ ಪ್ರಜೆಗಳಾಗಿ ಬೆಳೆಯಲಿ ಎಂಬುದು ನಮ್ಮ ಕಾಳಜಿಯಾಗಿದೆ. ನಮ್ಮ ರಾಷ್ಟ್ರೀಯ ನಾಯಕರಾದ ರಾಹುಲ್ ಗಾಂಧಿ ಅವರಿಗೆ ದೇವರು ಆಯುರಾರೋಗ್ಯ ಆಯುಷ್ಯ ಹಾಗೂ ಅಧಿಕಾರ ಕರುಣಿಸಲೆಂದು ಪ್ರಾರ್ಥಿಸುತ್ತೇನೆ ಎಂದರು. ಕಾರ್ಯಕ್ರಮದಲ್ಲಿ ಮುಖ್ಯ ಶಿಕ್ಷಕಿ ಪಲ್ಲವಿ ಕಡಕೋಳ, ಯುವ ಕಾಂಗ್ರೆಸ್ ಅಧ್ಯಕ್ಷ ಖಾಜಾ ಪಟೇಲ ಬಿರಾದಾರ, ಅಂಬೇಡ್ಕರ್ ಸೇನೆ ಅಧ್ಯಕ್ಷ ಗೋಪಾಲ ಕಟ್ಟಿಮನಿ, ಅಯಾಜ್ ಸೋಲಾಪೂರ, ಆಬಿದ್ ಲಾಹೋರಿ, ಮಧು ಚಲವಾದಿ, ಶಾಹಿದ್ ಜಮಖಂಡಿ, ಶಾಹಿದ್ ಶಿವಣಗಿ, ಶಿಕ್ಷಕ ವರ್ಗ ಹಾಗೂ ವಿದ್ಯಾರ್ಥಿಗಳು ಇದ್ದರು.

# ಹೊರಗುತ್ತಿಗೆ ಬೇಡ,ಕಾಯಂ ನೌಕರಿ ಕೊಡಿ:ದರೋಡೆಕೋರರ ಗುಂಡೇಟಿನಿಂದ ಗಾಯಗೊಂಡ ಶಿವಕುಮಾರ ಅಳಲು

ಮಲ್ಲಮ್ಮ ನುಡಿ ವಾರ್ತೆ

ಬೀದರ.ಜೂ.19:'ಹೊರಗುತ್ತಿಗೆ ನೌಕರಿ ಬೇಡ, ಕೊಡುವುದಿದ್ದರೆ ನನಗೆ ಕಾಯಂ ನೌಕರಿ ಕೊಡಿ'

ಜನವರಿ 16ರಂದು ನಗರದ ಎಸ್‌ಬಿಐನಿಂದ ಎಟಿಎಂಗಳಿಗೆ ಜಮೆ ಮಾಡಲು ಹಣ ಕೊಂಡೊಯ್ಯುತ್ತಿದ್ದಾಗ ದರೋಡೆಕೋರರು ನಡೆಸಿದ ಗುಂಡಿನ ದಾಳಿಯಲ್ಲಿ ಗಂಭೀರವಾಗಿ ಗಾಯಗೊಂಡು ಚೇತರಿಸಿಕೊಳ್ಳುತ್ತಿರುವ ನಗರದ ಲಾಡಗೇರಿ ನಿವಾಸಿ ಶಿವಕುಮಾರ ಅವರ ಮಾತುಗಳಿವು.

'ಘಟನೆ ನಡೆದು ಐದು ತಿಂಗಳಾಗುತ್ತ ಬಂದಿದೆ. ಕೆಲ ದಾನಿಗಳು ಅವರ ಕೈಲಾದಷ್ಟು ನೆರವು ನೀಡಿದ್ದಾರೆ. ನಾನು ಕೆಲಸ ನಿರ್ವಹಿಸುತ್ತಿದ್ದ ಸಿಎಮ್‌ಎಸ್ ಕಂಪನಿಯವರು ಆಸ್ಪತ್ರೆಯ ಸಂಪೂರ್ಣ ವೆಚ್ಚ ಭರಿಸಿದ್ದಾರೆ. ಆದರೆ, ಇದುವರೆಗೆ ಸರ್ಕಾರದಿಂದ ನಯಾಪೈಸೆ ಪರಿಹಾರ ಸಿಕ್ಕಿಲ್ಲ. ಈ ಹಿಂದೆ ಕಾಯಂ ನೌಕರಿ ಕೊಡುತ್ತೇವೆ ಎಂದು ಆಶ್ವಾಸನೆ ಕೊಟ್ಟಿದ್ದರು. ಆದರೆ, ಈಗ ಹೊರಗುತ್ತಿಗೆ ನೌಕರಿಯ ಆಫರ್ ಕೊಟ್ಟಿದ್ದಾರೆ. ಇದರಿಂದ ಮನಸ್ಸಿಗೆ ಬೇಸರವಾಗಿದೆ' ಎಂದು ನೋವು ತೋಡಿಕೊಂಡರು. 'ಎದೆ ಭಾಗದಲ್ಲಿ ಗುಂಡು ಹೊಕ್ಕಿದ್ದರಿಂದ ನನಗೆ ಬೈಕ್ ಓಡಿಸಬಾರದು ಎಂದು ವೈದ್ಯರು ಸಲಹೆ ಮಾಡಿದ್ದಾರೆ. ಒತ್ತಡ ಬೀಳುವ ಕೆಲಸ ಮಾಡಕೂಡದು ಎಂದು ಹೇಳಿದ್ದಾರೆ. ಇನ್ನೂ ಚಿಕಿತ್ಸೆ ಮುಂದುವರಿದಿದೆ. ಪ್ರತಿ ತಿಂಗಳು ?4ರಿಂದ ?5 ಸಾವಿರ ಔಷಧಕ್ಕೆ ಖರ್ಚಾಗುತ್ತಿದೆ. ನನ್ನ ತಂದೆ ಪ್ಯಾರಾಲಿಸಿಸ್‌ನಿಂದ ಬಳಲುತ್ತಿದ್ದಾರೆ. ತಾಯಿ ಸಣ್ಣಪುಟ್ಟ ಕೆಲಸ ಮಾಡುತ್ತಾರೆ. ನಾನು ಕೆಲಸಕ್ಕೆ ಹೋಗುತ್ತಿಲ್ಲ. ಇದರಿಂದ ಸಾಲ ಬೆಳೆಯುತ್ತಿದೆ. ಘಟನೆಯಲ್ಲಿ ಮೃತಪಟ್ಟ ಬೇಮಳಖೇಡಾದ ಗಿರಿ ವೆಂಕಟೇಶ ಅವರ ಕುಟುಂಬಕ್ಕೆ ಸರ್ಕಾರವು ?24 ಲಕ್ಷ ಪರಿಹಾರ ನೀಡಿದೆ. ನಾನು ಬದುಕಿದ್ದರೂ ಸತ್ತಂತಹ ಪರಿಸ್ಥಿತಿ ಇದೆ. ಆದರೆ, ನನಗೆ ನೆರವು ನೀಡುತ್ತಿಲ್ಲ. ಇದರಿಂದ ಬಹಳ ಬೇಸರವಾಗಿದೆ' ಎಂದು ಹೇಳಿದರು. 'ನನಗೆ ಹೊನ್ನಿಕೇರಿಯಲ್ಲಿ ಕೆಲಸಕ್ಕೆ ಸೇರುವಂತೆ ಜಿಲ್ಲಾಡಳಿತ ಆಫರ್ ಕೊಟ್ಟಿದೆ. ನನಗೆ ನಿತ್ಯ ಅಲ್ಲಿಗೆ ಹೋಗಿ ಬರಲು ಆಗುವುದಿಲ್ಲ.ಮೇಲಿಂದ ಅನೇಕ ಷರತ್ತುಗಳನ್ನು ವಿಧಿಸಿದ್ದಾರೆ. ಈ ನೌಕರಿಗೆ ಸೇರಿದರೆ ಭವಿಷ್ಯದಲ್ಲಿ ಯಾವುದೇ ಬೇಡಿಕೆಗಳನ್ನು ಇಡಬಾರದು ಎಂತೆಲ್ಲ ಷರತ್ತು ಹಾಕಿದ್ದಾರೆ.ಇದರಬಗ್ಗೆ ಡಿಸಿಯವರೊಂದಿಗೆ ಚರ್ಚಿಸಿದ್ದು, ನನ್ನ ಹಂತದಲ್ಲಿ ಏನು ಮಾಡಬೇಕಿತ್ತೋ ಅದನ್ನು ಮಾಡಿರುವೆ ಎಂದಿದ್ದಾರೆ. ಒಂದು ವೇಳೆ ಹೊನ್ನಿಕೇರಿಯಲ್ಲಿ



ನೌಕರಿಗೆ ಹೋಗಲು ಆಗದಿದ್ದರೆ ಬೀದರ್ ನಗರದಲ್ಲೇ ವ್ಯವಸ್ಥೆ ಮಾಡಿಕೊಡುವುದಾಗಿಯೂ ಹೇಳಿದ್ದಾರೆ. ಆದರೆ, ಕಾಯಂ ನೌಕರಿಯ ಬಗ್ಗೆ ಚಕಾರ ಎತ್ತುತ್ತಿಲ್ಲ' ಎಂದರು.

ಜನವರಿ 16ರಂದು ನಗರದ ಎಸ್‌ಬಿಐಬ್ಯಾಂಕಿನಿಂದ ಟ್ರಂಕ್‌ನಲ್ಲಿ ಹಣ ಎಟಿಎಂಗಳಿಗೆ ಜಮೆ ಮಾಡಲು ಕೊಂಡೊಯ್ಯುತ್ತಿದ್ದಾಗ ಇಬ್ಬರು ದ–ರೋಡೆಕೋರರು ಗುಂಡಿನ ದಾಳಿ ನಡೆಸಿ, ಟ್ರಂಕ್ ಕಸಿದುಕೊಂಡು ಪರಾರಿಯಾಗಿದ್ದರು. ಘಟನೆಯಲ್ಲಿ ಸಿಎಮ್‌ಎಸ್ ಕಂಪನಿಯ ಗಿರಿ ವೆಂಕಟೇಶ ಗುಂಡೇಟಿಗೆ ಸ್ಥಳದಲ್ಲೇ ಸಾವನ್ನಪ್ಪಿದ್ದರು. ಶಿವಕುಮಾರ ಗಂಭೀರವಾಗಿ ಗಾಯಗೊಂಡಿದ್ದರು.

ಜನವರಿ 16ರಂದು ನಡೆದ ದರೋಡೆ ಗುಂಡೇಟಿನಿಂದ ಗಿರಿ ವೆಂಕಟೇಶ ಸಾವು ಗುಂಡೇಟಿಗೆ ಗಾಯಗೊಂಡ ಶಿವಕುಮಾರ

ಶಿಲ್ಪಾ ಶರ್ಮಾ ಜಿಲ್ಲಾಧಿಕಾರಿ ಕಾಯಂ ನೌಕರಿ ಕೊಡಲು ಅವಕಾಶ ಇಲ್ಲ. ಆದಕಾರಣ ಅವರಿಗೆ ಹೊರಗುತ್ತಿಗೆ ಆಧಾರದ ಮೇಲೆ ನೇಮಕಾತಿಗೆ ಕ್ರಮ ಕೈಗೊಳ್ಳಲಾಗಿದ್ದು ಈಗಾಗಲೇ ಹೊನ್ನಿಕೇರಿಯಲ್ಲಿ ಸ್ಥಳ ಸೂಚಿಸಲಾಗಿದೆ. ಅಲ್ಲಿಗೆ ಹೋಗಿ ಬರಲು ಸಮಸ್ಯೆಯಾಗುತ್ತದೆ ಎಂದು ತಿಳಿಸಿದ್ದು ಬೇರೆ ಸ್ಥಳದಲ್ಲಿ ಕೆಲಸ ಕೊಡಲಾಗುವುದು. ಶಿವಕುಮಾರ ಲಾಡಗೇರಿ ನಿವಾಸಿ ಸರ್ಕಾರ ಕೊಟ್ಟ ಮಾತಿನಂತೆ ನಡೆದುಕೊಳ್ಳಬೇಕು. ಸರ್ಕಾರದಿಂದ ಇದುವರೆಗೆ ನಯಾಪೈಸೆ ಪರಿಹಾರ ಸಿಕ್ಕಿಲ್ಲ. ಕಾಯಂ ನೌಕರಿಯ ನಿರೀಕ್ಷೆಯಲ್ಲಿದ್ದೆವು. ಆದರೆ ಹೊರಗುತ್ತಿಗೆ ನೌಕರಿಯ ಆಫರ್ ಕೊಟ್ಟಿದ್ದಾರೆ. ಇದು ನಮಗೆ ಇಷ್ಟವಿಲ್ಲ. ವಿಶೇಷ ಪ್ರಕರಣವೆಂದು ಪರಿಗಣಿಸಿ ಸರ್ಕಾರ ನೌಕರಿ ಕೊಡಬೇಕು.

ಕಾರ್ಯಾದೇಶದಲ್ಲಿ ಏನಿದೆ?

ಬೀದರ್ ತಾಲ್ಲೂಕಿನ ಶ್ರೀ ಕ್ಷೇತ್ರ ಹೊನ್ನಿಕೇರಿ ಸಿದ್ದೇಶ್ವರ ದೇವಸ್ಥಾನದಲ್ಲಿ ಕಂಪ್ಯೂಟರ್ ಆಪರೇಟರ್ ಆಗಿ ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ನಿರ್ವಹಣೆಗೆ ಲಾಡಗೇರಿಯ ಶಿವಕುಮಾರ ಕಾಶಿನಾಥ ಅವರನ್ನು ನೇಮಕ ಮಾಡಲಾಗಿದೆ ಎಂದು ಬೀದರ್ ಜಿಲ್ಲಾ ಕಾರ್ಮಿಕ ಸೇವೆಗಳ ವಿವಿಧೋದ್ದೇಶ ಸಹಕಾರ ಸಂಘದ ಕಾರ್ಯದರ್ಶಿ ತಿಳಿಸಿದ್ದಾರೆ. ಕನಿಷ್ಠ ವೇತನ ?18016 ನಿಗದಿಪಡಿಸಲಾಗಿದೆ. ಮಾಸಿಕ ನಿವ್ವಳ ?16081 ಪಾವತಿ ಮಾಡಲಾಗುವುದು. ಈ ನೇಮಕಾತಿ ನಂತರ ಸರ್ಕಾರದಿಂದ ಯಾವುದೇ ಸವಲತ್ತು ಪಡೆಯುವ ಹಕ್ಕು ಇರುವುದಿಲ್ಲ. ಹುದ್ದೆ ಕಾಯಮಾತಿ ಹಕ್ಕು ಹೊಂದಿರುವುದಿಲ್ಲ ಸೇರಿದಂತೆ ಒಟ್ಟು ಒಂಬತ್ತು ಷರತ್ತುಗಳನ್ನು ವಿಧಿಸಲಾಗಿದೆ.

# ತಂಬಾಕು ಮುಕ್ತ ಗ್ರಾಮಗಳನ್ನಾಗಿ ಘೋಷಿಸಲು ಪ್ರತಿಯೊಬ್ಬ ಅಧಿಕಾರಿಗಳು ಶ್ರಮಿಸಬೇಕು:ರಾಯಪ್ಪ ಹುಣಸಗಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜೂ.19: ಜಿಲ್ಲೆಯಲ್ಲಿ "ತಂಬಾಕು ಮುಕ್ತ ಗ್ರಾಮ"ಗಳನ್ನಾಗಿ ಘೋಷಿಸಲು ಪ್ರತಿಯೊಬ್ಬ ಅಧಿಕಾರಿಗಳು ಅವಿರತವಾಗಿ ಶ್ರಮವಹಿಸಿ ಕಾರ್ಯನಿರ್ವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಹೇಳಿದರು.

ಗುರುವಾರದಂದು ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿಯ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದರು. ತಂಬಾಕು ಮುಕ್ತಗ್ರಾಮಗಳನ್ನಾಗಿ ಘೋಷಿಸಲು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಆರೋಗ್ಯ ಅಧಿಕಾರಿಗಳು, ಪೋಲಿಸ್ ಇಲಾಖೆ ಹಾಗೂ ಮಹಿಳಾ ಮತು ಮಕ್ಕಳ ಇಲಾಖೆಯ ಅಧಿಕಾರಿಗಳು ಮೌಲ್ಯಮಾಪನವನ್ನು ಮಾಡಿ ವರದಿಯನ್ನು ತಾಲೂಕು ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸಲ್ಲಿಸಬೇಕು ಎಂದು ಅವರು ಹೇಳಿದರು.

ಮೌಲ್ಯಮಾಪನ ವರದಿಯ ಪ್ರತಿಶತ ಶೇ.80 ರಷ್ಟು ಫಲಿತಾಂಶವನ್ನು ಪಡೆದಲ್ಲಿ ಆಯಾ ತಾಲೂಕಿನ ತಾಲೂಕು ಕಾರ್ಯ ನಿರ್ವಾಹಕ ಅಧಿಕಾರಿಗಳು ಸದರಿ ಗ್ರಾಮವನ್ನು ತಂಬಾಕು ಮುಕ್ತ ಗ್ರಾಮ"ಎಂದು ಘೋಷಣಾ ಪತ್ರವನ್ನು ಗ್ರಾಮ ಪಂಚಾಯತಗಳಿಗೆ ನೀಡಬೇಕು ಮತ್ತು ಜನರಿಗೆ ಅರಿವನ್ನು ಮೂಡಿಸಲು ತಂಬಾಕು ಮುಕ್ತ ಗ್ರಾಮಕ್ಕೆ ಸ್ವಾಗತ ನಾಮಫಲಕಗಳನ್ನು ಹಾಕಬೇಕು ಎಂದರು.

ಮುಜರಾಯಿ ಇಲಾಖೆಯಿಂದ ಜಿಲ್ಲೆಯ ಎಲ್ಲಾ ದೇವಸ್ಥಾನಗಳಲ್ಲಿ ತಂಬಾಕು ಮುಕ್ತ ದೇವಾಲಯ ಎಂಬ ನಾಮಫಲಕವನ್ನು ಅಳವಡಿಸಬೇಕು ಮತ್ತು ಜಿಲ್ಲೆಯಲ್ಲಿನ



ಎಲ್ಲಾ ಸರ್ಕಾರಿ ಮತ್ತು ಖಾಸಗಿ ಶಾಲಾಕಾಲೇಜುಗಳಲ್ಲಿ ನಾಮಫಲಕಗಳನ್ನು ಅಳವಡಿಸಿದ ಮಾಹಿತಿಯನ್ನು ಅಧಿಕಾರಿಗಳು ವರದಿಯನ್ನು ಸಭೆಗೆ ನೀಡಬೇಕೆಂದು ಸೂಚಿಸಿದರು.

ಕಾನೂನು ಸುವ್ಯವಸ್ಥೆ ಅಧಿಕಾರಿಗಳು, ಆರೋಗ್ಯ ಇಲಾಖೆಯ ಅಧಿಕಾರಿಗಳನ್ನು ಶಾಲಾ ಕಾಲೇಜುಗಳಿಗೆ ಆಹ್ವಾನಿಸಿ ತಂಬಾಕು ನಿಯಂತ್ರಣದ ಕುರಿತು ವಿದ್ಯಾರ್ಥಿಗಳಿಗೆ ಉಪನ್ಯಾಸವನ್ನು ನೀಡುವದರ ಮುಖಾಂತರ ಹಾನಿಕಾರಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಕುರಿತು ತಿಳುವಳಿಕೆಯನ್ನು ನೀಡಿದರೆ. ಕ್ಯಾನ್ಸರ್ ಪ್ರಕರಣಗಳ ಕಡಿಮೆ ಸಂಖ್ಯೆಯನ್ನು ಮಾಡಲು ಸಾಧ್ಯವಿದೆ ಎಂದು ತಿಳಿಸಿದರು.

2003ರ ಕೋಟ್ಪಾ ಕಾಯ್ದೆಯಡಿಯಲ್ಲಿ ಹಲವಾರು ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಂಡಿದ್ದು 9 ಇಲಾಖೆಯ ಅಧಿಕಾರಗಳು ಮತ್ತು ಸಿಬ್ಬಂಧಿಗಳಿಗೆ ತರಬೇತಿ ಕಾರ್ಯಕ್ರಮ 112 ಶಾಲಾ ಕಾಲೇಜುಗಳಲ್ಲಿ ಜಾಗೃತಿ ಕಾರ್ಯಕ್ರಮ ಹಾಗೂ ಶಾಲಾ ಕಾಲೇಜುಗಳಲ್ಲಿ ಸ್ಲೋಗನ್ ಕಾರ್ಯಕ್ರಮ ಸಿದ್ದಾರ್ಥ ಕಾನೂನು ಮಹಾವಿದ್ಯಾಲಯದಲ್ಲಿ ವೇದಿಕೆಯ ಕಾರ್ಯಕ್ರಮದ ಮೂಲಕ ತಂಬಾಕು ಸೇವನೆಯಿಂದ ಆಗುವ ದುಷ್ಪರಿಣಾಮಗಳ ಕುರಿತು ಜಾಗೃತಿಯನ್ನು ಮೂಡಿಸಲಾಯಿತು. ಎಂದು ಸಭೆಗೆ ಪಿ.ಪಿ.ಟಿ.ಯ ಮೂಲಕ ಜಿಲ್ಲಾ ತಂಬಾಕು ನಿಯಂತ್ರಣ ಸಲಹೆಗಾರರಾದ ಸುಜಾತಾ ಪಾಟೀಲ್ ಅಂಕಿ ಅಂಶಗಳ ಕುರಿತು ನಿಖರವಾದ ಮಾಹಿತಿಯನ್ನು ನೀಡಿದರು.

ಆರೋಗ್ಯ ಮತ್ತು ಕುಟುಂಬ ಇಲಾಖೆಯ ಅಧಿಕಾರಿ ಶರಣಬಸಪ್ಪ ಕ್ಯಾತನಾಳ ಮಾತನಾಡಿ, ಪ್ರತಿಯೊಬ್ಬ ಅಧಿಕಾರಿಗಳು ಒಂದು ಬಾರಿ ಕಿದ್ವಾಯಿ ಕಾನ್ಸರ್ ಆಸ್ಪತ್ರೆಗೆ ಭೇಟಿಯನ್ನು ನೀಡಿ ಅಲ್ಲಿನ ಕ್ಯಾನ್ಸರ್ ರೋಗಿಗಳ ಪರಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಜಿಲ್ಲೆಯಲ್ಲಿ ಕ್ಯಾನ್ಸರ್ ರೋಗವನ್ನು ತಡುಗಟ್ಟಲು ಪ್ರಾಮಾಣಿಕ ಪ್ರಯತ್ನ ಮಾಡಬೇಕೆಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ವಿವೇಕಾನಂದ ರೆಡ್ಡಿ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಲಕ್ಷ್ಮಣ ಶೃಂಗೇರಿ,

ಗ್ರಾಮೀಣ ಪೋಲಿಸ್ ಸ್ಟೇಶನ್ ಡಿ.ವೈಎಸ್.ಪಿ ಲೋಕೇಶ್ವರಪ್ಪ ಎನ್, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಸುರೇಶ ಕೆ. ಅಕ್ಕಣ್ಣ, ತಾಲೂಕ ಕಾರ್ಯನಿರ್ವಾಹಣ ಅಧಿಕಾರಿಗಳು ಜಿಲ್ಲಾ ಬಾಯಿ ಆರೋಗ್ಯ ಕಾರ್ಯಕ್ರಮ ಅಧಿಕಾರಿ ಸಂಧ್ಯಾ ಕಾನಿಕರ್, ಎಲ್ಲ ತಹಶೀಲ್ದಾರರು, ಜಿಲ್ಲಾಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಗಾಂಜಾ ಮಾರಾಟ: 6 ಜನರ ಬಂಧನ:5.55 ಲಕ್ಷ ರೂ.ಮೌಲ್ಯದ 6 ಕೆ.ಜಿ.ಗಾಂಜಾ ವಶ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.19:ನಗರದಲ್ಲಿ ನಡೆಯುವ ಅಪರಾಧ ಹಾಗೂ ಅಕ್ರಮ ಚಟುವಟಿಕೆಗಳನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಪೊಲೀಸ್ ಆಯುಕ್ತರಾದ ಡಾ.ಎಸ್.ಡಿ.ಶರಣಪ್ಪಅವರನಿರ್ದೇಶನದಂತೆ ಡಿಸಿಪಿಗಳಾದ ಕನಿಕಾ ಸಿಕ್ರಿವಾಲ್, ಪ್ರವೀಣ್ ಹೆಚ್.ನಾಯಕ್ ಅವರ ಮಾರ್ಗದರ್ಶನದಲ್ಲಿ ರಚಿಸಲಾದ ಪೊಲೀಸ್ ಅಧಿಕಾರಿಗಳು ಮತ್ತು ಪೊಲೀಸ್ ಸಿಬ್ಬಂದಿಗಳ ತಂಡ ಪೊಲೀಸ್ ಆಯುಕ್ತಾಲಯ ವ್ಯಾಪ್ತಿಯ ಅಶೋಕ ನಗರ , ರೋಜಾ , ವಿಶ್ವವಿದ್ಯಾಲಯ ಹಾಗೂ ಚೌಕ ಪೊಲೀಸ್ ಠಾಣೆ ವ್ಯಾಪ್ತಿಯ ವಿವಿಧ ಕಡೆಗಳಲ್ಲಿ ದಾಳಿ ಮಾಡಿ 5,55,000 ಮೌಲ್ಯದ 6 ಕೆಜಿ 34 ಗ್ರಾಂ ನಿಷೇಧಿತ ಗಾಂಜಾ ಹಾಗೂ 2,300 ನಗದು ಹಣ ವಶಪಡಿಸಿಕೊಂಡು 6 ಜನ ಆರೋಪಿಗಳನ್ನು ಬಂಧಿಸಿದೆ.

ಡಿಸಿಪಿಗಳಾದ ಕನಿಕಾ ಸಿಕ್ರಿವಾಲ್, ಪ್ರವೀಣ್ ಹೆಚ್.ನಾಯಕ್,ದಕ್ಷಿಣ ಉಪ ವಿಭಾಗದ ಸಹಾಯಕ ಪೊಲೀಸ್ ಆಯುಕ್ತ ಶರಣಬಸಪ್ಪ ಎಸ್.ಸುಬೇದಾರ ಅವರ ಮಾರ್ಗದರ್ಶನದಲ್ಲಿ ಅಶೋಕನಗರ ಪೊಲೀಸ್ ಠಾಣೆ ಪಿಐ ಅರುಣಕುಮಾರ, ಸಿಬ್ಬಂದಿಗಳಾದ ಶಿವಪ್ರಕಾಶ, ರಾಮು ಪವಾರ, ಶಿವಲಿಂಗ, ಚಂದ್ರಶೇಖರ ಅವರನ್ನು ಒಳಗೊಂಡ ತಂಡ ದಾಳಿ ನಡೆಸಿ ನಗರದ ಬಬಲಾದ ರಸ್ತೆಯ ಮಾದರಸನಹಳ್ಳಿಯ ಲೇಔಟ್ ಹತ್ತಿರ ನಿಷೇಧಿತ ಗಾಂಜಾ ಮಾರಾಟ ಮಾಡುತ್ತಿದ್ದ ಹೀರಾಪುರದ ಜೈಭೀಮ ತಂದೆ ಮಲ್ಲಿಕಾರ್ಜುನ ಬಂಡನಾಳಕರ (35) ಎಂಬಾತನನ್ನು ಬಂಧಿಸಿ 1.40 ಲಕ್ಷ ರೂ.ಮೌಲ್ಯದ 1.495 ಕೆಜಿ ನಿಷೇಧಿತ ಗಾಂಜಾ ವಶಪಡಿಸಿಕೊಂಡು ಆರೋಪಿ ವಿರುದ್ಧ ಪ್ರಕರಣ ದಾಖಲಿಸಿಕೊಂಡು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ.

ಮತ್ತೊಂದು ಪ್ರಕರಣದಲ್ಲಿ ಕಲಬುರಗಿ ಉತ್ತರ ಉಪ ವಿಭಾಗದ ಸಹಾಯಕ ಪೊಲೀಸ್ ಆಯುಕ್ತ ಚಂದ್ರಶೇಖರ ಅವರ ಮಾರ್ಗದರ್ಶನದಲ್ಲಿ ರೋಜಾ ಪೊಲೀಸ್ ಠಾಣೆ ಪಿಐ ಅನಿಸ್ ಮುಜಾವರ್, ಸಿಬ್ಬಂದಿಗಳಾದ ಹಮಿದೊದ್ದೀನ್, ಭೀಮಾಶಂಕರ, ಹುಲಗಪ್ಪ, ಶಾರುಖಾನ್, ಗುಂಡಪ್ಪ ಅವರನ್ನು ಒಳಗೊಂಡ ತಂಡ ದಾಳಿ ನಡೆಸಿ ಯಾದುಲ್ಲಾ ಕಾಲೋನಿಯ ದರ್ಗಾ ಹತ್ತಿರ ಗಾಂಜಾ ಮಾರಾಟ ಮಾಡುತ್ತಿದ್ದ ಮಹ್ಮದ್ ಇರ್ಷಾದ್ ತಂದೆ ಮಹ್ಮದ್ ಅಸ್ಲಾಂ (24) ಎಂಬಾತನನ್ನು ಬಂಧಿಸಿ 1.30 ಲಕ್ಷ ರೂ.ಮೌಲ್ಯದ 1.392 ಕೆ.ಜಿ.ಗಾಂಜಾ ಜಪ್ತಿ ಮಾಡಿ ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ.

ಸಬ್–ಅರ್ಬನ್ ಉಪ ವಿಭಾಗದ ಸಹಾಯಕ ಪೊಲೀಸ್ ಆಯುಕ್ತ ಡಿ.ಜಿ.ರಾಜಣ್ಣ ಅವರ ಮಾರ್ಗದರ್ಶನದಲ್ಲಿ ವಿಶ್ವವಿದ್ಯಾಲಯ ಪೊಲೀಸ್ ಠಾಣೆಯ ಪಿಐ ಸುಶೀಲಕುಮಾರ, ಸಿಬ್ಬಂದಿಗಳಾದ ಯಶವಂತ, ಸಂಜಯಕುಮಾರ, ಸುಲ್ತಾನ್, ಪ್ರಕಾಶ, ಮಹೇಶ ಅವರನ್ನು ಒಳಗೊಂಡ ತಂಡ ದಾಳಿ ಮಾಡಿ ನಗರದ ಆಜಾದಪುರ ರಸ್ತೆಯ ಟಿಪ್ಪು ಸುಲ್ತಾನ್ ಚೌಕ್ ಹತ್ತಿರ ಗಾಂಜಾ ಮಾರಾಟ ಮಾಡುತ್ತಿದ್ದ ಅಬುಶೇಖ್ ಅಲಿಯಾಸ್ ಅಮೀರ್ ಅಹ್ಮದ್ ಅಲಿಯಾಸ್ ಸ್ಪೀಡ್ ಅಬ್ಬು ತಂದೆ ನವಾಬ್ ಶೇಖ್ (30), ಬಸೀರ್ ಖಾನ್ ಅಲಿಯಾಸ್ 92 ತಂದೆ ಹುಸೇನ್ ಖಾನ್ (25) ಎಂಬುವವರನ್ನು ಬಂಧಿಸಿ 1.50 ಲಕ್ಷ ರೂ.ಮೌಲ್ಯದ 1.737 ಕೆ.ಜಿ. ಗಾಂಜಾ ಜಪ್ತಿ ಮಾಡಿ ಆರೋಪಿಯನ್ನು ನ್ಯಾಯಾಂಗ ಒಪ್ಪಿಸಿದೆ.

ಮತ್ತೊಂದು ಪ್ರಕರಣದಲ್ಲಿ ಕಲಬುರಗಿ ಉತ್ತರ ಉಪ ವಿಭಾಗದ ಸಹಾಯಕ ಪೊಲೀಸ್ ಆಯುಕ್ತ ಚಂದ್ರಶೇಖರ ಅವರ ಮಾರ್ಗದರ್ಶನದಲ್ಲಿ ಚೌಕ್ ಪೊಲೀಸ್ ಠಾಣೆ ಪಿಐ ಸೋಮಲಿಂಗ ಕಿರದಳ್ಳಿ, ಪಿಎಸ್ಐ ಶಶಿಕಲಾ, ಎಎಸ್ಐ ಅಶೋಕ ರಾಠೋಡ್, ಸಿಬ್ಬಂದಿಗಳಾದ ಸಂಜೀವಕುಮಾರ, ಶ್ರೀನಿವಾಸ, ಮೋಸಿನ್, ದಯಾನಂದ ಅವರನ್ನು ಒಳಗೊಂಡ ತಂಡ ದಾಳಿ ಮಾಡಿ ನಗರದ ಶೇಖರೋಜಾದಲ್ಲಿ ಗಾಂಜಾ ಮಾರಾಟ ಮಾಡುತ್ತಿದ್ದ ಮೊಹ್ಮದ್ ಚಾಂದ ತಂದೆ ಮೊಹ್ಮದ್ ಪತ್ರುಸಾಬ ಭಾಗವಾನ್ (24) ಎಂಬಾತನನ್ನು ಬಂಧಿಸಿ 1.35 ಲಕ್ಷ ರೂ.ಮೌಲ್ಯದ 1.410 ಕೆಜಿ ಗಾಂಜಾ, 300 ರೂ.ನಗದು ಹಣ ಜಪ್ತಿ ಮಾಡಿದೆ.

# ಬಮೂಲ್ ಅಧ್ಯಕ್ಷರಾಗಿ ಮಾಜಿ ಸಂಸದ ಡಿ.ಕೆ.ಸುರೇಶ್ ಅವಿರೋಧ ಆಯ್ಕೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಜೂ.19: ಸಹಕಾರ ಹಾಲು ಒಕ್ಕೂಟ ದ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನದ ಚುನಾವಣೆಯಲ್ಲಿ ಡಿ.ಕೆ.ಸುರೇಶ್ ಸಂಘದ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಬಮೂಲ್ ಆಡಳಿತ ಮಂಡಳಿ ಅಧ್ಯಕ್ಷ ಸ್ಥಾನಕ್ಕೆ ಡಿ.ಕೆ.ಸುರೇಶ್ ಅವರು ಬೆಂಗಳೂರು ಡೈರಿ ಸರ್ಕಲ್ ಕಚೇರಿಯಲ್ಲಿ ನಾಮಪತ್ರ ಸಲ್ಲಿಸಿದ್ದರು. ಈ ಸ್ಥಾನಕ್ಕೆ ಬೇರೆ ಯಾರೂ ಉಮೇದುವಾರಿಕೆ ಸಲ್ಲಿಸದ ಕಾರಣ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ನಂತರ ಮಾತನಾಡಿದ ಅವರು, ಬೆಂಗಳೂರು ಸಹಕಾರ ಹಾಲು ಒಕ್ಕೂಟ ನಿಯಮಿತ (ಬಮೂಲ್) ನಲ್ಲಿ 16 ನಿರ್ದೇಶಕರ ಪೈಕಿ 14 ಜನ ಚುನಾವಣೆ ಮೂಲಕ ಆರಿಸಲಾಗಿದ್ದು, ಇಬ್ಬರು ಸರ್ಕಾರದಿಂದ ನಾಮನಿರ್ದೇಶನಗೊಂಡಿದ್ದಾರೆ. ಬಮೂಲ್‌ನ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ನನ್ನನ್ನು ಅಧ್ಯಕ್ಷನನ್ನಾಗಿ, ಮಾಗಡಿ ತಾಲೂಕಿನ ಕುದೂರು ರಾಜಣ್ಣ ಅವರನ್ನು ಉಪಾಧ್ಯಕ್ಷರನ್ನಾಗಿ ಎಲ್ಲಾ ನಿರ್ದೇಶಕರು ಅವಿರೋಧವಾಗಿ



ಆಯ್ಕೆ ಮಾಡಿದ್ದಾರೆ. ನಮ್ಮ ಪಕ್ಷದ ಅಧ್ಯಕ್ಷರಾದ ಡಿಸಿಎಂ ಡಿ.ಕೆ.ಶಿವಕುಮಾರ್, ರಾಮನಗರ ಜಿಲ್ಲಾ ಉಸ್ತುವಾರಿ ಸಚಿವರಾದ ರಾಮಲಿಂಗಾರೆಡ್ಡಿ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಹೆಚ್. ಮುನಿಯಪ್ಪ, ಶಾಸಕರಾದ ಬಾಲಕೃಷ್ಣ, ಸಿ.ಪಿ.ಯೋಗೇಶ್ವರ್, ಇಕ್ಬಾಲ್ ಹುಸೇನ್, ಶಿವಣ್ಣ, ಶರತ್ ಬಚ್ಚೇಗೌಡ, ಕೃಷ್ಣ ಬೈರೇಗೌಡರು ಸೇರಿದಂತೆ ಬಮೂಲ್ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಶಾಸಕರ ಸರ್ವಸಮ್ಮತದ ತೀರ್ಮಾನದಂತೆ ನನ್ನನ್ನು ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿದ್ದಾರೆ ಎಂದು ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಎಲ್ಲರಿಗೂ ನಾನು ವೈಯಕ್ತಿಕವಾಗಿ ಧನ್ಯವಾದಗಳನ್ನು ಅರ್ಪಿಸುತ್ತೇನೆ. ಇಂದು ನಡೆದ ಚುನಾವಣೆಯಲ್ಲಿ ಸಹಕಾರ ಸಂಸ್ಥೆ ಜವಾಬ್ದಾರಿಯನ್ನು ನನಗೆ ನೀಡಿದ್ದಾರೆ. ಈ ಒಕ್ಕೂಟದ ಹಾಲು ಉತ್ಪಾದಕರು, ರೈತ ಬಾಂಧವರು ನಮ್ಮ ಮೇಲೆ ನಿರೀಕ್ಷೆ ಇಟ್ಟು ನಮ್ಮ ಅಭ್ಯರ್ಥಿಗಳನ್ನು ಗೆಲ್ಲಿಸಿದ್ದಾರೆ. ಅವರಿಗೂ ಧನ್ಯವಾದ ತಿಳಿಸುತ್ತೇನೆ. ಹಾಲು ಉತ್ಪಾದಕರು, ನಿರ್ದೇಶಕರು ಬದಲಾವಣೆ ತರುವ ನಿರೀಕ್ಷೆ ಹೊಂದಿದ್ದು, ಎಲ್ಲರ ಸಹಕಾರ ಪಡೆದು ಬೆಂಗಳೂರು ಸಹಕಾರ ಹಾಲು ಒಕ್ಕೂಟ ಹಾಗೂ ರೈತರಿಗೆ ನ್ಯಾಯ ಒದಗಿಸುವ ಕೆಲಸವನ್ನು ಪ್ರಾಮಾಣಿಕವಾಗಿ ಮಾಡುತ್ತೇನೆ ಎಂದಿದ್ದಾರೆ.

ಕನಕಪುರ ಹಾಲು ಒಕ್ಕೂಟದಲ್ಲಿ ಇತ್ತೀಚೆಗೆ ಪರಿಸರಸ್ನೇಹಿ ಹಾಲಿನ ಪ್ಯಾಕೆಟ್ ಪರಿಚಯಿಸಿದ್ದೀರಿ. ಅದನ್ನು ಬಮೂಲ್‌ಗೂ ವಿಸ್ತರಣೆ ಮಾಡುತ್ತೀರಾ ಎಂದು ಕೇಳಿದಾಗ, ನಾವು ಪರಿಸರ ಸ್ನೇಹಿ ಹಾಲಿನ ಪ್ಯಾಕೆಟ್ ಅನ್ನು ಪರಿಚಯಿಸಿದ್ದು, ಇದನ್ನು ಬೆಂಗಳೂರಿಗೆ ಮಾತ್ರವಲ್ಲ ಕರ್ನಾಟಕ ರಾಜ್ಯಾದ್ಯಂತ ಪರಿಚಯಿಸುವ ಚಿಂತನೆ ಇದೆ. ಪ್ರಾಯೋಗಿಕವಾಗಿ ಒಂದು ಪಂಚಾಯ್ತಿ ಮಟ್ಟದಲ್ಲಿ ಇದನ್ನು ವಿತರಣೆ ಮಾಡಿದ್ದೇವೆ.

# ಸರ್ಕಾರಿ ಆಸ್ಪತ್ರೆಗಳ ಕಡೆಗೆ ಜನರು ಮುಖ ಮಾಡುವಂತಾಗಲಿ : ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಜೂ.19: ಸರ್ಕಾರಿ ಆಸ್ಪತ್ರೆಗಳ ಕಡೆಗೆ ಜನರು ಮುಖ ಮಾಡುವಂತಾಗಲಿ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ತಿಳಿಸಿದರು.

ಅವರು ಗುರುವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಮಲೇರಿಯಾ ವಿರೋಧಿ ಮಾಸಾಚರಣೆ ಜೂನ್ 2025 ರ ಜಿಲ್ಲಾಮಟ್ಟದ ಅಂತರ ಇಲಾಖಾ ಸಮನ್ವಯ ಸಮಿತಿ ಸಭೆ ಮತ್ತು ತಿವ್ರ ಅತಿಸಾರ ನಿಯಂತ್ರಣ ಪಾಕ್ಷಿಕ 2025 ರ ಅಂತರ ಇಲಾಖಾ ಸಮನ್ವಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಗ್ರಾಮೀಣ ಪ್ರದೇಶದ ಬಡ ಜನರು ಹೆಚ್ಚು ವೆಚ್ಚ ಮಾಡಿ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯಲು ಆಗುವುದಿಲ್ಲ ಆದ್ದರಿಂದ ಸರ್ಕಾರಿ ಆಸ್ಪತ್ರೆಗಳಲ್ಲಿಯೇ ಉತ್ತಮ ಗುಣಮಟ್ಟದ ಆರೋಗ್ಯ



ಸೌಲಭ್ಯಗಳನ್ನು ಒದಗಿಸಬೇಕು ಹಾಗೂ ಆಸ್ಪತ್ರೆಯ ಅಧಿಕಾರಿಗಳು ಜನರೊಂದಿಗೆ ಉತ್ತಮ ಬಾಂಧವ್ಯದೊಂದಿಗೆ ನಡೆದುಕೊಳ್ಳಬೇಕು ಮತ್ತು ಜನರಿಗೆ ಕಾಡುವ ಸಾಮಾನ್ಯ ವಿಷಯವೆಂದರೆ ಸರ್ಕಾರಿ ಆಸ್ಪತ್ರೆಗಳಲ್ಲಿ ಹೆಚ್ಚಿನ ಕಾಳಜಿ ವಹಿಸುವುದಿಲ್ಲ ಎಂಬುದಾಗಿದೆ ಆದರೆ ಇದನ್ನು ನಾವು ಅವರ ಮನಸ್ಸಿನಿಂದ ಹೋಗಲಾಡಿಸಿ ಉತ್ತಮ ಸಹಕಾರದೊಂದಿಗೆ ಗುಣಮಟ್ಟದ ಆರೋಗ್ಯ ಸೌಲಭ್ಯಗಳನ್ನು ಒದಗಿಸಬೇಕು ಎಂದು ತಿಳಿಸಿದರು.

ಈಗಾಗಲೇ ಮಳೆಗಾಲ ಆರಂಭವಾಗಿದ್ದು ರೋಗಗಳು ಹರಡುವ ಸಾಧ್ಯತೆ ಹೆಚ್ಚಾಗಿರುತ್ತದೆ ಆದ್ದರಿಂದ ನಾವು ಸೊಳ್ಳೆ ಉತ್ಪತ್ತಿ ತಾಣಗಳನ್ನು ನಾಶ ಪಡಿಸಿ ಮಲೇರಿಯಾ, ಡೆಂಗ್ಯೂ, ಚಿಕನ್ ಗೂನ್ಯ, ಆನೆಕಾಲು ರೋಗ ಮುಂತಾದವುಗಳನ್ನು ಹರಡುವುದನ್ನು ನಿಯಂತ್ರಿಸಬೇಕು ಮತ್ತು ಹಳ್ಳಿ ಹಳ್ಳಿಗೆ ಭೇಟಿ ನೀಡಿ ಇವುಗಳ ಬಗ್ಗೆ ಜನರಿಗೆ ಅರಿವು ಮೂಡಿಸಬೇಕು ತಿಳಿಸಿದರು. ಶಾಲಾ ಮಕ್ಕಳ, ಅಂಗನವಾಡಿ ಮಕ್ಕಳ ಮತ್ತು ಗರ್ಭಿಣಿಯರನ್ನು ಕಡ್ಡಾಯವಾಗಿ ಆರೋಗ್ಯ ತಪಾಸಣೆ ಶಿಬಿರಗಳನ್ನು ಹಮ್ಮಿಕೊಳ್ಳಬೇಕು ಎಂದು ತಿಳಿಸಿದರು.

ಬೀದರ ಜಿಲ್ಲೆಯನ್ನು ಅನಾಮೀಯಾ ಮುಕ್ತ ಜಿಲ್ಲೆಯನ್ನಾಗಿ ಮಾಡುವ ಅಭಿಯಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು ಅರಿವು ಮೂಡಿಸಲಾಗಿದೆ. ಪೋಷಣ್ ಅಭಿಯಾನ ಯೋಜನೆಯಡಿ ಗರ್ಭಿಣಿ ಮಹಿಳೆಯರಿಗೆ ಮತ್ತು ತಾಯಂದಿರಿಗೆ ಪೌಷ್ಟಿಕ ಆಹಾರ ಒದಗಿಸಲಾಗು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ವಿವಿಧ ರೋಗಗಳ ಜಾಗೃತಿ ಮತ್ತು ಅರಿವು ಮೂಡಿಸುವ ಕರಪತ್ರಗಳನ್ನು ಬಿಡುಗಡೆ ಮಾಡಲಾಯಿತು.

ಈ ಸಭೆಯಲ್ಲಿ ಪ್ರೊಬೇಷನರಿ ಖಂಖ ಅಧಿಕಾರಿ

ರಮ್ಯಾ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಧ್ಯಾನೇಶ್ವರ ನಿರಗುಡೆ, ಜಿಲ್ಲಾ ಕೆ.ಪಿ.ಎಮ್.ಇನೋಡಲ್ ಅಧಿಕಾರಿ ಡಾಕ್ಟರ್ ದಿಲೀಪ್ ಡೋಂಗ್ರೆ, ಜಿಲ್ಲಾ ಆಯುಷ್ ಅಧಿಕಾರಿ ಖುತಿಜಾ ಬೇಗಂ, ತಾಲೂಕು ಆರೋಗ್ಯ ಅಧಿಕಾರಿಗಳಾದ ಡಾ. ಗಾಯತ್ರಿ, ಡಾ. ಸಂಗಾರೆಡ್ಡಿ, ಡಾ. ಶಿವಕುಮಾರ ಸಿದ್ದೇಶ್ವರ, ರವಿ ಕಲಶೆಟ್ಟಿ ಮತ್ತು ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಧೂಮ್ರಪಾನ, ಮದ್ಯಪಾನಕ್ಕಿಂತಲೂ ಮೊಬೈಲ್ ಬಳಕೆ ಅಪಾಯಕಾರಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜೂ.19: ಇಂದಿನ ಮಕ್ಕಳು ಮತ್ತು ಯುವಜನತೆಯನ್ನು ತನ್ನ ಮಾಯಾಜಾಲಕ್ಕೆ ಸಿಲುಕಿಸಿಕೊಂಡಿರುವ ಮೊಬೈಲ್ ಮತ್ತು ಇಂಟರ್ ನೆಟ್ ಧೂಮ್ರಪಾನ, ಮದ್ಯಪಾನಕ್ಕಿಂತಲೂ ಅಪಾಯಕಾರಿಯಾಗಿದ್ದು, ವಿದ್ಯಾರ್ಥಿಗಳು ಅವುಗಳಿಂದ ದೂರವಿರಬೇಕು ಎಂದು ಹೇಳಿದರು. ತಾಲ್ಲೂಕಿನ ಕರಡ್ಯಾಳದ ಚನ್ನಬಸವೇಶ್ವರ ಗುರುಕುಲ ಪ್ರಥಮ ದರ್ಜೆ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ವ್ಯಕ್ತಿತ್ವ ವಿಕಸನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಯುವಕರು ದೇಶದ ಶ್ರೇಷ್ಠ ಮಹನೀಯರಾದ ಅಬ್ದುಲ್ ಕಲಾಂರಂತೆ ಸತ್ ಚಿಂತನೆ, ಸಚ್ಚಾರಿತ್ರ್ಯ, ಆದರ್ಶ ಗುಣಗಳನ್ನು ಮೈಗೂಡಿಸಿಕೊಂಡು ದೇಶದ ಸತ್ಪ್ರಜೆಗಳಾಗಬೇಕು. ವೃತ್ತಿಗಳಲ್ಲಿ ಮೇಲು, ಕೀಳು ಎಂಬ ಭೇದವಿಲ್ಲ. ನಾವು ಮಾಡುವ ಎಲ್ಲ ವೃತ್ತಿಗಳು ಶ್ರೇಷ್ಠವಾಗಿವೆ. ದೇಶಕ್ಕೋಸ್ಕರ ಏನಾದರೂ ಮಾಡಬೇಕು ಎಂಬ ಮನೋಸ್ಥಿತಿ ನಮ್ಮದಾಗಬೇಕು. ನಮ್ಮ ವೃತ್ತಿಯನ್ನು ಮನಸಾಪೂರ್ವಕ ನೆರವೇರಿಸುವ ಮೂಲಕ ದೇಶಕ್ಕೆ ನಮ್ಮದೇಯಾದ ಕೊಡುಗೆ ಸಲ್ಲಿಸಬೇಕು. ಜೀವನದಲ್ಲಿ ಎಲ್ಲಕ್ಕಿಂತ ಹೆಚ್ಚಾಗಿ ಹೆತ್ತವರನ್ನು ಗೌರವಿಸಬೇಕು. ವೈಯಕ್ತಿಕ ನೆಲೆಯಲ್ಲಿ ಮತ್ತು ದೇಶಕ್ಕೆ ಅತಿ ಹೆಚ್ಚು ಪ್ರಾಮಾಣಿಕವಾಗಿರಬೇಕು. ಸಮಯ ಮತ್ತು ಶಿಸ್ತು ಜೀವನದುದ್ದಕ್ಕೂ ಬೆಳೆಸಿಕೊಳ್ಳಬೇಕು. ಸಮಯದ ಸದುಪಯೋಗ ಪಡೆದುಕೊಂಡು ಬದುಕಿನಲ್ಲಿ ಯಶಸ್ಸು ಕಾಣಬೇಕು ಎಂದು ದೃಷ್ಟಾಂತಗಳ ಮೂಲಕ ಮನೆ ಮುಟ್ಟುವಂತೆ ತಿಳಿ ಹೇಳಿದರು. ಹಿರೇಮಠ ಸಂಸ್ಥಾನ ವಿದ್ಯಾಪೀಠದ ನಿರ್ದೇಶಕ ಚೆನ್ನಬಸವಣ್ಣ ಬಳತೆ, ಆಡಳಿತಾಧಿಕಾರಿ ಮೋಹನರೆಡ್ಡಿ ಪ್ರಮುಖರಾದ ಶಿವಾನಂದ ದಾಡಗೆ, ಕೈಲಾಸ ಪಾಟೀಲ, ಪ್ರಾಚಾರ್ಯರಾದ ಕಿರಣ ಸಜ್ಜನಶೆಟ್ಟಿ, ಸುಧಾಕರ ಬಿರಾದಾರ ಇದ್ದರು.

# ಅನುಭವ ಮಂಟಪ 742 ಕೋಟಿ ರೂ.ಪರಿಷ್ಕೃತ ಅಂದಾಜಿಗೆ ಸಂಪುಟ ಅನುಮೋದನೆ ಮುಖ್ಯಮಂತ್ರಿ, ಕಂದಾಯ ಇಲಾಖೆಗೆ ಧನ್ಯವಾದ ಅರ್ಪಿಸಿದ ಈಶ್ವರ ಖಂಡ್ರೆ

ಬೀದರ,ಜೂ.19:ಬಸವಕಲ್ಯಾಣದಲ್ಲಿ ನಿರ್ಮಾಣವಾಗುತ್ತಿರುವ ನೂತನ ಅನುಭವ ಮಂಟಪದ 742 ಕೋಟಿ ರೂ. ಪರಿಷ್ಕೃತ ಅಂದಾಜಿಗೆ ಇಂದು ನಡೆದ ಸಚಿವ ಸಂಪುಟ ಸಭೆ ಅನುಮೋದನೆ ನೀಡಿದ್ದು, ಬೀದರ್ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಕಂದಾಯ ಇಲಾಖೆಗೆ ಧನ್ಯವಾದ ಅರ್ಪಿಸಿದ್ದಾರೆ. ಭೂ ವಿವಾದದಿಂದಾಗಿ ಅನುಭವ ಮಂಟಪಕ್ಕೆ ಆರಂಭದಲ್ಲಿ ನಿರ್ಧರಿಸಲಾಗಿದ್ದ ಸ್ಥಳದಲ್ಲಿ ಕಾಮಗಾರಿ ನಡೆಸಲಾಗದೆ, ಬೇರೆ ಸ್ಥಳದಲ್ಲಿ ಕಾಮಗಾರಿ ಮಾಡಬೇಕಾಗಿ ಬಂದ ಹಿನ್ನೆಲೆಯಲ್ಲಿ ಹಾಗೂ ಜಿಎಸ್ಟಿ ಶೇ.18ಕ್ಕೆ ಏರಿಕೆ ಆದ ಕಾರಣ ಯೋಜನಾ ವೆಚ್ಚ



612 ಕೋಟಿ ರೂ. ಬದಲಾಗಿ 742 ಕೋಟಿ ರೂ.ಗೆ ಹೆಚ್ಚಳವಾಗಿದ್ದು, ಇದಕ್ಕೆ ಇಂದು ನಡೆದ ಸಚಿವ ಸಂಪುಟ ಸಭೆ ಅನುಮೋದನೆ ನೀಡಿದೆ. ಪರಿಷ್ಕೃತ ಅಂದಾಜು ವೆಚ್ಚದಂತೆ 132 ಕೋಟಿ ರೂ. ಹೆಚ್ಚಳವಾಗಿದ್ದು, ಇದಕ್ಕೆ ಅನುಮೋದನೆ ನೀಡಿದ ಸಚಿವ ಸಂಪುಟದ ಎಲ್ಲ ಸಚಿವರಿಗೆ ಮತ್ತು ಭೂಮಿ ನೀಡಿದ ಕಂದಾಯ ಇಲಾಖೆಗೆ ಈಶ್ವರ ಖಂಡ್ರೆ ಧನ್ಯವಾದ ಅರ್ಪಿಸಿದ್ದಾರೆ. 2026ರ ವರ್ಷಾಂತ್ಯದೊಳಗೆ ಕಾಮಗಾರಿ ಪೂರ್ಣಗೊಳಿಸಿ ಮುಖ್ಯಮಂತ್ರಿಗಳ ಅಮೃತ ಹಸ್ತದಿಂದ ಉದ್ಘಾಟನೆ ಮಾಡಿಸಲು ಕಾಮಗಾರಿಗೆ ವೇಗ ನೀಡಲಾಗುವುದು ಎಂದು ಅವರು ತಿಳಿಸಿದ್ದಾರೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.